ಸಂಪಾದಕರು :
ಎಂ.ಎಸ್. ವಿಕಾಸ್

# ಜನತಾವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ಗುರುವಾರ, ಮೇ 02, 2024
ದಾವಣಗೆರೆ, ಪುಟ : 6 ರೂ : 5
ಸಂಪುಟ : 50 ಸಂಚಿಕೆ : 351 RNI : 27369/75

50 1974 2023


janathavani@mac.com
www.janathavani.com
☎ 08192 254736 91642 99999





## ನಿಟುವಳ್ಳಿ ಶ್ರೀ ಕರಿಯಾಂಬಿಕಾ ದೇವಿಯ ದೊಡ್ಡ ಜಾತ್ರಾ ಮಹೋತ್ಸವ

**ದಾವಣಗೆರೆ, ಏ.27- ನಿಟುವಳ್ಳಿ ಶ್ರೀ ದುರ್ಗಾಂಬಿಕಾ ದೇವಸ್ಥಾನ ಟ್ರಸ್ಟ್ ವತಿಯಿಂದ ಶ್ರೀ ಕರಿಯಾಂಬಿಕಾ ದೇವಿಯ ಜಾತ್ರಾ ಮಹೋತ್ಸವ ವೈಭವದಿಂದ ಜರುಗಿತು. ಬುಧವಾರ ಅಮ್ಮನವರ ದೊಡ್ಡಜಾತ್ರೆ ನಡೆಯಿತು. ನಿಟುವಳ್ಳಿ ದುರ್ಗಾಂಬಿಕಾ ದೇವಸ್ಥಾನದ ಮುಂಭಾಗ ಪೆಂಡಾಲ್ (ಚಿತ್ರ 1), ಕರಿಯಾಂಬಿಕಾ ದೇವಿಗೆ ಭಕ್ತರು ಉಡಿ ನೀಡಿರುವುದು (ಚಿತ್ರ 2)**

# ಕೆಂಡವಾಗುತ್ತಿರುವ ಕರುನಾಡು ಆರು ಜಿಲ್ಲೆಗಳಿಗೆ ಕೆಂಪು ಎಚ್ಚರಿಕೆ

ಬೆಂಗಳೂರು, ಮೇ 1 – ರಾಜ್ಯದ ಆರು ಜಿಲ್ಲೆಗಳಲ್ಲಿ ತಾಪಮಾನ 46 ಡಿಗ್ರಿ ಸೆಲ್ಸಿಯಸ್ ದಾಟಬಹುದು ಎಂದು ರಾಜ್ಯ ವಿಕೋಪ ನಿರ್ವಹಣಾ ಪ್ರಾಧಿಕಾರ (ಕೆ.ಎಸ್.ಎನ್.ಡಿ.ಎಂ.ಸಿ.) ಕೆಂಪು ಎಚ್ಚರಿಕೆ ನೀಡಿದೆ.

ಎಸ್.ಹೆಚ್.ಎ.ಆರ್. - ಇಸ್ರೋ ಮಾಹಿತಿ ಆಧರಿಸಿ ಈ ಎಚ್ಚರಿಕೆ ನೀಡಲಾಗಿದೆ ಮೇ 1ರಿಂದ ಮೇ 9ರ ನಡುವೆ ಬಾಗಲಕೋಟೆ, ಬೆಳಗಾವಿ, ಧಾರವಾಡ, ಗದಗ, ಹಾವೇರಿ ಹಾಗೂ ಕೊಪ್ಪಳ ಜಿಲ್ಲೆಗಳಲ್ಲಿ ಹೆಚ್ಚಿನ ತಾಪಮಾನ ಕಂಡು ಬರಲಿದೆ ಎಂದು ತಿಳಿಸಲಾಗಿದೆ.

ಉತ್ತರ ಕರ್ನಾಟಕದ ಒಳನಾಡಿನ ರಾಯಚೂರು, ಕಲಬುರಗಿ, ಯಾದಗಿರಿ, ಬಳ್ಳಾರಿ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಮೇ 6ರವರೆಗೆ 40ರಿಂದ 46 ಡಿಗ್ರಿ ಸೆಲ್ಸಿಯಸ್ ತಾಪಮಾನ ಕಂಡು ಬರಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಉಳಿದಂತೆ ಬಹುತೇಕ ದಕ್ಷಿಣ ಒಳನಾಡು ಜಿಲ್ಲೆಗಳು ಹಾಗೂ ದಕ್ಷಿಣ ಕನ್ನಡದಲ್ಲಿ ಗರಿಷ್ಠ ತಾಪಮಾನ 40ರಿಂದ 44 ಡಿಗ್ರಿ ಸೆಲ್ಸಿಯಸ್ ಇರಲಿದೆ ಎಂದು ತಿಳಿಸಲಾಗಿದೆ.

ಮೇ 7ರ ನಂತರ ಗರಿಷ್ಠ ತಾಪಮಾನ 2ರಿಂದ 3 ಡಿಗ್ರಿ ಸೆಲ್ಸಿಯಸ್ ಕಡಿಮೆಯಾಗಲಿದೆ ಎಂದು ಕೆ.ಎಸ್.ಎನ್.ಡಿ.ಎಂ.ಸಿ. ತಿಳಿಸಿದೆ.

### ಈ ತಿಂಗಳು ದೇಶದ ಬಹುತೇಕ ಭಾಗದಲ್ಲಿ ಹೆಚ್ಚಿನ ತಾಪಮಾನ, ಹೆಚ್ಚು ಬಿಸಿಗಾಳಿ



ನವದೆಹಲಿ, ಮೇ 1 -ಮೇ ತಿಂಗಳಲ್ಲಿ ದೇಶದ ಬಹುತೇಕ ಭಾಗಗಳಲ್ಲಿ ವಾಡಿಕೆಗಿಂತ ಹೆಚ್ಚಿನ ತಾಪಮಾನ ಇರಲಿದೆ. ಹೆಚ್ಚು ದಿನಗಳ ಕಾಲ ಬಿಸಿಗಾಳಿಯ ವಾತಾವರಣ ಇರಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿರುವ ಹವಾಮಾನ ಇಲಾಖೆಯ ಮುಖ್ಯಸ್ಥ ಮೃತ್ಯುಂಜಯ ಮೊಹಾಪಾತ್ರ, ದಕ್ಷಿಣ ರಾಜಸ್ಥಾನ, ಪಶ್ಚಿಮ ಮಧ್ಯ ಪ್ರದೇಶ, ವಿದರ್ಭ, ಮರಾಠವಾಡ ಹಾಗೂ ಗುಜರಾತ್ (5ನೇ ಪುಟಕ್ಕೆ)

# ಪೆನ್ ಡ್ರೈವ್ ಪ್ರಕರಣ : ಸಂತ್ರಸ್ತೆಯರ ರಕ್ಷಣೆಗೆ ಸರ್ಕಾರ ಬದ್ಧ : ಗೃಹ ಸಚಿವ ಜಿ. ಪರಮೇಶ್ವರ




ದಾವಣಗೆರೆ, ಮೇ 1- ಸಂಸದ ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಸಂತ್ರಸ್ಥೆಯರ ರಕ್ಷಣೆಗೆ ರಾಜ್ಯ ಸರ್ಕಾರ ಬದ್ಧವಾಗಿದೆ. ಯಾರಿಗೆ ರಕ್ಷಣೆ ಬೇಕೋ ಅವರಿಗೆಲ್ಲ ರಕ್ಷಣೆ ಕೊಡುತ್ತೇವೆ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ಬುಧವಾರ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ನಿವಾಸದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಪ್ರಕರಣದಲ್ಲಿ ರಾಜ್ಯ ಸರ್ಕಾರ ಯಾವುದೇ ವಿಳಂಬ ಮಾಡಿಲ್ಲ. ರಾಜ್ಯ ಮಹಿಳಾ ಆಯೋಗದಿಂದ ಸರ್ಕಾರಕ್ಕೆ ದೂರು ಪತ್ರ ಬಂದ ತಕ್ಷಣ ಕ್ರಮವಹಿಸಿ, ತನಿಖೆಗೆ ಎಸ್ಐಟಿಗೆ ವಹಿಸಲಾಗಿದೆ. ತನಿಖೆ ನಡೆಯುತ್ತಿದೆ ಎಂದು ಸ್ಪಷ್ಟಪಡಿಸಿದರು.

ಶೀಘ್ರವೇ ಸರ್ಕಾರಕ್ಕೆ ತನಿಖಾ ವರದಿ ಕೊಡಲು ಸೂಚಿಸಲಾಗಿದೆ. (4ನೇ ಪುಟಕ್ಕೆ)

### ಮೋದಿಯನ್ನು ಬದಲಿಸುವ ಅಲೆ ಇದೆ

ದೇಶದಲ್ಲಿ ಬದಲಾವಣೆ ಗಾಳಿ ಬೀಸುತ್ತಿದೆ. ರಾಜ್ಯದಲ್ಲಿ ಯಾವ ಮೋದಿ ಅಲೆಯೂ ಇಲ್ಲ. ಮೋದಿಯನ್ನು (4ನೇ ಪುಟಕ್ಕೆ)

# ಪಂಚಮಸಾಲಿ ಮೀಸಲಾತಿ ಕೇಳಲು ಕಾಂಗ್ರೆಸ್ ಸಚಿವ, ಶಾಸಕರಿಗೆ ದಿಟ್ಟತನವಿಲ್ಲ : ಯತ್ನಾಳ್




ದಾವಣಗೆರೆ, ಮೇ 1 - ಪಂಚಮಸಾಲಿ ಸಮಾಜಕ್ಕೆ ಮೀಸಲಾತಿ ಕಲ್ಪಿಸುವ ಕುರಿತ ಬೇಡಿಕೆಯನ್ನು ಆಲಿಸಲು ಸಮಯ ನೀಡಲೂ ಸಹ ಮುಖ್ಯಮಂತ್ರಿ ಸಿದ್ದರಾಮಯ್ಯ ಒಲವು ತೋರಲಿಲ್ಲ. ಕಾಂಗ್ರೆಸ್‌ನಲ್ಲಿರುವ ಪಂಚಮಸಾಲಿ ಜನಪ್ರತಿನಿಧಿಗಳೂ ಮುಖ್ಯಮಂತ್ರಿ ಎದುರು ದಿಟ್ಟವಾಗಿ ಮಾತನಾಡುತ್ತಿಲ್ಲ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಆರೋಪಿಸಿದ್ದಾರೆ.

ದಾವಣಗೆರೆ ಜಿಲ್ಲಾ ಲಿಂಗಾಯತ ಪಂಚಮಸಾಲಿ ಸಮಾಜದ ವತಿಯಿಂದ ಬಂಟರ ಭವನದಲ್ಲಿ ಆಯೋಜಿಸಲಾಗಿದ್ದ ಲಿಂಗಾಯತ ಪಂಚಮಸಾಲಿ ಸಮಾಜದ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬೆಳಗಾವಿಯ ಸುವರ್ಣ ಸೌಧದಲ್ಲಿ ವಿಧಾನ ಸಭಾ ಅಧಿವೇಶನದ ಸಮಯದಲ್ಲಿ ಮೀಸಲಾತಿ ಕುರಿತು ಸಿದ್ದರಾಮಯ್ಯ ಜೊತೆ (5ನೇ ಪುಟಕ್ಕೆ)

### ಸಿದ್ದೇಶ್ವರ ಆಕ್ರೋಶ, ಗದ್ಗದಿತರಾದ ಶಿವಶಂಕರ್

ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ್ ಅವರ ಪಾನ್ ಮಸಾಲಾ ಉದ್ಯಮ ನಡೆಸುತ್ತಿರುವ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವ (5ನೇ ಪುಟಕ್ಕೆ)

## ಚೆಕ್ ಪೋಸ್ಟ್ ಕರ್ತವ್ಯ ನಿರ್ಲಕ್ಷ್ಯ ಎಇಇ, ಪಂಚಾಯ್ತಿ ಬಿಲ್ ಕಲೆಕ್ಟರ್ ಅಮಾನತು

ದಾವಣಗೆರೆ, ಮೇ 1- ಚೆಕ್‌ಪೋಸ್ಟ್‌ನಲ್ಲಿ ಕರ್ತವ್ಯ ನಿರ್ವಹಿಸದೇ ನಿರ್ಲಕ್ಷ್ಯ ತೋರಿದ ಹೊನ್ನಾಳಿ ವಿಭಾಗದ ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಕಣವಪ್ಪ ಮತ್ತು ನ್ಯಾಮತಿ ತಾಲ್ಲೂಕು ಯರಗನಾಳ್ ಗ್ರಾಮ ಪಂಚಾಯಿತಿ ಬಿಲ್ ಕಲೆಕ್ಟರ್ ಲೋಕೇಶ್ ನಾಯ್ಕ ಅವರನ್ನು ಅಮಾನತು ಮಾಡಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ಎಂ.ವಿ ವೆಂಕಟೇಶ್ ಆದೇಶಿಸಿದ್ದಾರೆ.

ಲೋಕಸಭಾ ಚುನಾವಣೆ ನಡೆಯುತ್ತಿದ್ದು, ಮೇ 7 ರಂದು ಮತದಾನ ನಡೆಯಲಿದೆ. ಮಾದರಿ ನೀತಿ ಸಂಹಿತೆಯನ್ನು ಜಾರಿಗೆ ತರಲು ಜಿಲ್ಲೆಯಾದ್ಯಂತ 32 ಚೆಕ್‌ಪೋಸ್ಟ್‌ಗಳನ್ನು ಸ್ಥಾಪಿಸಿ, ಮೂರು ಪಾಳಿಯಲ್ಲಿ ಕರ್ತವ್ಯ ನಿರ್ವಹಿಸಲಾಗುತ್ತಿದೆ. ದಾವಣಗೆರೆ, ಶಿವಮೊಗ್ಗದ ಅಂತರ್ ಜಿಲ್ಲಾ ಚೆಕ್‌ಪೋಸ್ಟ್ ಜೀನಹಳ್ಳಿ ಚೆಕ್‌ಪೋಸ್ಟ್‌ಗೆ ಸದರಿ ಅಧಿಕಾರಿ, ಸಿಬ್ಬಂದಿಗಳನ್ನು ನೇಮಕ ಮಾಡಲಾಗಿತ್ತು.

ದಾವಣಗೆರೆ ಕ್ಷೇತ್ರಕ್ಕೆ ಆಯೋಗದಿಂದ ನೇಮಕವಾಗಿರುವ ವಿಶೇಷ ವೆಚ್ಚ ವೀಕ್ಷಕರಾದ ಪ್ರತಿಭಾಸಿಂಗ್ ಮತ್ತು ಹೊನ್ನಾಳಿ ಉಪವಿಭಾಗಾಧಿಕಾರಿ ಹಾಗೂ ಸಹಾಯಕ ಚುನಾವಣಾಧಿಕಾರಿ ಅಭಿಷೇಕ್ ಅವರು ಏಪ್ರಿಲ್ 29 ರಂದು ಮಧ್ಯಾಹ್ನ 2.25 ರ ಸಮಯದಲ್ಲಿ ಅನಿರೀಕ್ಷಿತವಾಗಿ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿದಾಗ ಚೆಕ್‌ಪೋಸ್ಟ್‌ನ ಕರ್ತವ್ಯದಲ್ಲಿ ಯಾರೂ ಸಹ ಇರಲಿಲ್ಲ. ಈ ಬಗ್ಗೆ ದೂರವಾಣಿ ಕರೆ ಮಾಡಿ ತಿಳಿಸಿದ್ದರೂ ಕರ್ತವ್ಯಕ್ಕೆ ಹಾಜರಾಗಿರಲಿಲ್ಲ ಎಂಬ ಆರೋಪದ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಈ ಕ್ರಮ ಕೈಗೊಂಡಿದ್ದಾರೆ.

## ಪ್ರಜ್ವಲ್ ಪ್ರಕರಣ : ರೇವಣ್ಣಗೆ ಜೆಡಿಎಸ್‌ನಿಂದ ನೋಟಿಸ್

ಬೆಂಗಳೂರು, ಮೇ 1 - ಹಾಸನ ಲೋಕಸಭಾ ಕ್ಷೇತ್ರದಲ್ಲಿ ಬಹಿರಂಗಗೊಂಡ ಪೆನ್ ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ಆರೋಪ ಹೊತ್ತಿರುವ ಮಾಜಿ ಸಚಿವ ಹೆಚ್.ಡಿ.ರೇವಣ್ಣ ಅವರಿಂದ ವಿವರಣೆ ಕೋರಿ ಜೆಡಿಎಸ್ ಶೋಕಾಸ್ ನೋಟೀಸ್ ಜಾರಿ ಮಾಡಿದೆ.

ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ, ಪಕ್ಷದ ಕೋರ್ ಕಮಿಟಿ ಅಧ್ಯಕ್ಷ ಹಾಗೂ ಮಾಜಿ ಸಚಿವ ಜಿ.ಟಿ.ದೇವೇಗೌಡರ ಅಧ್ಯಕ್ಷತೆಯಲ್ಲಿ ನಿನ್ನೆ ಹುಬ್ಬಳ್ಳಿಯಲ್ಲಿ ನಡೆದ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಗಿದೆ.

ಪ್ರಮುಖ ಆರೋಪಿ ಸಂಸದ ಪ್ರಜ್ವಲ್ ರೇವಣ್ಣ ಅವರನ್ನು ಈಗಾಗಲೇ ಪಕ್ಷದಿಂದ ಅಮಾನತುಗೊಳಿಸಲಾಗಿದೆ.

ಅವರನ್ನು ಪಕ್ಷದಿಂದ ಉಚ್ಚಾಟಿಸುವ ಬಗ್ಗೆ ಸಭೆಯಲ್ಲಿ ಚರ್ಚೆಯಾದರೂ, ಅವರು ಲೋಕಸಭಾ ಸದಸ್ಯರಾಗಿರುವುದರಿಂದ ಅವರನ್ನು (5ನೇ ಪುಟಕ್ಕೆ)

## ಏಪ್ರಿಲ್‌ನಲ್ಲಿ 2.10 ಲಕ್ಷ ಕೋಟಿ ರೂ.ಗಳಿಗೆ ತಲುಪಿದ ಜಿ.ಎಸ್.ಟಿ.

ನವದೆಹಲಿ, ಮೇ 1 – ಜಿ.ಎಸ್.ಟಿ. ಸಂಗ್ರಹ ಏಪ್ರಿಲ್ ತಿಂಗಳಲ್ಲಿ ಶೇ.12.4ರಷ್ಟು ಹೆಚ್ಚಾಗಿ 2.10 ಲಕ್ಷ ಕೋಟಿ ರೂ.ಗಳಿಗೆ ತಲುಪಿದೆ. ಈ ವರ್ಷ ಮೊದಲ ಬಾರಿಗೆ ಜಿ.ಎಸ್.ಟಿ. ಸಂಗ್ರಹ 2 ಲಕ್ಷ ಕೋಟಿ ರೂ. ದಾಟಿದೆ. ಕಳೆದ ವರ್ಷ ಇದೇ ತಿಂಗಳಲ್ಲಿ ಜಿ.ಎಸ್.ಟಿ. ಸಂಗ್ರಹ 1.87 ಲಕ್ಷ ಕೋಟಿ ರೂ. ಆಗಿತ್ತು. ಮಾರ್ಚ್ ತಿಂಗಳಲ್ಲಿ ಜಿ.ಎಸ್.ಟಿ. ಸಂಗ್ರಹ 1.78 ಲಕ್ಷ ಕೋಟಿ ರೂ. ಆಗಿತ್ತು.


**50 ಸುವರ್ಣ ಮಹೋತ್ಸವ**

**50ನೇ ವರ್ಷದ ವಿವಾಹ ವಾರ್ಷಿಕೋತ್ಸವದ ಶುಭಾಶಯಗಳು**




50ನೇ ವರ್ಷದ ವಿವಾಹ ವಾರ್ಷಿಕೋತ್ಸವ ಆಚರಿಸುತ್ತಿರುವ
**ಬಿ.ಕಲ್ಪನಹಳ್ಳಿ ಶ್ರೀ ಕೆ.ಕೆ. ಜಯಪ್ಪ ಮತ್ತು ಶ್ರೀಮತಿ ಪ್ರೇಮ**
ದಂಪತಿಗಳಿಗೆ ಹಾರ್ದಿಕ ಶುಭಾಶಯಗಳು.

ಶುಭ ಕೋರುವವರು :
**ಮಕ್ಕಳು, ಅಳಿಯಂದಿರು, ಮೊಮ್ಮಕ್ಕಳು, ಬಂಧುಗಳು, ಹಿತೈಷಿಗಳು ಮತ್ತು ಬಂಧು ಮಿತ್ರರು.**



**ಆನಂದ್ ವಸತಿ ಗೃಹ ಉದ್ಘಾಟನೆ**




ಆನಂದ್ ವಸತಿ ಗೃಹದ ಉದ್ಘಾಟನಾ ಸಮಾರಂಭವನ್ನು 3.05.2024ರ ಶುಕ್ರವಾರ ಅಶೋಕ ರಸ್ತೆಯಲ್ಲಿ ಹೊಸದಾಗಿ ನವೀಕರಿಸಲಾದ
**ಆನಂದ್ ಲಾಡ್ಜ್‌ನಲ್ಲಿ**
ಕೈಗೆಟುಕುವ ದರದಲ್ಲಿ ಹೋಟೆಲ್ ಕೊಠಡಿಗಳು ಲಭ್ಯವಿವೆ. ಸಿಂಗಲ್ ಬೆಡ್ ರೂಮ್‌ಗಳು, ಡಬಲ್ ಬೆಡ್ ರೂಮ್‌ಗಳು, ಡೀಲಕ್ಸ್ ಎಸಿ ರೂಮ್‌ಗಳು ವ್ಯಾಪಾರದ ತಂಗುವಿಕೆಗಳಿಗೆ ಸೂಕ್ತವಾಗಿರುತ್ತದೆ ಮತ್ತು ದೀರ್ಘಾವಧಿಯ ತಂಗುವಿಕೆಗಳು ಕಡಿಮೆ ಬೆಲೆಯಲ್ಲಿ ಲಭ್ಯವಿವೆ.

**ಸೌಲಭ್ಯಗಳು**
- ಏಕ ಮಲಗುವ ಕೋಣೆಗಳು
- ಡಬಲ್ ಮಲಗುವ ಕೋಣೆಗಳು
- ಟ್ರಿಪಲ್ ಮಲಗುವ ಕೋಣೆಗಳು
- ಎಸಿ ಕೊಠಡಿಗಳು
- ಬಿಸಿನೀರಿನ ಪೂರೈಕೆ
- ಪವರ್ ಬ್ಯಾಕಪ್
- ಲಿಫ್ಟ್ ನಿಬಂಧನೆ

ಬುಕ್ಕಿಂಗ್‌ಗಾಗಿ ಸಂಪರ್ಕಿಸಿ.
ಫೋ. : 08192-468743
ವಾಟ್ಸ್ಯಾಪ್ ನಂ.
ಮೊ : 9110466412


**ಕೈಲಾಸ ಸಮಾರಾಧನೆ ಆಹ್ವಾನ ಪತ್ರಿಕೆ**



ಜನನ : 11.12.1948 ನಿಧನ : 28.04.2024

॥ ಶ್ರೀ ಅಬಲೂರು ಬಸವೇಶ್ವರ ಪ್ರಸನ್ನ ॥
ದಾವಣಗೆರೆ ಸಿಟಿ, ಹಾಸಭಾವಿ ಸರ್ಕಲ್ ವಾಸಿ
**ಶ್ರೀ ಎಂ.ಜಿ. ಬಸವರಾಜ್ ಮತ್ತು ಸಹೋದರ**
ಇವರು ಮಾಡುವ ವಿಜ್ಞಾಪನೆಗಳು.
ದಿನಾಂಕ 28-04-2024ನೇ ಭಾನುವಾರ ಸಂಜೆ 4-52 ಕ್ಕೆ ನಮ್ಮ ಪೂಜ್ಯ ಸಹೋದರನಾದ
**ಶ್ರೀ ಎಂ.ಜಿ. ರಾಜಣ್ಣನವರು**
ಮಾಲೀಕರು: ಉಮಾ ಟ್ರೇಡರ್ಸ್ ಮತ್ತು ಮಾಡಾಳ್ ಸ್ಟೀಲ್ಸ್
(ದಿ॥ ಶ್ರೀ ಮಾಡಾಳ ಗಂಗಪ್ಪ ಇವರ ಮಗ)
ಇವರು ಶಿವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ
**'ಕೈಲಾಸ ಸಮಾರಾಧನೆ'ಯನ್ನು**
ದಿನಾಂಕ 02-05-2024ನೇ ಗುರುವಾರ ಬೆಳಿಗ್ಗೆ 10.30 ರಿಂದ
**ದಾವಣಗೆರೆ ಜಿಲ್ಲಾ ನಿವೃತ್ತ ನೌಕರರ ಸಮುದಾಯ ಭವನ,**
ಎಂ.ಸಿ.ಸಿ. ಬಿ. ಬ್ಲಾಕ್, ದವನ್ ಕಾಲೇಜ್ ಹತ್ತಿರ, ದಾವಣಗೆರೆ ಇಲ್ಲಿ ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಶಾಂತಿ ಕೋರಬೇಕಾಗಿ ವಿನಂತಿ.

ಇಂತಿ ದುಃಖತಪ್ತರು : **ಶ್ರೀ ಎಂ.ಜಿ. ಬಸವರಾಜ್ ಮತ್ತು ಸಹೋದರ, ಮಕ್ಕಳು, ಮೊಮ್ಮಕ್ಕಳು**

ಮೊ. : 63621 55306, 98448 65986.
ವಿಶೇಷ ಸೂಚನೆ : ಆಹ್ವಾನ ಪತ್ರಿಕೆ ತಲುಪದೇ ಇದ್ದವರು ಇದನ್ನೇ ಆಹ್ವಾನವೆಂದು ಭಾವಿಸಿ, ಆಗಮಿಸಬೇಕಾಗಿ ವಿನಂತಿ.

**ಭಾವಪೂರ್ಣ ಶ್ರದ್ಧಾಂಜಲಿ**



ದಿನಾಂಕ 01-05-2024ರಂದು ನಿಧನರಾದ
ಕುರುಹಿನಶೆಟ್ಟಿ ಸಮಾಜದ ಹಿರಿಯರೂ ಹಾಗೂ ಸಮಾಜದ ಉಪಾಧ್ಯಕ್ಷರಾದ
**ಶ್ರೀ ನಿಬಗೂರು ತಿಪ್ಪೇಸ್ವಾಮಿ**
ಅವರಿಗೆ ಭಾವಪೂರ್ಣ ಶ್ರದ್ಧಾಂಜಲಿ. ಮೃತರು ಕುರುಹಿನಶೆಟ್ಟಿ ಸಮಾಜಕ್ಕೆ ಅಪಾರವಾಗಿ ತನು-ಮನ-ಧನದಿಂದ ಸೇವೆ ಸಲ್ಲಿಸಿದ್ದು, ಅವರ ಸಾಮಾಜಿಕ ಸೇವೆ ಶ್ಲಾಘನೀಯ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಹಾಗೂ ಅವರ ಅಗಲಿಕೆಯ ದುಃಖ ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ಕರುಣಿಸಲಿ ಎಂದು ಭಗವಂತನಲ್ಲಿ ಪ್ರಾರ್ಥಿಸುತ್ತೇವೆ.

ಅಧ್ಯಕ್ಷರು ಮತ್ತು ಪದಾಧಿಕಾರಿಗಳು
**ಕುರುಹಿನಶೆಟ್ಟಿ ಸಮಾಜ, ದಾವಣಗೆರೆ.**

**ಜಗಳೂರು ಅಕ್ಕಮಹಾದೇವಿ ನಿಧನ**



ದಾವಣಗೆರೆ ಭಾರತ್ ಕಾಲೋನಿ ಜಗಳೂರು ಮಿಲ್ ಕಾಂಪೌಂಡ್‌ನಲ್ಲಿರುವ ನಿವಾಸಿ ದಿ. ಜಗಳೂರು ಬಸವರಾಜಪ್ಪನವರ ಧರ್ಮಪತ್ನಿ
**ಶ್ರೀಮತಿ ಜೆ.ಬಿ. ಅಕ್ಕಮಹಾದೇವಿ**
ಇವರು ದಿನಾಂಕ 1.5.2024ರ ಬುಧವಾರ ಮಧ್ಯಾಹ್ನ 12.15ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ.

ಮೃತರಿಗೆ 74 ವರ್ಷ ವಯಸ್ಸಾಗಿತ್ತು. ಮಕ್ಕಳು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 02.05.2024ರ ಗುರುವಾರ ಬೆಳಿಗ್ಗೆ 11.30ಕ್ಕೆ ಗಾಂಧಿನಗರದ ವೀರಶೈವ ಹಿಂದೂ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು.

ದುಃಖತಪ್ತರು :
ಜಗಳೂರು ವಿಶ್ವನಾಥ್, ಮೊ : 94487 54157

# ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ಶಿಕ್ಷಣ, ಹೈಟೆಕ್ ಶಾಲೆಗಳಿಗೆ ಆದ್ಯತೆ: ವಿನಯ್ ಕುಮಾರ್ ಭರವಸೆ



ಹರಿಹರ, ಮೇ 1- ಕಳೆದ 30ರಿಂದ 35 ವರ್ಷಗಳಿಂದ ಶಾಸಕರು, ಸಚಿವರು, ಸಂಸದರಾದವರು ಶಿಕ್ಷಣಕ್ಕೆ ಹೆಚ್ಚಿನ ಪ್ರಾತಿನಿಧ್ಯ ನೀಡಿಲ್ಲ. ಬಡವರ ಮಕ್ಕಳಿಗೆ ಹೈಟೆಕ್ ಶಾಲೆಗಳ ವ್ಯವಸ್ಥೆ ಮಾಡಿಕೊಟ್ಟಿಲ್ಲ. ಪೋಷಕರ ಕನಸು ನನಸಾಗಬೇಕಾದರೆ ಮೂಲಭೂತ ಸೌಲಭ್ಯಗಳುಳ್ಳ ಉತ್ತಮ ಗುಣಮಟ್ಟದ ಶಿಕ್ಷಣ ಸಿಗುವಂತಾಗಬೇಕು. ಆಗ ಮಾತ್ರ ಮಕ್ಕಳ ಭವಿಷ್ಯ ಉಜ್ವಲವಾಗಿರುತ್ತದೆ. ಲೋಕಸಭೆಗೆ ನನ್ನನ್ನು ಕಳುಹಿಸಿಕೊಡಿ. ಇದನ್ನು ನಾನು ಮಾಡಿ ತೋರಿಸುತ್ತೇನೆ ಎಂದು ದಾವಣಗೆರೆ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಜಿ. ಬಿ. ವಿನಯ್ ಕುಮಾರ್ ಭರವಸೆ ನೀಡಿದರು.

ಹರಿಹರ ತಾಲ್ಲೂಕಿನ ಬೇವಿನಹಳ್ಳಿ, ಬನ್ನಿಕೋಡು, ಸಲಗನಹಳ್ಳಿ ಗ್ರಾಮದಲ್ಲಿ ಭರ್ಜರಿ ಪ್ರಚಾರ ನಡೆಸಿದರು. ಇದೊಂದು ಬಾರಿ ಅವಕಾಶ ನೀಡುವಂತೆ ಮನವಿ ಮಾಡಿದರು.

ಬೇವಿನಹಳ್ಳಿಯಲ್ಲಿಯೂ ಭರ್ಜರಿ ರೋಡ್ ಶೋ ನಡೆಸಿದರು. ಈ ವೇಳೆ ಬೇವಿನಹಳ್ಳಿ ಗ್ರಾಮದ ಬಿ. ಎಂ. ನಾಗರಾಜ್, ರವಿ, ರೇವಣಸಿದ್ಧಪ್ಪ, ಗೌಡರ್ ಸಂತೋಷ್, ಸಿದ್ಧಪ್ಪ, ಬಿ. ಜಿ. ರೇವಣಸಿದ್ಧಪ್ಪ ಹಾಜರಿದ್ದರು.

ಬನ್ನಿಕೋಡು ಗ್ರಾಮದಲ್ಲಿ ಗ್ರಾಮಸ್ಥರನ್ನುದ್ದೇಶಿಸಿ ಮಾತನಾಡಿದ ಅವರು, ನಾನು ಕೇವಲ ಭರವಸೆ ಕೊಟ್ಟು ಹೋಗುವವನಲ್ಲ. ಕೊಟ್ಟ ಭರವಸೆ ಈಡೇರಿಸುವವನು. ನಿಮ್ಮ ಮಕ್ಕಳು ಉನ್ನತ ಅಧಿಕಾರಿಗಳಾಗಬೇಕು. ನಿಮ್ಮ ಊರಿಗೆ ಒಳ್ಳೆಯ ಹೆಸರು ತರುವಂತಾಗುವ ನಿಟ್ಟಿನಲ್ಲಿ ಕಾರ್ಯ ನಿರ್ವಹಿಸುತ್ತೇನೆ ಎಂದು ಹೇಳಿದರು.

ಅನುದಾನ, ಕೈಗಾರಿಕೆಗಳು, ಶಿಕ್ಷಣ ಸಂಸ್ಥೆಗಳು ಸೇರಿದಂತೆ ಯಾವ ಕೆಲಸವನ್ನಾದರೂ ಮಾಡಿಸಿಕೊಂಡು ಬರುವ ಛಾತಿ ಸಂಸದರಿಗೆ ಇರಬೇಕು. 20 ವರ್ಷದಿಂದ ಜಿ. ಎಂ. ಸಿದ್ದೇಶ್ವರ ಅವರನ್ನು ಆಯ್ಕೆ ಮಾಡಿದ್ದೀರಾ. ಎಷ್ಟೋ ಮಂದಿಗೆ ಎಂಪಿ ಯಾರೂ ಅಂತಾನೇ ಗೊತ್ತಿಲ್ಲ ಎಂದು ಹೇಳಿದರು.

ಹರಿಹರ ತಾಲ್ಲೂಕಿನ ಸಲಗನಹಳ್ಳಿ ಗ್ರಾಮದಲ್ಲೂ ವಿನಯ್ ಕುಮಾರ್ ಮತ ಯಾಚಿಸಿದರು. ಸಲಗನಹಳ್ಳಿ ಗ್ರಾಮದ ಚಂದ್ರಪ್ಪ ಹರಿಹರ, ಕುರಿಯಾರ ಬಸಪ್ಪ, ಅರಲೀಪುರ ಬೀರಪ್ಪ, ನಿರ್ಗನಳ್ಳಿ ನಾಗಪ್ಪ, ಹೆಚ್. ಶಿವಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

# ಹರಿಹರ: ಮೂಲಭೂತ ಸೌಕರ್ಯಗಳ ಕೊರತೆ ; 1356 ಮತದಾರರು ಚುನಾವಣಾ ಬಹಿಷ್ಕಾರಕ್ಕೆ ತೀರ್ಮಾನ




ಹರಿಹರ, ಮೇ 1- ನಗರದ 10ನೇ ವಾರ್ಡಿನ ವಿನಾಯಕ ನಗರ, ಭಾರತ್ ಆಯಿಲ್ ಮಿಲ್ ಕಾಂಪೌಂಡ್ ಹಾಗೂ ಪೌರಕಾರ್ಮಿಕರ ಕಾಲೋನಿಗಳಲ್ಲಿ ಮೂಲಭೂತ ಸೌಕರ್ಯಗಳು ಸರಿಯಾಗಿ ಇಲ್ಲದೇ ಇರುವುದರಿಂದ ಬರುವ ಮೇ 7 ರಂದು ನಡೆಯುವ ಲೋಕಸಭಾ ಚುನಾವಣೆಯ ಮತದಾನದ ದಿನದಂದು ಮತದಾನದ ಮಾಡದೇ ಬಹಿಷ್ಕಾರ ಹಾಕುವುದಾಗಿ ಬಡಾವಣೆಯ ಮುಖಂಡ ಹೆಚ್.ಕೆ.ಮೂರ್ತಿ ಮತ್ತು ಕೃಷ್ಣ ತಿಳಿಸಿದರು.

ಪತ್ರಿಕಾಭವನದಲ್ಲಿ ನಡೆದ ಪತ್ರಿಕಾಗೋಷ್ಠಿ ಯಲ್ಲಿ ಮಾತನಾಡಿದ ಅವರು, ಹತ್ತನೇ ವಾರ್ಡಿನ ವಿನಾಯಕ ನಗರ, ಭಾರತ್ ಆಯಿಲ್ ಮಿಲ್ ಕಾಂಪೌಂಡ್ ಮತ್ತು ಪೌರ ಕಾರ್ಮಿಕರ ಬಡಾವಣೆಯಲ್ಲಿ ಅತಿ ಹೆಚ್ಚು ಬಡ ಕೂಲಿ ಕಾರ್ಮಿಕರು ಜೀವನ ನಡೆಸುತ್ತಾರೆ ಮತ್ತು ಹೆಚ್ಚಾಗಿ ಅವಿದ್ಯಾವಂತರಿದ್ದಾರೆ. ಸುಮಾರು 60 ವರ್ಷಗಳಿಂದ ಇಲ್ಲಿನ ಬಡಾವಣೆಯ ಸ್ಥಳದಲ್ಲಿಯೇ ಜೀವನ ನಡೆಸಿಕೊಂಡು ಹೋಗುತ್ತಿದ್ದು, ಮೂಲಭೂತ ಸೌಕರ್ಯಗಳಾದ ಚರಂಡಿ, ಬೀದಿ ದೀಪ, ಶುದ್ಧ ಕುಡಿಯುವ ನೀರಿನ ಘಟಕ, ರಸ್ತೆ, ಅಂಗನವಾಡಿ ಕಟ್ಟಡ, ಸಮುದಾಯ ಭವನ, ಯುಜಿಡಿ, ಶೌಚಾಲಯ ಸ್ವಚ್ಛತೆ ಸೇರಿದಂತೆ ಹಲವಾರು ಮೂಲಭೂತ ಸೌಕರ್ಯಗಳನ್ನು ಸರ್ಕಾರ ಒದಗಿಸಿಲ್ಲ. ಜೊತೆಗೆ ಇಲ್ಲಿನ ಬಡಾವಣೆಗಳನ್ನು ಸ್ಲಂ ಏರಿಯಾ ಎಂದು ಗುರುತಿಸಿದ್ದರೂ ಸಹ, ಇದುವರೆಗೂ ರಾಜ್ಯ ಸರ್ಕಾರವಾಗಲೀ, ಸ್ಥಳೀಯ ಆಡಳಿತವಾಗಲೀ ಹಕ್ಕುಪತ್ರಗಳನ್ನು ನೀಡಿಲ್ಲ.

ಇಷ್ಟೆಲ್ಲಾ ಒಂದಿಲ್ಲೊಂದು ಬಡಾವಣೆಯಲ್ಲಿ ಸಮಸ್ಯೆಗಳಿದ್ದು, ಸರ್ಕಾರ ನಮಗೆ ಹಕ್ಕುಪತ್ರವನ್ನು ಹಾಗೂ ಮೂಲಭೂತ ಸೌಕರ್ಯಗಳನ್ನು ನೀಡದೇ ಮಲತಾಯಿ ಧೋರಣೆ ಅನುಸರಿಸುತ್ತಿರುವುದನ್ನು ಖಂಡಿಸಿ, ವಾರ್ಡಿನ ಬೂತ್ ಸಂಖ್ಯೆ 48 ರ 1356 ಮತದಾರರು ಲೋಕಸಭಾ ಚುನಾವಣೆಯಲ್ಲಿ ಸಾಮೂಹಿಕವಾಗಿ ಮತದಾನದಿಂದ ದೂರ ಉಳಿದು ಮತದಾನ ಬಹಿಷ್ಕಾರ ಮಾಡಲು ತೀರ್ಮಾನ ಮಾಡಿರುತ್ತೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ರಮೇಶ್, ಯಮನೂರು, ಹನುಮಂತಪ್ಪ, ಅಣ್ಣಪ್ಪ, ಬಸವರಾಜ್ ದರ್ಶನ್, ಹಾಲೇಶ್, ರಾಜೇಶ್, ರಾಜಶೇಖರ್, ನಿಂಗಪ್ಪ, ಮಂಜುನಾಥ್, ರುದ್ರೇಶ್ ಇತರರರಿದ್ದರು.

# ಹಳೇ ಭಾಗದ ಅಭಿವೃದ್ಧಿಗೆ ಕಾಂಗ್ರೆಸ್ ಪಕ್ಷ ಪಣ ತೊಟ್ಟಿದೆ

## ವಕೀಲರ ಬೆಂಬಲದ ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಸ್ಸೆಸ್ಸೆಂ



ದಾವಣಗೆರೆ, ಮೇ 1 - ಮಧ್ಯ ಕರ್ನಾಟಕದ ಜಿಲ್ಲೆಯಲ್ಲಿ ಹೈಕೋರ್ಟ್ ಮಾದರಿಯಲ್ಲಿ ಕೋರ್ಟ್ ನಿರ್ಮಿಸಲು ಪ್ಲಾನ್ ಮಾಡಿದ್ದೆ. ಆದರೆ, ಬಿಜೆಪಿ ಸರ್ಕಾರ ಬಂದು ಅವರಿಗೆ ತಿಳಿದ ಹಾಗೇ ಕೋರ್ಟ್ ನಿರ್ಮಿಸಿದೆ. ಕೋರ್ಟ್ ನವೀಕರಣಕ್ಕೆ ಹೆಚ್ಚಿನ ಒತ್ತು ಹಾಗೂ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಮುಂದಾಗುವುದು ಎಂದು ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಅವರು ತಿಳಿಸಿದರು.

ನಗರದ ಬಿಸ್ಮಿಲ್ಲಾ ಲೇಔಟ್‌ನಲ್ಲಿ ವಕೀಲ ರಜ್ವಿಖಾನ್ ನಿವಾಸದಲ್ಲಿ ವಕೀಲರ ಬೆಂಬಲದ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

1994 ರ ದಶಕದಲ್ಲಿ ಮೊದಲ ಚುನಾವಣೆ ಎದುರಿಸಿದಾಗ ಇಲ್ಲಿನ ಮುಸ್ಲಿಂ ಮುಖಂಡರುಗಳು ತಮಗೆ ಸಂಘಟನೆಯ ಮೂಲಕ ಸಾಥ್ ನೀಡಿದರು ಎಂದು ಸ್ಮರಿಸಿದ ಸಚಿವರು, ಹಳೇ ಭಾಗದಲ್ಲಿ ಹಿಂದೆ ನೀರಿನ ಸಮಸ್ಯೆ ವಿಪರೀತ ಇತ್ತು. ಹಗಲಿನಲ್ಲಿ ಕೆಲಸ ರಾತ್ರಿ ಹೊತ್ತು ಬಾತಿ ಕೆರೆಯಿಂದ ನೀರು ತರಬೇಕಾಗಿತ್ತು. ಇದನ್ನು ನಿವಾರಣೆ ಕುಂದುವಾಡ ಹಾಗೂ ಟಿವಿ ಸ್ಟೇಷನ್ ಕೆರೆಗಳನ್ನು ನಿರ್ಮಾಣ ಮಾಡಲಾಯಿತು. ಈಗ ನೀರಿನ ಸಮಸ್ಯೆ ನಿವಾರಣೆ ಆಗಿದೆ.

ಕಾಂಗ್ರೆಸ್ ಸರ್ಕಾರವು ಬಡವರಿಗಾಗಿ ಮನೆಗಳನ್ನು ನಿರ್ಮಿಸಿದೆ. ಅನೇಕ ಸವಲತ್ತುಗಳನ್ನು ನೀಡಿದೆ. ಹಳೇ ನಗರ ಭಾಗದಲ್ಲಿ ಕ್ರೀಡಾಂಗಣ ಆಗಬೇಕಿದೆ, ಪಾರ್ಕ್‌ಗಳು ಬೇಕಿವೆ. ಶಾಲಾ ಕಟ್ಟಡಗಳು ನಿರ್ಮಾಣ ಆಗಬೇಕಿದೆ.

ಇಲ್ಲಿನ ಮುಖಂಡರುಗಳು ವೈಮನಸ್ಸು ಬಿಟ್ಟು ಒಗ್ಗಟ್ಟು ಪ್ರದರ್ಶಿಸಿದರೆ ಎಲ್ಲವೂ ಸಾಧ್ಯ ಎಂದ ಅವರು, ಕಳೆದ ಬಾರಿ ಕಡಿಮೆ ಮತದಾನ ಆಗಿದ್ದರಿಂದ ಸೋಲಾಯಿತು. ಈ ಬಾರಿ ಈ ತಪ್ಪು ಮಾಡಬೇಡಿ. ಕುಟುಂಬ ಸಮೇತರಾಗಿ ಮತಗಟ್ಟೆಗೆ ಬಂದು, ಜನರಿಗೆ ಸ್ಪಂದಿಸುವ ಮತ್ತು ಕಾನೂನು ತಿಳಿದಿರುವ ಹಾಗೂ ಉರ್ದು ಸೇರಿದಂತೆ ನಾಲ್ಕೈದು ಭಾಷೆ ಮಾತನಾಡುವ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ ಅವರಿಗೆ ಮತವನ್ನು ಹಾಕಿ ಎಂದು ಕೇಳಿಕೊಂಡರು.

ಈ ಸಂದರ್ಭದಲ್ಲಿ ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ, ವಕೀಲರಾದ ರಜ್ವಿಖಾನ್, ಹನುಮಂತಪ್ಪ, ವಕೀಲರ ಸಂಘದ ಪದಾಧಿಕಾರಿಗಳು ಇದ್ದರು.

# ಸಂಸದ ಸಿದ್ದೇಶ್ವರ ವಿರುದ್ಧ ಮಹಿಳಾ ಕಾಂಗ್ರೆಸ್ ಪ್ರತಿಭಟನೆ



ದಾವಣಗೆರೆ, ಮೇ 1- ಸಂಸದ ಜಿ. ಎಂ.ಸಿದ್ದೇಶ್ವರ ಅವರು ಕುಂದವಾಡ ಕೆರೆ ದುರಸ್ತಿ ನೆಪದಲ್ಲಿ ಸುಮಾರು 16 ಕೋಟಿ ರೂ. ಖರ್ಚಿನ ಲೆಕ್ಕ ತೋರಿಸಿದ್ದು, ಇದರಲ್ಲಿ ಭ್ರಷ್ಟಾಚಾರ ನಡೆದಿದೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಅನಿತಾಬಾಯಿ ಮಾಲತೇಶರಾವ್ ಆರೋಪಿಸಿದರು.

ಕುಂದುವಾಡ ಕೆರೆ ಏರಿ ಮೇಲೆ ಇಂದು ಬೆಳಿಗ್ಗೆ ಜಿಲ್ಲಾ ಮಹಿಳಾ ಕಾಂಗ್ರೆಸ್ ವತಿಯಿಂದ ಭ್ರಷ್ಟಾಚಾರವನ್ನು ಖಂಡಿಸಿ, ಜಿಲೇಬಿ ಮಾಡುವ ಮೂಲಕ ನಡೆಸಿದ ಪ್ರತಿಭಟನೆ ನೇತೃತ್ವ ವಹಿಸಿ ಅವರು ಮಾತನಾಡಿದರು.

ದಾವಣಗೆರೆ ನಗರಸಭೆ ಆಗಿದ್ದಾಗ ನೀರಿನ ಅವ್ಯವಸ್ಥೆ ಉಂಟಾಗಿ, ನಗರದ ಜನರು ಹರಿಹರಕ್ಕೆ ಹೋಗಿ ನೀರು ತರುವುದನ್ನು ಗಮನಿಸಿದ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಕೊಳಚೆ ನೀರಿನ ಗುಂಡಿಯಾಗಿದ್ದ ಸುಮಾರು 236 ಎಕರೆ ಕುಂದವಾಡ ಕೆರೆಯನ್ನು ಕೇವಲ 2.50 ಕೋಟಿ ರೂ. ವಚ್ಚದಲ್ಲಿ ಪುನರ್ ನಿರ್ಮಿಸಿ ನೀರಿನ ಶುದ್ಧೀಕರಣ ಘಟಕ, ನೀರು ಸಂಗ್ರಹ ಹಾಗೂ ವಿತರಣಾ ವ್ಯವಸ್ಥೆಯನ್ನು ಕೈಗೊಂಡಿದ್ದರು ಎಂದರು.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ.ಶೆಟ್ಟಿ ಮಾತನಾಡಿ, ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್ ಅವರಿಗೆ ಅಭಿವೃದ್ಧಿ ವಿಷಯದಲ್ಲಿ ಓಪನ್ ಚಾಲೆಂಜ್ ಮಾಡುತ್ತಿದ್ದೇನೆ. ಮಲ್ಲಿಕಾರ್ಜುನ್ ಅವರ ಬಳಿ ಚರ್ಚೆ ಬೇಡ. ನಾನೇ ಚರ್ಚೆಗೆ ಬರುತ್ತೇನೆ. ಚರ್ಚೆಗೆ ಬರುವ ಮುನ್ನ ದಾವಣಗೆರೆ ಜನರ ಬಳಿ ಹೋಗಿ ದಾವಣಗೆರೆ ಯಲ್ಲಿ ಯಾರು ಅಭಿವೃದ್ಧಿ ಮಾಡಿದ್ದಾರೆ ಎಂದು ಕೇಳಿ ಬರಲಿ ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಕಾಂಗ್ರೆಸ್‌ನ ಮಂಗಳಮ್ಮ, ಮಂಜಮ್ಮ, ಕವಿತಾ, ಸುಷ್ಮಾ ಪಾಟೀಲ್, ಉಮಾಕುಮಾರ್, ಕಾವ್ಯ, ಸಲ್ಮಾಬಾನು, ಕಮಲಮ್ಮ, ರುದ್ರಮ್ಮ, ದಿಲ್ ಶಾದ್, ಸುಧಾ, ಗೀತಾ, ಸುನೀತಾ, ಶಿಲ್ಪ, ಕಾವೇರಿ, ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಎಸ್. ಮಲ್ಲಿಕಾರ್ಜುನ್ ಸೇರಿದಂತೆ ಹಲವರಿದ್ದರು,

## ವಿಪ್ರ ವಟು ಶಿಕ್ಷಣ ಶಿಬಿರ

ದಾವಣಗೆರೆ, ಮೇ 1 - ತಾಲ್ಲೂಕು ಬ್ರಾಹ್ಮಣ ಸಮಾಜ ಸೇವಾ ಸಂಘದ ಆಶ್ರಯದಲ್ಲಿ ವಿಪ್ರ ವಟು ಶಿಕ್ಷಣ ಶಿಬಿರವನ್ನು ಇದೇ ದಿನಾಂಕ 10 ರಿಂದ ಮೇ 19 ರವರೆಗೆ ಆಯೋಜಿಸಲಾಗಿದೆ. ವಿವರಕ್ಕೆ ವಿನಾಯಕ ಡಿ ಜೋಶಿ (98441 30834), ಎಸ್. ಗೋಪಾಲದಾಸ್ ಅವರನ್ನು ಸಂಪರ್ಕಿಸಬಹುದು.

# ವಿಠಲಾಪುರ : ಅನಾಮಧೇಯ ಮಹಿಳೆಯ ಶವ ಪತ್ತೆ

ಮಾಯಕೊಂಡ, ಮೇ 1 - ವಿಠಲಾಪುರ ಗ್ರಾಮದ ಭದ್ರಾ ಚಾನಲ್ ಬಳಿಯ ಮರದ ಕೊಂಬೆಯಲ್ಲಿ ಸುಮಾರು 55-60 ವರ್ಷದ ಹೆಂಗಸಿನ ಅನಾಮಧೇಯ ಶವ ಪತ್ತೆಯಾಗಿದೆ. ಮೃತ ಮಹಿಳೆ ಮೈಮೇಲೆ ಬಣ್ಣದ ಆಕಾಶ ನೀಲಿ ಬಣ್ಣದ ಲಂಗ, ಹಸಿರು ಜಾಕೀಟ್ ಧರಿಸಿದ್ದು, ಮೃತೆಯ ಕಣ್ಣು, ಕಿವಿ, ತುಟಿಯನ್ನು ಜಲಚರಗಳು ತಿಂದಿರುವ ಗುರುತು ಇದೆ. ಸಂಬಂಧಪಟ್ಟವರು ಮಾಯಕೊಂಡ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು.

# ಬಿಜೆಪಿಯಿಂದ ರೈತರಿಗೆ ಮಲತಾಯಿ ಧೋರಣೆ : ಕರಡಿ ದುರ್ಗದ ಚೌಡಪ್ಪ



ಹರಪನಹಳ್ಳಿ, ಮೆ 1 - ವಚನೆ ಪಾಲನೆ ಮಾಡದೇ ರೈತರಿಗೆ ದ್ರೋಹ ಬಗೆದ ಬಿಜೆಪಿಗೆ ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬುದ್ದಿ ಕಲಿಸೋಣ ಎಂದು ಕರ್ನಾಟಕ ರಾಜ್ಯ ರೈತ ಸಂಘದ ತಾಲ್ಲೂಕು ಅಧ್ಯಕ್ಷ ಕರಡಿ ದುರ್ಗದ ಚೌಡಪ್ಪ ಹೇಳಿದರು.

ತಾಲ್ಲೂಕಿನ ಕುಂಚೂರು ಗ್ರಾಮದಲ್ಲಿ ರೈತರಿಗೆ ಮಲತಾಯಿ ದೋರಣೆ ಅನುಸರಿಸುತ್ತಿರುವ ಬಿಜೆಪಿಗೆ ತಕ್ಕ ಪಾಠ ಕಲಿಸಿ ಎನ್ನುವ ಬಿತ್ತಿ ಚಿತ್ರ ಬಿಡಿಗಡೆಗೊಳಿಸಿ ಮಾತನಾಡಿದರು.

ಕರಾಳ ಕೃಷಿ ಕಾಯ್ದೆಗಳನ್ನು ಜಾರಿಗೆ ತರಲು ಮುಂದಾಗಿದ್ದ ರೈತ ವಿರೋಧಿ ಹಾಗೂ ರೈತ ಮುಕ್ತ ಭಾರತ ಮಾಡಲು ಮುಂದಾಗಿರುವ ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಹಾಗೂ ಮಿತ್ರ ಪಕ್ಷಗಳಿಗೆ ಲೋಕಸಭಾ ಚುನಾವಣೆಯಲ್ಲಿ ರೈತರು ತಕ್ಕ ಪಾಠ ಕಲಿಸಬೇಕು. ದೆಹಲಿಯ ಗಡಿಯಲ್ಲಿ ಚಳಿ, ಮಳೆ ಎನ್ನದೆ ಒಂದೂವರೆ ವರ್ಷ ಚಳವಳಿ ಮಾಡಿದ ಅವಧಿಯಲ್ಲಿ ಸುಮಾರು 750 ರೈತರು ಪ್ರಾಣ ಕಳೆದುಕೊಂಡಿದ್ದು ಇದಕ್ಕೆ ಪ್ರಮುಖ ಕಾರಣ ಮೋದಿ ನೇತೃತ್ವದ ಕೇಂದ್ರ ಸರ್ಕಾರ.

ಡಾ. ಸ್ವಾಮಿನಾಥನ್ ಆಯೋಗದ ವರದಿ ಜಾರಿ ಮಾಡದ ರೈತರ ಬೆಳೆಗಳಿಗೆ ಕನಿಷ್ಠ ಬೆಲೆ ನಿಗದಿ ಮಾಡದ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಹಾಗೂ ಮಿತ್ರ ಪಕ್ಷಗಳಿಗೆ ಈ ಚುನಾವಣೆಯಲ್ಲಿ ಮತದಾರರು ತಕ್ಕ ಪಾಠ ಕಲಿಸಬೇಕು ಎಂದರು.

ಈ ವೇಳೆ ರೈತ ಸಂಘದ ಗೌರವ ಅಧ್ಯಕ್ಷ ಮಾಲ್ದರ್ ಶಫಿವುಲ್ಲಾ. ರೈತ ಮುಖಂಡರಾದ ಎಸ್ ಮುನಾಪ್, ಹಡಗಲಿ ಇಬ್ರಾಹಿಂ. ಎಂ., ಕೋಟೆಪ್ಪ. ಹೆಚ್, ರಜಾವುಲ್ಲಾ, ಗೌಂಡಿ ಶೌಖತ್ ಆಲಿ, ಅಜ್ಜೋಳ್ ಭರ್ಮಪ್ಪ, ಅಜ್ಜೋಳ್ ದಿಳ್ಯಪ್ಪ ಸೇರಿದಂತೆ, ಇತರರು ಇದ್ದರು.

# ಲೋಕಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿ ಬಿಜೆಪಿಯಿಂದ ಮಾತ್ರ ಸಾಧ್ಯ : ಸಂಸದ ಸಿದ್ದೇಶ್ವರ



ದಾವಣಗೆರೆ, ಮೇ 1- ಲೋಕಸಭಾ ಕ್ಷೇತ್ರದ ಸಮಗ್ರ ಅಭಿವೃದ್ಧಿ ಬಿಜೆಪಿಯಿಂದ ಮಾತ್ರ ಸಾಧ್ಯ. ಇದನ್ನು ಮತದಾರರು ಅರ್ಥ ಮಾಡಿಕೊಂಡಿದ್ದು, ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ ಅವರಿಗೆ ಹೃದಯಪೂರ್ವಕ ಸ್ಪಂದನೆ ನೀಡುತ್ತಿದ್ದಾರೆ. ಈ ಬಾರಿ ನಮ್ಮ ಅಭ್ಯರ್ಥಿ ಗೆಲುವು ಖಚಿತ ಎಂದು ಸಂಸದ ಜಿ.ಎಂ.ಸಿದ್ದೇಶ್ವರ ತಿಳಿಸಿದರು.

ಸ್ಥಳೀಯ ಗಾಂಧಿನಗರದಲ್ಲಿ ಪತ್ನಿ ಗಾಯಿತ್ರಿ ಸಿದ್ದೇಶ್ವರ ಪರ ಮತಯಾಚನೆ ಮಾಡಿ ಮಾತನಾಡಿದ ಅವರು, ದಾವಣಗೆರೆ ಲೋಕಸಭಾ ಕ್ಷೇತ್ರದ ಹಾಗೂ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಭಾ.ಜ.ಪ. ಸಂಕಲ್ಪ ಮಾಡಿದೆ. ಮೋದಿಜೀ ಪ್ರಧಾನಿ ಆಗಿ 10 ವರ್ಷದಲ್ಲೇ ದೇಶದಲ್ಲಿ ಸಾಕಷ್ಟು ಅಭಿವೃದ್ಧಿಯಾಗಿದೆ. ರಾಷ್ಟ್ರೀಯ ಹೆದ್ದಾರಿ, ಏರ್‌ಪೋರ್ಟ್, ಆಸ್ಪತ್ರೆ, ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಸೇರಿದಂತೆ ಎಲ್ಲಾ ರಂಗಗಳ ಅಭಿವೃದ್ಧಿ ಮೋದಿ ಒತ್ತು ನೀಡಿದ್ದಾರೆ. ಇಂತಹ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಿ ಆಗಬೇಕು ಎಂದರೆ ದಾವಣಗೆರೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ ಹೆಚ್ಚಿನ ಅಂತರಗಳಿಂದ ಗೆದ್ದು ದೆಹಲಿಗೆ ಹೋಗಬೇಕು. ಈ ನಿಟ್ಟಿನಲ್ಲಿ ಕಾರ್ಯಕರ್ತರು ಇನ್ನು 6 ದಿನ ಮನೆ - ಮನೆಗೆ ಹೋಗಿ ಮತ ಕೇಳಬೇಕು ಎಂದು ಮನವಿ ಮಾಡಿದರು.

ಕಾಂಗ್ರೆಸ್ ಅಭ್ಯರ್ಥಿಗೆ ಮತ್ತು ಅವರ ಪತಿಗೆ ಜಿಲ್ಲೆಯಲ್ಲಿ ಎಷ್ಟು ಹಳ್ಳಿಗಳಿವೆ, ಎಷ್ಟು ಪಂಚಾಯಿತಿಗಳಿವೆ ಎನ್ನುವುದು ಗೊತ್ತಿಲ್ಲ. ಯಾವ ತಾಲ್ಲೂಕು ಎಷ್ಟು ದೂರ, ಅಲ್ಲಿನ ಸಮಸ್ಯೆಗಳೇನು ಎನ್ನುವುದು ಗೊತ್ತಿಲ್ಲ. ಏನೋ ಕಾಟಚಾರಕ್ಕೆ ಟಿಕೆಟ್ ಸಿಕ್ಕಿದೆ, ಪ್ರಚಾರ ಮಾಡಬೇಕು ಅಂತ ಪ್ರಚಾರ ಮಾಡುತ್ತಿದ್ದಾರೆ. ಮೋದಿ ಅಲೆಯಲ್ಲಿ ಕೊಚ್ಚಿ ಹೋಗುತ್ತೇವೆ ಎನ್ನುವುದು ಕಾಂಗ್ರೆಸ್ ಪಕ್ಷಕ್ಕೂ ಗೊತ್ತಿದೆ. ಇಂತಹ ಕಾಂಗ್ರೆಸ್ ಅಭ್ಯರ್ಥಿಗೆ ನೀವು ನೀಡುವ ಒಂದೊಂದು ಮತ ವ್ಯರ್ಥವಾಗಲಿದೆ.

ನಿಮ್ಮ ಅಮೂಲ್ಯವಾದ ಮತಗಳನ್ನು ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಅವರಿಗೆ ಹಾಕುವ ಮೂಲಕ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡಿ ದೇಶದ, ದಾವಣಗೆರೆ ಲೋಕಸಭಾ ಕ್ಷೇತ್ರದ ಅಭಿವೃದ್ಧಿಗೆ ಸಹಕರಿಸಿ ಎಂದು ಕರೆ ನೀಡಿದರು.

ಕೇಂದ್ರದಲ್ಲಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ಸ್ಮಾರ್ಟ್ ಸಿಟಿ, ಅಮೃತ್ ಸಿಟಿ ಅಂತಹ ಯೋಜನೆಗಳು ಜಾರಿಗೆ ಬಂದು ನಗರಗಳು ಸ್ಮಾರ್ಟ್ ಆಗುತ್ತಿವೆ. ಸ್ಮಾರ್ಟ್ ಸಿಟಿ ಯೋಜನೆ ಅಡಿ ದಾವಣಗೆರೆಗೆ 1071 ಕೋಟಿ ರೂ. ಅನುದಾನ ತಂದಿದ್ದೇನೆ. ಸಾಕಷ್ಟು ಅಭಿವೃದ್ಧಿ ಕೆಲಸಗಳು ಆಗಿವೆ. ಅಭಿವೃದ್ಧಿಯನ್ನು ಸಹಿಸದ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಕೆಲ ಯೋಜನೆಗಳನ್ನು ನಿಲ್ಲಿಸಿದ್ದಾರೆ. ಇನ್ನೂ ಕೆಲವು ಪೂರ್ಣಗೊಂಡರೂ ಹಸ್ತಕ್ಷೇಪ ಮಾಡಿ ಜನರ ಉಪಯೋಗಕ್ಕೆ ಬಾರದಂತೆ ಮಾಡಿದ್ದಾರೆ. ಎಸ್. ಎಸ್.ಮಲ್ಲಿಕಾರ್ಜುನ್ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ. ಇಂತಹ ದ್ವೇಷದ ರಾಜಕಾರಣಿಗಳಿಗೆ ಜನ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸಬೇಕು ಎಂದರು.

ಈ ವೇಳೆ ವಿಧಾನ ಪರಿಷತ್ ಸದಸ್ಯರಾದ ನಾರಾಯಣಸ್ವಾಮಿ, ಮಾಜಿ ಮೇಯರ್ ಬಿ.ಜಿ. ಅಜಯ್ ಕುಮಾರ್, ವಿಧಾನ ಪರಿಷತ್ ಸದಸ್ಯರಾದ ಸಂಗಮೇಶ್ ನಿರಾಣಿ, ದೂಡಾ ಮಾಜಿ ಅಧ್ಯಕ್ಷ ಯಶವಂತರಾವ್ ಜಾಧವ್, ಒಬಿಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ರಾಜನಹಳ್ಳಿ ಶಿವಕುಮಾರ್, ಬಿಜೆಪಿ ಮುಖಂಡರಾದ ದೇವರಮನೆ ಶಿವಕುಮಾರ್, ಪುರುಷೋತ್ತಮ್, ಹಾಲೇಶ್ ಸೇರಿದಂತೆ ನೂರಾರು ಕಾರ್ಯಕರ್ತರು ಜೊತೆಯಲ್ಲಿದ್ದರು.


## ಚಿರಸ್ಮರಣೆ



ದಿ|| ಬಿ.ಎಸ್ ಗುಂಡೇಶ್

ದೀಪದ ಬತ್ತಿ ವ್ಯಾಪಾರಸ್ಥರು.

ನೀವು ನಮ್ಮನಗಲಿ ಇಂದಿಗೆ ಮೂರು ವರ್ಷಗಳಾದವು...

ಸದಾ ನಿಮ್ಮ ಸ್ಮರಣೆಯಲ್ಲಿರುವ

ಪತ್ನಿ, ಮಕ್ಕಳು, ಮೊಮ್ಮಕ್ಕಳು
ಒಡಹುಟ್ಟಿದವರು, ಬಂಧುಗಳು ಹಾಗೂ ಮಿತ್ರರು.
ಬಸವರಾಜಪೇಟೆ, ದಾವಣಗೆರೆ.

## ಸವಿನೆನಪು



ದಿ|| ಶ್ರೀಮತಿ ಆರ್. ರೇಣುಕಾ

ನಿಧನ : 02.05.2018

ನೀವು ನಮ್ಮನ್ನಗಲಿ ಇಂದಿಗೆ ಆರು ವರ್ಷಗಳಾದವು.
ಸದಾ ನಿಮ್ಮ ಸ್ಮರಣೆಯಲ್ಲಿರುವ,

ಪತಿ : ಎಸ್. ಸಿದ್ದಪ್ಪ ಮತ್ತು ಮಕ್ಕಳು,
ಕೊಡಗನೂರು.

|| ಶ್ರೀ ಸೂಳೆಕೆರೆ ಸಿದ್ದೇಶ್ವರ ಪ್ರಸನ್ನ ||

## ಕೈಲಾಸ ಶಿವಗಣಾರಾಧನೆ ಆಹ್ವಾನ




ದಾವಣಗೆರೆ ಜಿ., ಚನ್ನಗಿರಿ ತಾ., ನಲ್ಕುದುರೆ ಗ್ರಾಮದ ವಾಸಿಗಳಾದ
ಲಿಂ. ಶ್ರೀ ಹಂಚಿನಮನೆ ಗೌಡ್ರು ಹೆಚ್.ವಿ. ಸಿದ್ದಪ್ಪ
(ಮುಖ್ಯೋಪಾಧ್ಯಾಯರು) ಇವರ ಮಕ್ಕಳಾದ
ಶ್ರೀ ಹೆಚ್.ಎಸ್. ಶಿವಕುಮಾರ್ (ಗ್ರಾ.ಪಂ. ಸದಸ್ಯರು)
ಮತ್ತು ಶ್ರೀ ಹೆಚ್.ಎಸ್. ಹಾಲೇಶ್, (ಮುಖ್ಯೋಪಾಧ್ಯಾಯರು)
ಇವರು ಮಾಡುವ ವಿಜ್ಞಾಪನೆಗಳು.
ದಿ. : 25.04.24ನೇ ಗುರುವಾರ ಬೆಳಿಗ್ಗೆ 6.30ಕ್ಕೆ ನಮ್ಮ ಪೂಜ್ಯ ತಾಯಿಯವರಾದ
ಶ್ರೀಮತಿ ಹಾಲಮ್ಮ
ಇವರು ಶಿವಾಧೀನರಾದ ಪ್ರಯುಕ್ತ ಮೃತರ ಆತ್ಮಶಾಂತಿಗಾಗಿ
ಕೈಲಾಸ ಶಿವಗಣಾರಾಧನೆಯನ್ನು
ದಿ. : 03.05.24ನೇ ಶುಕ್ರವಾರ ಬೆಳಿಗ್ಗೆ 10.30ಕ್ಕೆ ಶ್ರೀ ವೀರಭದ್ರೇಶ್ವರ ಸಮುದಾಯ ಭವನ, ನಲ್ಕುದುರೆ ಗ್ರಾಮದಲ್ಲಿ ನೆರವೇರಿಸಲು ಗುರು-ಹಿರಿಯರು ನಿಶ್ಚಯಿಸಿರುವುದರಿಂದ ತಾವುಗಳು ಆಗಮಿಸಿ, ಮೃತರ ಆತ್ಮಕ್ಕೆ ಚಿರಶಾಂತಿಯನ್ನು ಕೋರಬೇಕಾಗಿ ವಿನಂತಿ.

ದುಃಖತಪ್ತ ಕುಟುಂಬ ವರ್ಗ : ಮೃತರ ಮಕ್ಕಳು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು, ಹಂಚಿನಮನೆ ವಂಶಸ್ಥರು, ಮೂಲೆಮನೆ ವಂಶಸ್ಥರು, ನಲ್ಕುದುರೆ ಗ್ರಾಮಸ್ಥರು ಹಾಗೂ ಬಂಧು-ಮಿತ್ರರು. ಮೊ : 76763 62865, 76250 31624

ಭಜನಾ ಕಾರ್ಯಕ್ರಮ : ವಚನ ಭಜನೆ ; ಬಸವ ಲೋಕ, ಬಸಾಪುರ ಇವರಿಂದ

ವಿ.ಸೂ. : ಆಹ್ವಾನ ಪತ್ರಿಕೆ ತಲುಪದೇ ಇರುವವರು ಇದನ್ನೇ ಆಹ್ವಾನವೆಂದು ಭಾವಿಸಿ, ತಪ್ಪದೇ ಆಗಮಿಸಬೇಕಾಗಿ ವಿನಂತಿ.


## ಸಿ. ತಿಪ್ಪೇಸ್ವಾಮಿ ನಿಧನ



ದಾವಣಗೆರೆ ಕೆಟಿ.ಜೆ. ನಗರ, 17ನೇ ಕ್ರಾಸ್ ವಾಸಿ ಮಹಾನಗರಪಾಲಿಕೆ ನಿವೃತ್ತ ನೌಕರರ ಸಂಘದ ಖಜಾಂಚಿಗಳೂ, ನೀಲಕಂಠೇಶ್ವರ ದೇವಸ್ಥಾನದ ಉಪಾಧ್ಯಕ್ಷರೂ, ಹವ್ಯಾಸಿ ರಂಗಭೂಮಿ ಕಲಾವಿದರಾದ ಸಿ. ತಿಪ್ಪೇಸ್ವಾಮಿ (69) ಇವರು ದಿನಾಂಕ 1.5.2024ರ ಬುಧವಾರ ಮಧ್ಯಾಹ್ನ 4.30ಕ್ಕೆ ನಿಧನರಾದರು. ಪತ್ನಿ, ನಾಲ್ವರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯ ಕ್ರಿಯೆಯು ದಿನಾಂಕ 02.05.2024ರ ಗುರುವಾರ ಮಧ್ಯಾಹ್ನ 12.30ಕ್ಕೆ ಗಾಂಧಿನಗರದ ಹಿಂದೂ ರುದ್ರಭೂಮಿಯಲ್ಲಿ ನೆರವೇರಲಿದೆ.

**ಮತದಾನ ಎಲ್ಲರ ಹಕ್ಕು ಅದನ್ನು ಚಲಾಯಿಸಿ**

# ಕಾರ್ಯಕರ್ತರಿಗೆ ಬೆಲೆ ನೀಡದ ಸಿದ್ದೇಶ್ವರ : ಎಲ್.ಡಿ. ಗೋಣೆಪ್ಪ

ದಾವಣಗೆರೆ, ಮೇ 1- ಬಿಜೆಪಿಯಲ್ಲಿ ದುಡಿಯುತ್ತಿರುವ ನಿಷ್ಠಾವಂತ ಕಾರ್ಯಕರ್ತರಿಗೆ ಸಂಸದ ಜಿ.ಎಂ. ಸಿದ್ದೇಶ್ವರ ಕಿಂಚಿತ್ತೂ ಬೆಲೆ ನೀಡುತ್ತಿಲ್ಲ. ಈ ಕಾರಣಕ್ಕಾಗಿಯೇ ನಾನು ಕಾಂಗ್ರೆಸ್ ಸೇರಬೇಕಾಯಿತು ಎಂದು ಪಾಲಿಕೆ ಸದಸ್ಯ ಎಲ್.ಡಿ. ಗೋಣೆಪ್ಪ ಹೇಳಿದರು.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕ್ಯಾನ್ಸರ್ ಖಾಯಿಲೆಗೆ ತುತ್ತಾದ ದಲಿತ ಬಡ ಬಾಲಕನಿಗೆ ಪ್ರಧಾನ ಮಂತ್ರಿ ಕೋಟಾದಿಂದ ಸಹಾಯ ಮಾಡುವಂತೆ ಕೋರಿಕೊಂಡರೂ ಸ್ಪಂದಿಸಲಿಲ್ಲ. ಜಿಎಂಐಟಿಯಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆಯ ಮೊಮ್ಮಗಳ ವಿದ್ಯಾಭ್ಯಾಸ ಶುಲ್ಕದಲ್ಲಿ ಕಡಿತಗೊಳಿಸುವಂತೆ ಬೇಡಿದರೂ ಸ್ಪಂದಿಸಿರಲಿಲ್ಲ.

ಆದರೆ ಈ ಎರಡೂ ಪ್ರಕರಣಗಳಲ್ಲಿ ಶಾಮನೂರು ಶಿವಶಂಕರಪ್ಪನವರು ಸ್ಪಂದಿಸಿದರು.

ಶಿವಶಂಕರಪ್ಪನವರಲ್ಲಿ ಇರುವ ಒಳ್ಳೆಯ ಗುಣ ಸಿದ್ದೇಶ್ವರ ಅವರಲ್ಲಿ ಇಲ್ಲ. 28 ವರ್ಷಗಳಿಂದ ಬಿಜೆಪಿಯಲ್ಲಿ ನಿಷ್ಠಾವಂತ ಕಾರ್ಯಕರ್ತನಾದ ನನಗೂ ಬೆಲೆ ನೀಡಲಿಲ್ಲ. ಇನ್ನು ಸಾಮಾನ್ಯ ಕಾರ್ಯಕರ್ತರ ಗತಿ ಏನು? ಎಂದು ಗೋಣೆಪ್ಪ ಪ್ರಶ್ನಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ಬಿ.ಹೆಚ್. ವೀರಭದ್ರಪ್ಪ, ಟಿ.ರಮೇಶ್, ಬಾಗಳಿ ಉಚ್ಚೆಂಗೆಪ್ಪ, ಬಸವರಾಜ್ ಇತರರಿದ್ದರು.

# ಹಿರಿಯರನ್ನು ಗಣನೆಗೆ ತೆಗೆದುಕೊಳ್ಳದ ಸಿದ್ದೇಶ್ವರ : ಪ್ರತಾಪ್

ದಾವಣಗೆರೆ, ಮೇ 1- ಜಿಲ್ಲೆಯಲ್ಲಿ ಬಿಜೆಪಿ ಒಬ್ಬ ವ್ಯಕ್ತಿಯ ಹಿಡಿತದಲ್ಲಿದೆ. ಸಂಸದ ಜಿ.ಎಂ. ಸಿದ್ದೇಶ್ವರ ಅವರು ಕಾರ್ಯಕರ್ತರನ್ನು ಗೌರವದಿಂದ ನಡೆಸಿಕೊಂಡಿಲ್ಲ ಎಂದು ಮಟ್ಟಿಕಲ್ ಆರ್. ಪ್ರತಾಪ್ ಆರೋಪಿಸಿದ್ದಾರೆ.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಪಕ್ಷ ಕಟ್ಟಿ ಬೆಳೆಸಿದ ಮಾಜಿ ಸಚಿವ ಎಸ್.ಎ. ರವೀಂದ್ರನಾಥ್ ಅವರ ಬಗ್ಗೆ ಅಪಾರ ಗೌರವವಿದೆ. ಆದರೆ ಸಿದ್ದೇಶ್ವರ 20 ವರ್ಷ ಅಧಿಕಾರ ಅನುಭವಿಸಿದ್ದು ಬಿಟ್ಟರೆ ಅವರ ಸಾಧನೆ ಏನೂ ಇಲ್ಲ ಎಂದರು.

ನನ್ನಂತ ಹಿರಿಯರನ್ನೂ ಸಿದ್ದೇಶ್ವರ ಅವರು ಗಣನೆಗೆ ತೆಗದುಕೊಳ್ಳದೆ ಹೀನಾಯವಾಗಿ ನೋಡಿಕೊಳ್ಳುತ್ತಾರೆ. ಅವರ ನಡೆಯಿಂದ ಬೇಸತ್ತು, ಅವರಿಂದ ಸಮಾಜಕ್ಕೆ, ಸಾರ್ವಜನಿಕರಿಗೆ ಏನೂ ಕೊಡುಗೆ ಇಲ್ಲ ಎಂದರಿತು ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರಬೇಕಾಯಿತು. ನನ್ನಂತೆಯೇ ನೂರಾರು ಕಾರ್ಯಕರ್ತರು ಬಿಜೆಪಿಯಲ್ಲಿ ನೋವು ಅನುಭವಿಸುತ್ತಿದ್ದಾರೆ ಎಂದರು.

ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ವಿದ್ಯಾವಂತೆ, ಬಹು ಭಾಷಾ ಜ್ಞಾನವಿದೆ. ಸಂಸತ್‌ನಲ್ಲಿ ಕ್ಷೇತ್ರದ ಸಮಸ್ಯೆಗಳನ್ನು ತಿಳಿಸಿ ಅನುದಾನ ತರಬಲ್ಲವರಾಗಿದ್ದಾರೆ. ಶಾಮನೂರು ಕುಟುಂಬ ಜನರ ಕಷ್ಟ-ಸುಖಗಳಿಗೆ ಸ್ಪಂದಿಸುತ್ತದೆ. ಈ ಹಿನ್ನೆಲೆಯಲ್ಲಿ ಪ್ರಭಾ ಮಲ್ಲಿಕಾರ್ಜುನ್ ಅವರ ಗೆಲವು ಖಚಿತ ಎಂದು ಹೇಳಿದರು.

ಬಿಜೆಯ ಮುಖಂಡ ರವಿಕುಮಾರ್ ಅವರು, ಸಚಿವ ಮಲ್ಲಿಕಾರ್ಜುನ್ ಅಭಿವೃದ್ಧಿ ಕುರಿತ ಚರ್ಚೆಗೆ ಬರಲಿ ಎಂದು ಸವಾಲಾಕಿದ್ದಾರೆ. ಅದಕ್ಕೆ ಉತ್ತರಿಸಲು ಸಚಿವರೇ ಬರಬೇಕೆಂದಿಲ್ಲ. ನಾನೂ ಸಿದ್ಧನಿದ್ದೇನೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಎಸ್.ಎಲ್. ಆನಂದಪ್ಪ, ಮಟ್ಟಿಕಲ್ ವೀರಭದ್ರ ಸ್ವಾಮಿ, ಅಣಜಿ ಬಸವರಾಜ್, ಶಶಿಖೇರ್, ಮಟ್ಟಿಕಲ್ ಅಜ್ಜಪ್ಪ, ಮಟ್ಟಿಕಲ್ ಪ್ರಕಾಶ್, ಅಕ್ಕಿ ರಾಮಚಂದ್ರಪ್ಪ, ರಾಜೇಶ್ ಈಡೀಗರ್, ವಿಜಯಕುಮಾರ್, ರಾಘವೇಂದ್ರ ಕೊಡಗನೂರು, ಪರಮೇಶ್ವರಪ್ಪ, ಮಹಾಂತೇಶ್, ಎ.ಗುಡ್ಡಪ್ಪ ಇತರರಿದ್ದರು.

# ಸಾಸ್ವೇಹಳ್ಳಿ ಯೋಜನೆ ತಂದಿದ್ದು ನಾನು, ಮಾಡಾಳು : ಸಿದ್ದೇಶ್ವರ

## ಚನ್ನಗಿರಿ, ಸಂತೆಬೆನ್ನೂರಿನಲ್ಲಿ ಬೃಹತ್ ರೋಡ್ ಶೋ : ಗಾಯತ್ರಿ ಸಿದ್ದೇಶ್ವರ ಪರ ಪ್ರಚಾರ

ಚನ್ನಗಿರಿ, ಮೇ 1- ತಾಲ್ಲೂಕಿಗೆ ಸಾಸ್ವೇಹಳ್ಳಿ ಏತ ನೀರಾವರಿ ಯೋಜನೆ ತಂದಿದ್ದು ನಾನು ಮತ್ತು ಆಗ ಶಾಸಕರಾಗಿದ್ದ ಮಾಡಾಳು ವಿರೂಪಾಕ್ಷಪ್ಪ. ಸಿರಿಗೆರೆ ಶ್ರೀಗಳ ಸಹಕಾರದಿಂದ ನಾವು ಯೋಜನೆ ತಂದಿದ್ದು, ಇದಕ್ಕೂ ಕಾಂಗ್ರೆಸ್‌ಗೂ ಯಾವುದೇ ಸಂಬಂಧವಿಲ್ಲ ಎಂದು ಸಂಸದ ಜಿ.ಎಂ. ಸಿದ್ದೇಶ್ವರ ತಿಳಿಸಿದರು.



ಚನ್ನಗಿರಿ, ಸಂತೆಬೆನ್ನೂರಿನಲ್ಲಿ ಪತ್ನಿ ಗಾಯಿತ್ರಿ ಸಿದ್ದೇಶ್ವರ ಪರ ಇಂದು ರೋಡ್ ಶೋ ನಡೆಸಿ ಮಾತನಾಡಿದ ಅವರು, ಸಾಸ್ವೇಹಳ್ಳಿ ಏತ ನೀರಾವರಿ ಯೋಜನೆ ಇಷ್ಟೊತ್ತಿಗೆ ಪೂರ್ತಿಗೊಂಡು ಕೆರೆಗಳಿಗೆ ನೀರು ತುಂಬಿಸಬೇಕಿತ್ತು. ಆದರೆ, ಯಾರೋ ಒಬ್ಬರು ನ್ಯಾಯಾಲಯಕ್ಕೆ ಹೋಗಿದ್ದರಿಂದ ಅನುಷ್ಠಾನ ವಿಳಂಬವಾಗಿದೆ. ನ್ಯಾಯಾಲಯದಲ್ಲಿನ ಪ್ರಕರಣ ಇತ್ತೀಚೆಗಷ್ಟೇ ಕ್ಲಿಯರ್ ಆಗಿದೆ. ಬರುವ ಮಳೆಗಾಲದಲ್ಲಿ ಚನ್ನಗಿರಿ ತಾಲ್ಲೂಕಿನ ಎಲ್ಲಾ ಕೆರೆ ತುಂಬಿಸಲಾಗುವುದು. ಈ ಯೋಜನೆಗೂ ಕಾಂಗ್ರೆಸ್ ಸರ್ಕಾರಕ್ಕೂ ಯಾವುದೇ ಸಂಬಂಧವಿಲ್ಲ ಎಂದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 1 ವರ್ಷ ಕಳೆದರೂ ಒಂದೇ ಒಂದು ಅಭಿವೃದ್ಧಿ ಕೆಲಸಗಳು ಆಗಿಲ್ಲ. ಮಾಡಾಳು ವಿರೂಪಾಕ್ಷಪ್ಪ ಚನ್ನಗಿರಿ ಪಟ್ಟಣದ ಯುಜಿಡಿಗೆ ಅಂತ 100 ಕೋಟಿ ರೂ. ಅನುದಾನ ತಂದಿದ್ದರು. ಈಗಿನ ಶಾಸಕರು ಆ ಅನುದಾನ ಬಳಸಿಕೊಂಡು ಕೆಲಸ ಮಾಡತ್ತಿದ್ದಾರೆ. ನಾವು ಹಣ ತರುವುದು, ಕೆಲಸ ಮಾಡುವುದು. ಕಾಂಗ್ರೆಸ್‌ನವರು ಬಂದು ಶಂಕುಸ್ಥಾಪನೆ, ಉದ್ಘಾಟನೆ ಮಾಡುವುದು ಆಗಿದೆ ಎಂದು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಚನ್ನಗಿರಿ ಅಡಕೆ ನಾಡು. ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಮೊನ್ನೆ ಚನ್ನಗಿರಿಗೆ ಬಂದಾಗ ಹೇಳ್ತಿದ್ರು ನಾವು ಪಾನ್ ಮಸಾಲ, ಗುಟ್ಕಾ ತಯಾರು ಮಾಡ್ತಿವಿ, ನಿಮ್ಮ ಆರೋಗ್ಯ ಕೆಡುತ್ತದೆ ಎಂದು. ಇದೇ ಎಸ್.ಎಸ್. ಮಲ್ಲಿಕಾರ್ಜುನ್ 'ಫೈರ್' ಅನ್ನೋ ಹೆಸರಿನಲ್ಲಿ ಗುಟ್ಕಾ ತಯಾರಿಸಿ, ಮಾರಾಟ ಮಾಡುತ್ತಿದ್ದಾರೆ. ಕಲ್ಲೇಶ್ವರ ಮಿಲ್ ಪಕ್ಕದಲ್ಲೇ ಫ್ಯಾಕ್ಟರಿ ಮಾಡಿಕೊಂಡಿದ್ದಾರೆ. ಈಗ ಅವರ ಪತ್ನಿ ದಂತ ವೈದ್ಯೆ ಬಂದು ನಿಮ್ಮ ಹಲ್ಲು ಕ್ಲೀನ್ ಮಾಡ್ತಾರಂತೆ. ಮಲ್ಲಿಕಾರ್ಜುನ್ ಬಾಯಿ ಬಿಟ್ಟರೆ ಬರೀ ಸುಳ್ಳೇ ಹೇಳುವುದು ಎಂದು ಚಾಟೀ ಬಿಸಿದರು.

ಮಾಜಿ ಶಾಸಕ ಮಾಡಾಳ್ ವಿರೂಪಾಕ್ಷಪ್ಪ ಮಾತನಾಡಿ, ಚನ್ನಗಿರಿ ತಾಲ್ಲೂಕು ಮೊದಲು ಗ್ರಾಮದ ರೀತಿ ಇತ್ತು. ನಾನು ಮತ್ತು ಸಿದ್ದೇಶಣ್ಣ ಚನ್ನಗಿರಿ ತಾಲ್ಲೂಕಿನ ಅಭಿವೃದ್ಧಿಗೆ ಶ್ರಮಿಸಿದ್ದೇವೆ. ನೀವು ಪ್ರತಿ ನಿತ್ಯ ಓಡಾಡುವ ಸಿಸಿ ರಸ್ತೆ ನಾವು ಮಾಡಿಸಿದ್ದು. 100 ಹಾಸಿಗೆ ಆಸ್ಪತ್ರೆ, ಚನ್ನಗಿರಿ ಕೆರೆ ಅಭಿವೃದ್ಧಿ, ಉಬ್ರಾಣಿ ಏತ ನೀರಾವರಿ ಯೋಜನೆ, ಸಾಸ್ವೇಹಳ್ಳಿ ಏತ ನೀರಾವರಿ ಯೋಜನೆ ಹೀಗೆ ಹತ್ತ ಹಲವು ಯೋಜನೆ ತರುವುದಕ್ಕೆ ಸಿದ್ದೇಶಣ್ಣನ ಶ್ರಮವೂ ಇದೆ. ಹೀಗಾಗಿ ಈ ಬಾರಿ ಗಾಯಿತ್ರಿ ಸಿದ್ದೇಶ್ವರ ಅವರನ್ನು ಹೆಚ್ಚಿನ ಮತಗಳ ಅಂತರದಿಂದ ಗೆಲ್ಲಿಸಿ ದೆಹಲಿಗೆ ಕಳುಹಿಸುವ ಜವಾಬ್ದಾರಿ ನಮ್ಮ ಮೇಲಿದೆ ಎಂದರು.

ನರೇಂದ್ರ ಮೋದಿ ಅವರು 3ನೇ ಬಾರಿಗೆ ಪ್ರಧಾನ ಮಂತ್ರಿ ಆಗಬೇಕು ಎಂಬುದು ಇಡೀ ಭಾರತೀಯರ ಆಶಯ. ಮೋದಿ ಅವರು ಮತ್ತೊಮ್ಮೆ ಪ್ರಧಾನಿ ಆಗುವುದನ್ನು ಕಣ್ತುಂಬಿಕೊಳ್ಳಲು ವಿಶ್ವವೇ ಕಾಯುತ್ತಿದೆ. ಅಂತಹ ಕ್ಷಣ ನಮ್ಮ ಕಣ್ಮುಂದೆ ಬರಬೇಕು ಅಂದರೆ ಗಾಯಿತ್ರಿ ಅಕ್ಕ ಇಲ್ಲಿಂದ ಅತೀ ಹೆಚ್ಚು ಮತಗಳ ಅಂತರದಿಂದ ಗೆದ್ದು ಸಂಸತ್ತಿಗೆ ಹೋಗಬೇಕು. ಆಗ ಮಾತ್ರ ನರೇಂದ್ರ ಮೋದಿ ಜೀ ಅವರ ಕೈ ಬಲಪಡಿಸಲು ಸಾಧ್ಯ ಎಂದು ಕರೆ ನೀಡಿದರು.

ಬಿಜೆಪಿ ಯುವ ಮುಖಂಡ ಮಾಡಾಳ್ ಮಲ್ಲಿಕಾರ್ಜುನ್, ತುಮ್ ಕೋಸ್ ಮಾಜಿ ಅಧ್ಯಕ್ಷ ಹೆಚ್.ಎಸ್.ಶಿವಕುಮಾರ್, ಬಿಜೆಪಿ ಪ್ರಧಾನ ಕಾರ್ಯದರ್ಶಿ ಬಿ.ಎಸ್.ಜಗದೀಶ್ ಮತ್ತು ಇತರರು ಪ್ರಚಾರ ಕಾರ್ಯದಲ್ಲಿ ಭಾಗಿಯಾಗಿದ್ದರು.

ನಾನು 2004 ರ ಚುನಾವಣೆ ವೇಳೆ ಅನಾರೋಗ್ಯದಿಂದ ಆಸ್ಪತ್ರೆ ದಾಖಲಾಗಿದ್ದೆ. ಆಗ ಇದೇ ಕಾಂಗ್ರೆಸ್‌ನವರು ಸಿದ್ದೇಶರಪ್ಪ ಸಾಯ್ತಾನೆ. ಅವನಿಗೆ ವೋಟ್ ಹಾಕಬೇಡಿ. ಮತ್ತೆ ಬೈ ಎಲೆಕ್ಷನ್ ಬರತ್ತೆ ಎಂದು ಸುಳ್ಳು ಹಬ್ಬಿಸಿದ್ದರು. ನಾನು ಈಗಲೂ ಬದುಕಿದ್ದೇನೆ. ಸೂಳೆಕೆರೆ ನೀರು ಭೀಮಸಮುದ್ರಕ್ಕೆ ತೆಗೆದುಕೊಂಡು ಹೋಗುತ್ತೇನೆ ಎಂದರು. ಆದರೆ, ನಾನು, ಮಾಡಾಳು ವಿರೂಪಾಕ್ಷಪ್ಪ ಸೂಳೆಕೆರೆ ಅಭಿವೃದ್ಧಿಪಡಿಸಿದ್ದೀವಿ. ಲೋಕಸಭಾ ಕ್ಷೇತ್ರದ ಮತದಾರರು ನನ್ನ ತಂದೆಯವರನ್ನು 2 ಬಾರಿ, ನನ್ನನು 4 ಬಾರಿ ಲೋಕಸಭೆಗೆ ಕಳುಹಿಸಿದ್ದಾರೆ. ಕ್ಷೇತ್ರದ ಜನತೆಗೆ ಮಲ್ಲಿಕಾರ್ಜುನಪ್ಪ ಫ್ಯಾಮಿಲಿ ಬಗ್ಗೆ ಗೊತ್ತಿದೆ.

**- ಜಿ.ಎಂ.ಸಿದ್ದೇಶ್ವರ**, ಸಂಸದರು

ಚನ್ನಗಿರಿ ತಾಲ್ಲೂಕಿನ ಅಭಿವೃದ್ಧಿಗೆ ಜಿ.ಎಂ.ಸಿದ್ದೇಶ್ವರ ಹಾಗೂ ಮಾಡಾಳು ವಿರೂಪಾಕ್ಷಪ್ಪ ಅವರ ಕೊಡುಗೆ ಅಪಾರ. ಕ್ಷೇತ್ರದ ಜನ ಪ್ರತಿ ಚುನಾವಣೆಯಲ್ಲೂ ಬಿಜೆಪಿಗೆ ಲೀಡ್ ನೀಡಿದ್ದೀರಿ. ಈ ಬಾರಿ ಚನ್ನಗಿರಿ ಕ್ಷೇತ್ರದಿಂದ 1 ಲಕ್ಷಕ್ಕೂ ಹೆಚ್ಚಿನ ಲೀಡ್ ಬರುವ ನಿರೀಕ್ಷೆ ಇದೆ. ಮತದಾನಕ್ಕೆ 6 ದಿನ ಬಾಕಿ ಇದೆ. ಕಾರ್ಯಕರ್ತರು ಸೈನಿಕರಂತೆ ಕೆಲಸ ಮಾಡಬೇಕು ಎಂದು ಮನವಿ ಮಾಡುತ್ತೇವೆ.

**- ಗಾಯಿತ್ರಿ ಸಿದ್ದೇಶ್ವರ**, ಬಿಜೆಪಿ ಅಭ್ಯರ್ಥಿ

# ನಮ್ಮನ್ನು ರಕ್ಷಿಸುವ, ದೇಶದ ಹಿತ ಕಾಪಾಡುವ ವ್ಯಕ್ತಿಗೆ ಮತ ಹಾಕಿ



**ಮತದಾನದ ಅರಿವು ಕಾರ್ಯಕ್ರಮದಲ್ಲಿ ವಕೀಲ ಎಲ್. ದಯಾನಂದ್**

ದಾವಣಗೆರೆ, ಮೇ 1- ಮತದಾರರು ಯಾವುದೇ ಕಾರಣಕ್ಕೂ ಆಸೆ ಆಮಿಷಕ್ಕೆ ಒಳಗಾಗದೇ ಉತ್ತಮ ನಾಯಕತ್ವ ಇರುವವರನ್ನು ಆಯ್ಕೆ ಮಾಡಬೇಕು ಎಂದು ಜಿಲ್ಲಾ ಅದಿವಕ್ತಾ ಪರಿಷತ್ತಿನ ಅಧ್ಯಕ್ಷರೂ ಆಗಿರುವ ಹಿರಿಯ ನ್ಯಾಯವಾದಿ ಎಲ್. ದಯಾನಂದ ಮನವಿ ಮಾಡಿದರು.

ನಗರದ ಕರೂರು ಇಂಡಸ್ಟ್ರೀಯಲ್ ಏರಿಯದಲ್ಲಿರುವ ಬಸವೇಶ್ವರ ಗಾರ್ಮೆಂಟ್ ನಲ್ಲಿ ಅಧಿವಕ್ತಾ ಪರಿಷತ್ ಕರ್ನಾಟಕ ದಕ್ಷಿಣ ಪ್ರಾಂತದ ಜಿಲ್ಲಾ ಘಟಕದ ವತಿಯಿಂದ ನಿನ್ನೆ ಹಮ್ಮಿಕೊಳ್ಳಲಾಗಿದ್ದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅಲ್ಲಿನ ಕೆಲಸಗಾರರನ್ನು ಉದ್ದೇಶಿಸಿ ಅವರು ಮಾತನಾಡಿದರು.

'ಮತದಾನ ನಿಮ್ಮ ಹಕ್ಕು, ನೀವು ತಪ್ಪದೇ ಮತ ಚಲಾಯಿಸಿ, ನಮ್ಮನ್ನು ರಕ್ಷಿಸುವ, ದೇಶದ ಹಿತ ಕಾಪಾಡಲು ಇರುವ ವ್ಯಕ್ತಿಗೆ ಮತ ಹಾಕಿ ಎಂದು ಹೇಳಿದರು. ನಮ್ಮ ಮತ ನಮ್ಮ ಭವಿಷ್ಯ, ಚುನಾವಣೆಯಲ್ಲಿ ಹಬ್ಬದ ರೀತಿ ಭಾಗವಹಿಸಿ ಮತದಾನ ಮಾಡಿ ಎಂದೂ ಅವರು ಸಲಹೆ ನೀಡಿದರು

ಅಧ್ಯಕ್ಷತೆಯನ್ನು ಗಾರ್ಮೆಂಟ್ ಮಾಲೀಕ ಬಾದಾಮಿ ಜಯಣ್ಣ ವಹಿಸಿದ್ದರು. ಮತ್ತೋರ್ವ ಮಾಲೀಕ ಬಾದಾಮಿ ಮುರುಗೇಶ್, ಲೋಕಾಯುಕ್ತ ಅಭಿಯೋಜಕರಾದ ಸಿ. ಪಿ. ಅನಿತಾ, ವಕೀಲರುಗಳಾದ ಬಿ. ಬಿ. ರಾಮಪ್ಪ, ಎಸ್ ಹೆಚ್. ವಿನಯ ಕುಮಾರ್, ಹೆಚ್ ಶಿವಣ್ಣ, ಎಲ್. ತಿಪ್ಪೇಶ್, ಡಿ. ಹೆಚ್. ರಾಜು, ಶಂಕರ್, ಶ್ರೀಮತಿ ವನಜಾಕ್ಷಿ, ನೋಟರಿ ನೀಲಕಂಠ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಪಂಚಮಸಾಲಿ ಸಮಾಜಕ್ಕೆ ಸಿದ್ದೇಶ್ವರ ಅಪಮಾನ : ಅಶೋಕ್

ದಾವಣಗೆರೆ, ಮೇ 1- ಸಂಸದ ಜಿ.ಎಂ. ಸಿದ್ದೇಶ್ವರ ಅವರಿಂದ ಪಂಚಮಸಾಲಿ ಸಮಾಜಕ್ಕೆ ಅಪಮಾನ, ಅನ್ಯಾಯವಾಗಿದ್ದು, ಸಮಾಜ ಬಾಂಧವರು ಈ ಚುನಾವಣೆಯಲ್ಲಿ ತಕ್ಕ ಪಾಠ ಕಲಿಸುವಂತೆ ಅಖಿಲ ಭಾರತ ಲಿಂಗಾಯತ ಪಂಚಮಸಾಲಿ ಸಮಾಜದ ಜಿಲ್ಲಾಧ್ಯಕ್ಷ ಅಶೋಕ್ ಗೋಪನಾಳ್ ಕರೆ ನೀಡಿದ್ದಾರೆ.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ನಾಲ್ಕು ತಿಂಗಳ ಹಿಂದೆ ಕೋಳೇನಹಳ್ಳಿ ಗ್ರಾಮದಲ್ಲಿ ರಾಣಿ ಚನ್ನಮ್ಮನ ಕಂಚಿನ ಪ್ರತಿಮೆ ನಿರ್ಮಾಣಕ್ಕೆ ಹಣ ಕೇಳಲು ಹಾಗೂ ಕಾರ್ಯಕ್ರಕ್ಕೆ ಆಹ್ವಾನಿಸಲು ಸಮಾಜ ಬಾಂಧವರು ಸಂಸದರ ಬಳಿ ಹೋಗಿದ್ದಾಗ ಅವರು ಅತಿ ಕೀಳು ಮಟ್ಟದಲ್ಲಿ ನಿಂದಿಸಿ ಕಳುಹಿಸಿದ್ದಾರೆ. ಇಂತಹ ಸಂಸದರಿಗೆ ಸಮಾಜ ಬಾಂಧವರೇ ಉತ್ತರಿಸಬೇಕು ಎಂದರು.

ಹರಪನಹಳ್ಳಿ ತಾ. ಪಂಚಮಸಾಲಿ ಮುಖಂಡ ಕೊಟ್ಟೂರು ಗೌಡ್ರು ಮಾತನಾಡಿ, ಯಡಿಯೂರಪ್ಪನವರು ನಮ್ಮ ಸಮಾಜದ ಮುಖಂಡ ಯತ್ನಾಳ್ ಅವರಿಗೆ ರಾಜ್ಯಾಧ್ಯಕ್ಷ ಸ್ಥಾನ ಕೊಡದೆ ಅನ್ಯಾಯ ಮಾಡಿದರು. ಇಲ್ಲಿನ ಸಂಸದರು ನಮ್ಮ ಸಮಾಜದ ಅಜಯ್ ಕುಮಾರ್ ಸೇರಿದಂತೆ ಲೋಕಿಕೆರೆ ನಾಗರಾಜ್ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧಿಸಿದಾಗ ಮತ ಪ್ರಚಾರ ಮಾಡದೆ ಸೋಲಿಗೆ ಕಾರಣರಾದರು ಎಂದು ಆರೋಪಿಸಿದರು. ಸಂಸದರ ವರ್ತನೆ, ಸಮಾಜಕ್ಕೆ ಆಗುತ್ತಿರುವ ಅನ್ಯಾಯದಿಂದ ಬೇಸತ್ತು ನಾನು ಈಗಾಗಲೇ ಕಾಂಗ್ರೆಸ್ ಸೇರಿದ್ದೇನೆ ಎಂದು ಅಶೋಕ್ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಸಿದ್ದಪ್ಪ ಕಂಚಿಕೇರಿ, ಕೋಳೇನಹಳ್ಳಿಯ ಸ್ವಾಮಿಲಿಂಗಪ್ಪ, ಕರಿಯಪ್ಪ, ನಾಗರಾಜ್, ಮಾರಿ ಮೂರ್ತಿ, ಹೇಮಣ್ಣ, ಷಣ್ಮುಖಪ್ಪ, ಬಸವನಗೌಡ್ರು ಉಪಸ್ಥಿತರಿದ್ದರು.

# ಬಸವ ಜಯಂತಿ: ನಗರದಲ್ಲಿ ನಾಡಿದ್ದು ಪ್ರಭಾತ್‌ಪೇರಿ

ದಾವಣಗೆರೆ, ಮೇ 1 - 112ನೇ ವರ್ಷದ ಬಸವ ಜಯಂತ್ಯೋತ್ಸವದ ಪ್ರಯುಕ್ತ ಶ್ರೀ ವಿರಕ್ತ ಮಠ ಮತ್ತು ಲಿಂಗಾಯತ ತರುಣ ಸಂಘ ಇವರ ಜಂಟಿ ಆಶ್ರಯದಲ್ಲಿ ಇದೇ ದಿನಾಂಕ 4ರ ಶನಿವಾರದಿಂದ ಇದೇ ದಿನಾಂಕ 10ರ ಶುಕ್ರವಾರದವರೆಗೆ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ವಿರಕ್ತ ಮಠ - ಶ್ರೀ ಶಿವಯೋಗಾಶ್ರಮದ ಶ್ರೀ ಬಸವಪ್ರಭು ಸ್ವಾಮೀಜಿ ತಿಳಿಸಿದ್ದಾರೆ.

ಇದೇ ದಿನಾಂಕ 4ರ ಶನಿವಾರದಿಂದ ಪ್ರತಿದಿನ ಬೆಳಿಗ್ಗೆ 7.30 ಕ್ಕೆ ನಗರದ ವಿವಿಧ ಬಡಾವಣೆಗಳಲ್ಲಿ ಬಸವ ಪ್ರಭಾತ್ ಪೇರಿ ಜರುಗಲಿದ್ದು, ಈ ಪ್ರಭಾತ್ ಪೇರಿಗೆ ಬಸವ ಕಲಾ ಲೋಕ ಪ್ರತಿನಿತ್ಯ ವಚನ ಭಜನೆ ಸಾಥ್ ನೀಡಲಿದೆ.

4ರ ಶನಿವಾರ ಶ್ರೀ ವಿರಕ್ತ ಮಠದಿಂದ ಆರಂಭವಾಗುವ ಪಾದಯಾತ್ರೆಯು ಶ್ರೀ ಬಕ್ಕೇಶ್ವರ ದೇವಸ್ಥಾನ, ಮಹಾರಾಜಪೇಟೆ, ಗಾಂಧಿ ನಗರ, ಕಾಳಿಕಾದೇವಿ ರಸ್ತೆಯಲ್ಲಿ ಸಂಚರಿಸಲಿದೆ.

ದಿನಾಂಕ 5ರ ಭಾನುವಾರ ಸ್ವಾಗೇರ ಪೇಟೆ, ಒಕ್ಕಲಿಗರ ಪೇಟೆ, ಕಾಯಿಪೇಟೆ, ದಿನಾಂಕ 6ರ ಸೋಮವಾರ ಮದಕರಿ ನಾಯಕ ವೃತ್ತ, ಜಾಲಿನಗರ ಸೇರಿದಂತೆ ಪ್ರಮುಖ ಬೀದಿಗಳಲ್ಲಿ ಬಸವ ಪ್ರಭಾತ್ ಪೇರಿ ಸಂಚರಿಸಲಿದೆ.

ದಿನಾಂಕ 7ರ ಮಂಗಳವಾರ ಮದಕರಿ ನಾಯಕ ವೃತ್ತ, ಛಲವಾದಿ ಕೇರಿ, ದಿನಾಂಕ 8ರ ಬುಧವಾರ ಮದಕರಿ ನಾಯಕ ವೃತ್ತ, ತಳವಾರ ಕೇರಿ, ಕುರುಬರ ಕೇರಿ, ಬೂದಾಳ್ ರಸ್ತೆ, ಕಾಳಿಕಾದೇವಿ ರಸ್ತೆ, ದಿನಾಂಕ 9ರ ಗುರುವಾರ ಕಾಳಿಕಾದೇವಿ ರಸ್ತೆ, ಆನೆಕೊಂಡ ಪೇಟೆ, ಹಳೇಪೇಟೆ, ಎಸ್.ಕೆ.ಪಿ. ರಸ್ತೆಯಿಂದ ವಿರಕ್ತ ಮಠ ತಲುಪಲಿದೆ.

ಬಸವ ಪ್ರಭಾತ್ ಪೇರಿಯಲ್ಲಿ ಭಾಗವಹಿಸಲಿಚ್ಛಿಸುವವರು ವಿವರಕ್ಕೆ ಮೊಬೈಲ್ 96118-89151 ರಲ್ಲಿ ಸಂಪರ್ಕಿಸುವಂತೆ ಲಿಂಗಾಯತ ತರುಣ ಸಂಘದ ಸಂಚಾಲಕ ಕಣಕುಪ್ಪಿ ಮುರುಗೇಶಪ್ಪ ಕೋರಿದ್ದಾರೆ.

ಇದೇ ದಿನಾಂಕ 6ರ ಸೋಮವಾರ ಸಂಜೆ 4 ಕ್ಕೆ ವಿರಕ್ತ ಮಠದಲ್ಲಿ ಮಕ್ಕಳಿಗಾಗಿ ವಚನ ಸ್ಪರ್ಧೆ ಏರ್ಪಡಿಸಲಾಗಿದೆ.

ದಿನಾಂಕ 10ರ ಶುಕ್ರವಾರ ಬಸವ ಜಯಂತಿ ದಿನದಂದು ಬೆಳಿಗ್ಗೆ 7.30ಕ್ಕೆ ಐತಿಹಾಸಿಕ ಶ್ರೀ ಗುರು ಬಸವಣ್ಣನವರ ಉತ್ಸವ, ವಿಶ್ವಗುರು ಬಸವಣ್ಣನವರ ಭಾವಚಿತ್ರದೊಂದಿಗೆ, ಬಸವಾದಿ ಶರಣರ ವಚನ ಗ್ರಂಥ ಮೆರವಣಿಗೆ ನಡೆಯಲಿದೆ. ಮೆರವಣಿಗೆಯು ವಿರಕ್ತಮಠದಿಂದ ಹೊರಟು ಶ್ರೀ ಬಕ್ಕೇಶ್ವರ ದೇವಸ್ಥಾನ, ಹಾಸಬಾವಿ ವೃತ್ತ, ಬಸವರಾಜಪೇಟೆ, ಕಾಳಿಕಾದೇವಿ ರಸ್ತೆಯಿಂದ ಶ್ರೀ ವಿರಕ್ತಮಠ ತಲುಪಲಿದೆ.



ಬೆಳಿಗ್ಗೆ 9.30ಕ್ಕೆ ನಡೆಯುವ ಶ್ರೀ ಗುರು ಬಸವಣ್ಣನವರ ತೊಟ್ಟಿಲು ಕಾರ್ಯಕ್ರಮದಲ್ಲಿ ಸಣ್ಣ ಮಕ್ಕಳಿಗೆ ನಾಮಕರಣ ಮಾಡಲಾಗುವುದು.

ನಂತರ ಬೆಳಿಗ್ಗೆ 10 ಕ್ಕೆ, ದೇಶದಲ್ಲೇ ಪ್ರಪ್ರಥಮ ಬಾರಿಗೆ 1913ರಲ್ಲಿ ದಾವಣಗೆರೆ ಶ್ರೀ ವಿರಕ್ತ ಮಠದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ ಯನ್ನು ಪ್ರಾರಂಭಿಸಿದ್ದ ಅಂದಿನ ವಿರಕ್ತ ಮಠಾಧೀಶರಾದ ಲಿಂ. ಶ್ರೀ ಮೃತ್ಯುಂಜಯ ಅಪ್ಪಗಳವರ ಹಾಗೂ ಕರ್ನಾಟಕ ಗಾಂಧಿ ಲಿಂ. ಹರ್ಡೇಕರ್ ಮಂಜಪ್ಪನವರ ಸ್ಮರಣೋತ್ಸವವನ್ನು ದೊಡ್ಡ ಪೇಟೆಯಲ್ಲಿರುವ ವಿರಕ್ತಮಠದಲ್ಲಿ ಹಮ್ಮಿಕೊಳ್ಳ ಲಾಗಿದೆ. ಇದೇ ಸಂದರ್ಭದಲ್ಲಿ ಚಿತ್ರದುರ್ಗದ ಜಾನಪದ ಕಲಾವಿದ ಗಂಜಿಗಟ್ಟೆ ಕೃಷ್ಣಮೂರ್ತಿ ಅವರಿಂದ ವಚನ ಸಂಗೀತ ಏರ್ಪಾಡಾಗಿದೆ.

ಬಸವ ಜಯಂತಿ ಪ್ರಯುಕ್ತ ಜನಜಾಗೃತಿಗಾಗಿ ಬಸವ ಪ್ರಭಾತ್ ಪೇರಿಯನ್ನು ಲಿಂ. ಕಣಕುಪ್ಪಿ ಕೊಟ್ರಬಸಪ್ಪ ಮತ್ತು ಲಿಂ. ಕಣಕುಪ್ಪಿ ಗುರುಪಾದಪ್ಪ ಅವರುಗಳ ನೇತೃತ್ವ ದಲ್ಲಿ 108 ವರ್ಷಗಳ ಹಿಂದೆ ಪ್ರಾರಂಭಿಸಲಾಗಿದ್ದು, ಅಂದಿನಿಂದ ಪ್ರತಿ ವರ್ಷವೂ ಬಸವ ಪ್ರಭಾತ್ ಪೇರಿ ನಡೆಸಲಾಗುತ್ತಿದೆ ಎಂದು ಲಿಂಗಾಯತ ತರುಣ ಸಂಘದ ಸಂಚಾಲಕ ಕಣಕುಪ್ಪಿ ಮುರುಗೇಶಪ್ಪ ತಿಳಿಸಿದ್ದಾರೆ.

# ತ್ರಿಕೋನ ಸ್ಪರ್ಧೆಯಲ್ಲಿ ನಾನೇ ಮುಂದು : ವಿನಯ್



ಚನ್ನಗಿರಿ, ಮೇ 1- ದಾವಣಗೆರೆ ಲೋಕಸಭಾ ಕ್ಷೇತ್ರದ ಪಕ್ಷೇತರ ಅಭ್ಯರ್ಥಿ ಜಿ.ಬಿ.ವಿನಯ್ ಕುಮಾರ್ ಅವರು ಚನ್ನಗಿರಿ ತಾಲ್ಲೂಕಿನ ಸಂತೇಬೆನ್ನೂರು ಗ್ರಾಮದಲ್ಲಿ ಭರ್ಜರಿ ರೋಡ್ ಶೋ ನಡೆಸಿದರು. ನೂರಾರು ಗ್ರಾಮಸ್ಥರು ವಿನಯ್ ಕುಮಾರ್ ಅವರಿಗೆ ಅದ್ದೂರಿ ಸ್ವಾಗತ ಕೋರಿದರು. ಜನರಿಂದ ಭಾರೀ ಬೆಂಬಲ ವ್ಯಕ್ತವಾಯಿತು.

ವಿನಯ್ ಕುಮಾರ್ ಅವರು ಸಂತೇಬೆನ್ನೂರಿಗೆ ಆಗಮಿಸುತ್ತಿದ್ದಂತೆ ಪಟಾಕಿ ಸಿಡಿಸಿ, ಸಂಭ್ರಮಿಸಿದ ಗ್ರಾಮಸ್ಥರು, ಹೂವಿನ ಹಾರ ಹಾಕಿ ಅದ್ದೂರಿಯಾಗಿ ಬರಮಾಡಿಕೊಂಡರು.

ಈ ವೇಳೆ ಜನರನ್ನುದ್ದೇಶಿಸಿ ಮಾತನಾಡಿದ ವಿನಯ್ ಕುಮಾರ್ ಅವರು, ಸಂತೇಬೆನ್ನೂರು ಪುಷ್ಕರಣೆ ತುಂಬಾನೇ ಪ್ರಸಿದ್ಧಿ. ಇದನ್ನು ಐತಿಹಾಸಿಕ ತಾಣವನ್ನಾಗಿಸಲು, ಯುವಕರಿಗೆ ಉದ್ಯೋಗ ದೊರಕುವಂತೆ ಮಾಡಲು ದೊಡ್ಡ ಕೈಗಾರಿಕೆಯನ್ನಾಗಲೀ, ಬಡ ಮಕ್ಕಳೂ ಸೇರಿದಂತೆ ಎಲ್ಲಾ ವರ್ಗದವರಿಗೆ ಅನುಕೂಲವಾಗುವಂತೆ ಹೈಟೆಕ್ ಶಾಲೆ, ಕಾಲೇಜುಗಳಾಗಲೀ ಇಲ್ಲ. ನೀವೆಲ್ಲರೂ ಇಲ್ಲಿಗೆ ಬರುವ ಬೇರೆ ಪಕ್ಷಗಳ ಅಭ್ಯರ್ಥಿಗಳಿಗೆ ಪ್ರಶ್ನೆ ಕೇಳಿ. ಅಧಿಕಾರದಲ್ಲಿದ್ದರೂ ಯಾಕೆ ಈ ಕೆಲಸ ಮಾಡಿಲ್ಲ ? ಎಂದು ಪ್ರಶ್ನಿಸಿ ಎಂದರು.

ಶಾಮನೂರು ಕುಟುಂಬ ಹಾಗೂ ಜಿ.ಎಂ. ಸಿದ್ದೇಶ್ವರ ಕುಟುಂಬದವರು ಹೊಸ ನಾಯಕ ಹುಟ್ಟಬಾರದು ಎಂಬ ನಿರ್ಧಾರ ಮಾಡಿದ್ದಾರೆ. ಯಾರೂ ಬೆಳೆಯದಂತಹ ಪರಿಸ್ಥಿತಿ ನಿರ್ಮಾಣ ಮಾಡಿದ್ದಾರೆ. ಇದು ಕೊನೆಯಾಗಬೇಕೆಂದರೆ ನನಗೆ ಮತ ನೀಡಿ ಲೋಕಸಭೆಗೆ ಕಳುಹಿಸಿಕೊಡಿ ಎಂದು ಮನವಿ ಮಾಡಿದರು. ದಾವಣಗೆರೆ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್, ಬಿಜೆಪಿ ಅಭ್ಯರ್ಥಿ ಗಾಯತ್ರಿ ಸಿದ್ದೇಶ್ವರ ಹಾಗೂ ಪಕ್ಷೇತರ ಅಭ್ಯರ್ಥಿಯಾದ ನನ್ನ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ. ಇತ್ತೀಚಿನ ಸಮೀಕ್ಷೆಗಳ ಪ್ರಕಾರ ಇಬ್ಬರನ್ನೂ ಹಿಂದಿಕ್ಕಿ ನಾನು ಮುಂದೆ ಇದ್ದೇನೆ. ಇದು ಸಾಧ್ಯವಾಗಿರುವುದು ಕ್ಷೇತ್ರದ ಜನರ ಆಶೀರ್ವಾದದಿಂದ ಎಂದು ತಿಳಿಸಿದರು.

ಈ ವೇಳೆ ಸಂತೇಬೆನ್ನೂರು ಗ್ರಾಮದ ಮುಖಂಡರಾದ ಇರ್ಫಾನ್, ರಾಘಣ್ಣ, ಗಂಗಣ್ಣ, ರಾಜೀವ್, ಖಾದರ್, ಫೈರೋಜ್, ಸಾಹಿಂ, ಜೌಬಿ ಸಾಬ್, ಜಬೀರ್, ಜಾಕೀರ್, ಯಂಕೇಶ್ವರಪ್ಪ, ನಾಗರಾಜ್ ಮತ್ತಿತರರು ಹಾಜರಿದ್ದರು.

# ಒಂದು ಬಟನ್ ಒತ್ತುವ ಮೂಲಕ ರಾಷ್ಟ್ರಕ್ಕೆ ಭವಿಷ್ಯ ನೀಡಿ



ದಾವಣಗೆರೆ, ಮೇ 1- ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಸೋಮವಾರ ನಗರದ ಬೀರಲಿಂಗೇಶ್ವರ ದೇವಸ್ಥಾನದ ಬಳಿ ಮತದಾನ ಜಾಗೃತಿ ಜಾಥಾಗೆ ಜಿ.ಪಂ. ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್ ಚಾಲನೆ ನೀಡಿದರು.

'ಒಂದು ಬಟನ್ ಒತ್ತುವ ಮೂಲಕ ಇಡೀ ರಾಷ್ಟ್ರವನ್ನು ಬದಲಾಯಿಸಬಹುದು, 'ಬಟನ್ ಅನ್ನು ಬುದ್ಧಿವಂತಿಕೆಯಿಂದ ಒತ್ತಿರಿ, 'ನಿಮ್ಮ ಮತದ ಮೂಲಕ ನಿಮ್ಮ ಧ್ವನಿಯನ್ನು ಕೇಳಬಹುದು ಸೇರಿದಂತೆ ಹಲವು ಘೋಷ ವಾಕ್ಯ ಕೂಗುತ್ತಿದ್ದರು.

ನಗರದ ಬೀರಲಿಂಗೇಶ್ವರ ದೇವಸ್ಥಾನದಿಂದ ಆರಂಭಗೊಂಡ ಜಾಥಾವು ಪಿ.ಬಿ.ರಸ್ತೆ, ಹಳೇ ಬಸ್ ನಿಲ್ದಾಣ, ಗಾಂಧಿ ಸರ್ಕಲ್, ಅಶೋಕ ರಸ್ತೆಯ ಮಾರ್ಗವಾಗಿ ಜಯದೇವ ವೃತ್ತ ತಲುಪಿ ಕ್ಯಾಂಡಲ್ ಬೆಳಗಿಸಿ, ಮಾನವ ಸರಪಳಿ ನಿರ್ಮಿಸಿ ಮತದಾನ ಜಾಗೃತಿ ಮೂಡಿಸಲಾಯಿತು.

ಈ ವೇಳೆ ಜಿ.ಪಂ. ಉಪನಿರ್ದೇಶಕರಾದ ಶಾರದಾ ದೊಡ್ಡಗೌಡ್ರು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಿಯದರ್ಶಿನಿ, ಯೋಜನಾಧಿಕಾರಿ ಜಿ. ನೇತ್ರಾವತಿ, ಅಂಗನವಾಡಿ ಮೇಲ್ವಿಚಾರಕಿಯರು, ಕಾರ್ಯಕರ್ತೆಯರು, ಸಹಾಯಕಿಯರು ಮತ್ತು ಇತರರು ಇದ್ದರು.

# ಜಿಲ್ಲಾ ಸವಿತಾ ಸಮಾಜದಿಂದ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ



ದಾವಣಗೆರೆ,ಮೇ 1- ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್ ಮಲ್ಲಿಕಾರ್ಜುನ ಅವರಿಗೆ ಸನ್ಮಾನಿಸುವ ಮೂಲಕ ಸವಿತಾ ಸಮಾಜದ ಬಾಂಧವರು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ಸೂಚಿಸಿದರು.

ನಗರದ ಎಂಸಿಸಿ 'ಬಿ' ಬ್ಲಾಕಿನಲ್ಲಿನ ಪಕ್ಷದ ಕಚೇರಿಯಲ್ಲಿ ಜಿಲ್ಲೆಯ ಸವಿತಾ ಸಮಾಜದ ತಾಲ್ಲೂಕುಗಳ ಅಧ್ಯಕ್ಷರುಗಳು ಹಾಗೂ ಪದಾಧಿಕಾರಿಗಳು ಸದಸ್ಯರುಗಳು ಬೆಂಬಲ ವ್ಯಕ್ತಪಡಿಸಿದರು. ಮುಖಂಡರುಗಳು ಸಮಾಜವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವುದು, ನಿವೇಶನ, ಸಮುದಾಯ ಭವನ ಅಭಿವೃದ್ದಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಸಚಿವರ ಮುಂದಿಟ್ಟರು.

ಈ ವೇಳೆ ಸಚಿವರು, ಸಮಾಜದ ಅಭಿವೃದ್ಧಿಗೆ ಕಾಂಗ್ರೆಸ್ ಸದಾ ಇರುವುದು, ಕುಟುಂಬ ಸಮೇತರಾಗಿ ಕಾಂಗ್ರೆಸ್ ಪಕ್ಷಕ್ಕೆ ಮತವನ್ನು ನೀಡಿ ಎಂದರು.

ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಹಾಗೂ ಹರಿಹರ ತಾಲ್ಲೂಕಿನ ಬ್ಲಾಕ್ ಕಾಂಗ್ರೆಸ್ ಉಪಾಧ್ಯಕ್ಷ ಬಿ. ಬಾಲರಾಜ್ ಉಪ್ಪಾಲ, ತಾಲ್ಲೂಕು ಅಧ್ಯಕ್ಷ ಎನ್. ರಂಗಸ್ವಾಮಿ ಸೇರಿದಂತೆ ವಿವಿಧ ತಾಲ್ಲೂಕಿನ ಅಧ್ಯಕ್ಷರುಗಳು ಪದಾಧಿಕಾರಿಗಳು ಈ ಸಂದರ್ಭಧಲ್ಲಿ ಉಪಸ್ಥಿತರಿದ್ದರು.

# ಕಾಂಗ್ರೆಸ್ ಪಕ್ಷಕ್ಕೆ ಅಲೆಮಾರಿ ಬುಡಕಟ್ಟು ಮಹಾಸಭಾ ಬೆಂಬಲ



ದಾವಣಗೆರೆ, ಮೇ 1- ಜಿಲ್ಲಾ ಅಲೆಮಾರಿ ಬುಡಕಟ್ಟು ಮಹಾಸಭಾದ ಪದಾಧಿಕಾರಿಗಳು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ಅವರ ಸಮ್ಮುಖದಲ್ಲಿ ಇಂದು ಕಾಂಗ್ರೆಸ್ ಪಕ್ಷ ಬೆಂಬಲಿಸಿದರು.

ಸಾಮಾಜಿಕ ನ್ಯಾಯ ನೀಡುವ ಪಕ್ಷವಾದ ಕಾಂಗ್ರೆಸ್ ಪಕ್ಷವು ಬಜೆಟ್ ನಲ್ಲಿ ಅಲೆಮಾರಿಗಳ ಶೈಕ್ಷಣಿಕ ಹಾಗೂ ಸಾಮಾಜಿಕ ಅಧ್ಯಯನಕ್ಕೆ ಆಯೋಗ ರಚಿಸಿದೆ. ಗ್ಯಾರಂಟಿಗಳ ಮೂಲಕ ಬಡವರ ಬಾಳಲ್ಲಿ ಬೆಳಕು ತಂದಿದೆ.

2024ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ನಿಬಂದನೆ ರಹಿತ, ಆಮಿಷ ರಹಿತವಾಗಿ ಹಾಗೂ ಸಂವಿಧಾನ, ಪ್ರಜಾಪ್ರಭುತ್ವದ ಉಳಿವಿಗಾಗಿ ಬೆಂಬಲ ಘೋಷಿಸುತ್ತಿದ್ದೇವೆ.

ಸಮಾಜದ ಬಂದುಗಳು ತಪ್ಪದೇ ಬಡವರ, ಅಲೆಮಾರಿಗಳ ಅಭಿವೃದ್ಧಿಗೆ ಸದಾ ಮುಂದಿರುವ ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕಬೇಕು ಎಂದು ಜಿಲ್ಲಾ ಸಂಘದ ಗೌರವ ಅಧ್ಯಕ್ಷ ಕತ್ತಲಗೆರೆ ತಿಪ್ಪಣ್ಣ ತಿಳಿಸಿದರು.

ಸಚಿವ ಎಸ್.ಎಸ್ ಮಲ್ಲಿಕಾರ್ಜುನ ಅವರು ಮಾತನಾಡಿ, ಕಾಂಗ್ರೆಸ್ ಪಕ್ಷವು ಕೊಟ್ಟ ಮಾತಿನಂತೆ ನುಡಿದಿದೆ ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸಿ ಎಂದು ತಿಳಿಸಿದರು.

ಈ ವೇಳೆ ಜಿಲ್ಲಾಧ್ಯಕ್ಷ ತಿಪ್ಪೇಶಪ್ಪ ಗುರುರಾಜಾಪುರ, ಎಸ್.ವಿ.ಮಂಜಪ್ಪ, ಪ್ರಧಾನ ಕಾರ್ಯದರ್ಶಿ ಹರೀಶ್ ಗುರುರಾಜಾಪುರ, ಕಾರ್ಯದರ್ಶಿ ಕುಮಾರ ಎಕ್ಕೆಗೊಂದಿ ಹಾಗೂ ಇತರರು ಉಪಸ್ಥಿತರಿದ್ದರು.


ಕರ್ನಾಟಕ ಸರ್ಕಾರ

**ಅರಣ್ಯ ಇಲಾಖೆ**

ಉಪ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ವಿಜಯನಗರ ವಿಭಾಗ, ಹೊಸಪೇಟೆ. ಫೋನ್ : 08394 200270
dcfvijayanagara@gmail.com
ಸಂಖ್ಯೆ : ಉಅಸಂ/ಮಾ.ಹ.ಅ/ಸಿ.ಆರ್.-28/2024-25 ದಿನಾಂಕ : 30.04.2024

**ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಣೆ**

ಹರಪನಹಳ್ಳಿ ಪ್ರಾದೇಶಿಕ ವಲಯ ವ್ಯಾಪ್ತಿಯ ವಾರ್ಡ್ ನಂ. 09 ಗುಂಡಿನಕೇರಿ ಪ್ರದೇಶ, ಅರಸೀಕೆರೆ ಬೈಪಾಸ್ ರಸ್ತೆ, ಹರಪನಹಳ್ಳಿ ನಿವಾಸಿಯಾದ ಶ್ರೀ ಎನ್. ಶಾಕೀರ್ ಬಿನ್ ಬುಡೇನ್ ಸಾಬ್ ಇವರ ಒಡೆತನದ ಎನ್.ಎಸ್. ಸಾಮೀಲನ್ನು (ಅರಣ್ಯ ಇಲಾಖೆ ಸಾಮಿಲ್ ಪರವಾನಿಗೆ ಸಂ. : 10105/3304/2023-2024/1073) ಶ್ರೀ ವಿನೋದ್ ಕುಮಾರ್ ಕೆ.ಆರ್. (ನಂ. #78, ಸಿ.ಪಿ.ಸಿ. ಕಾಲೋನಿ, ಕಡೂರು, ಟೌನ್, ಚಿಕ್ಕಮಗಳೂರು ಇವರಿಗೆ ಮಾರಾಟ ಮಾಡಿರುತ್ತಾರೆ.

ಆದುದರಿಂದ ಸದರಿ ಸಾಮಿಲ್‌ಗೆ ಸಂಬಂಧಿಸಿದಂತೆ ಮಾಲೀಕತ್ವ ಬದಲಾವಣೆಗೆ ತಕರಾರುಗಳಿದ್ದಲ್ಲಿ ಈ ಪ್ರಕಟಣೆ ಹೊರಡಿಸಿದ 15 ದಿವಸದೊಳಗಾಗಿ ಈ ಕಛೇರಿಗೆ ಸಲ್ಲಿಸುವುದು. ಇಲ್ಲವಾದಲ್ಲಿ ಸಾಮಿಲ್‌ನ ಮಾಲೀಕತ್ವ ಬದಲಾವಣೆಗೆ ಯಾವುದೇ ತಕರಾರುಗಳು ಇಲ್ಲವೆಂದು ಪರಿಗಣಿಸಿ ಮಾಲೀಕತ್ವ ಬದಲಾವಣೆಯನ್ನು ಮಾಡಲಾಗುವುದು.

**ಸಹಿ/- ಉಪ ಅರಣ್ಯ ಸಂರಕ್ಷಣಾಧಿಕಾರಿ**
**ವಿಜಯನಗರ ವಿಭಾಗ**
**ಹೊಸಪೇಟೆ.**

# 4ರಂದು ಎಸ್‌ಐಟಿ ಎದುರು ಪ್ರಜ್ವಲ್ ರೇವಣ್ಣ



ಬೆಂಗಳೂರು, ಮೇ 1 - ಸಂಸದ ಪ್ರಜ್ವಲ್ ರೇವಣ್ಣ ಮೇ 4ರಂದು ನಗರಕ್ಕೆ ಹಿಂತಿರುಗ ಲಿದ್ದು, ಅಂದೇ ಎಸ್‌ಐಟಿ ಮುಂದೆ ಹಾಜರಾಗಲಿದ್ದಾರೆ.

ಜರ್ಮನಿ ಪ್ರವಾಸ ಕೈಗೊಂಡಿರುವ ಪ್ರಜ್ವಲ್ ಕುಟುಂಬದವರ ಸಲಹೆಯಂತೆ ದೇಶಕ್ಕೆ ಹಿಂತಿರುಗುತ್ತಿದ್ದಾರೆ.

ಪ್ರಜ್ವಲ್ ಹಾಗೂ ಅವರ ತಂದೆ ರೇವಣ್ಣ ವಿರುದ್ಧದ ಪೆನ್ ಡ್ರೈವ್ ಪ್ರಕರಣ ಆರೋಪ ಹಾಗೂ ಅವರ ಮನೆಯ ಕೆಲಸದ ಮಹಿಳೆ ನೀಡಿರುವ ದೂರಿನ ಆಧಾರದ ಮೇಲೆ ಎಸ್‌ಐಟಿ ಈ ಇಬ್ಬರ ಮೇಲೂ ಪ್ರಕರಣ ದಾಖಲಿಸಿಕೊಂಡಿದೆ.

ಪೆನ್ ಡ್ರೈವ್ ಹಾಗೂ ಸಿಡಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ತನಿಖೆಗಾಗಿ ವಿಶೇಷ ಎಸ್‌ಐಟಿ ರಚನೆ ಮಾಡಿದೆ.

ಎಸ್‌ಐಟಿ ಪ್ರಕರಣ ದಾಖಲು ಮಾಡುತ್ತಿದ್ದಂತೆ ಕಾನೂನು ತಜ್ಞರ ಮೊರೆ ಹೋಗಿರುವ ರೇವಣ್ಣ ಕುಟುಂಬ, ಅವರ ಸಲಹೆಯಂತೆ ಪ್ರಜ್ವಲ್ ಅವ ರನ್ನು ವಿದೇಶದಿಂದ ಹಿಂದಕ್ಕೆ ಕರೆಸುತ್ತಿದ್ದಾರೆ. ಎಸ್‌ಐಟಿ ಅಧಿ ಕಾರಿಗಳು ಈಗಾಗಲೇ ಹಾಸನ ಕ್ಕೆ ತೆರಳಿ ಸಂತ್ರಸ್ತೆಯರಿಂದ ಮಾಹಿತಿ ಸಂಗ್ರಹಿಸುತ್ತಿರು ವುದಲ್ಲದೆ, ರೇವಣ್ಣ ಮತ್ತು ಪ್ರಜ್ವಲ್ ಅವರನ್ನು ವಿಚಾರಣೆಗೆ ಕರೆಸಲು ಅಣಿಯಾಗುತ್ತಿದ್ದಾರೆ.

ಹೆಚ್.ಡಿ.ರೇವಣ್ಣ, ಹಾಸನ ಮತ್ತು ಬೆಂಗಳೂರಿನಲ್ಲೇ ಇದ್ದರೂ ಇದುವರೆಗೂ ಎಸ್‌ಐಟಿ ತಂಡ ಅವರನ್ನು ಭೇಟಿಯೂ ಆಗಿಲ್ಲ, ವಿಚಾರಣೆಯನ್ನೂ ಮಾಡಿಲ್ಲ.

ಇವರುಗಳ ವಿಚಾರಣೆಗೂ ಮುನ್ನ ರೇವಣ್ಣ ಅವರ ಕಾರು ಚಾಲಕ ಕಾರ್ತಿಕ್ ಹಾಗೂ ಹಾಸನದ ವಕೀಲ ಮತ್ತು ಬಿಜೆಪಿ ನಾಯಕ ದೇವರಾಜೇಗೌಡ ಅವರಿಂದ ಮಾಹಿತಿ ಸಂಗ್ರಹಿಸಬೇಕಿದೆ. ಕಾರ್ತಿಕ್ ತಲೆ ಮರೆಸಿಕೊಂಡಿದ್ದು, ಪತ್ತೆಗಾಗಿ ತನಿಖಾ ತಂಡ ಮುಂದಾಗಿದೆ. ಇದರ ಮಧ್ಯೆ ದೇವರಾಜೇಗೌಡ ಅವರಿಗೆ ನೋಟೀಸ್ ನೀಡಿ ವಿಚಾರಣೆಗೆ ಬರುವಂತೆ ತಿಳಿಸಿದ್ದಾರೆ.

ಅವರಿಂದ ಮಾಹಿತಿ ಮತ್ತು ದಾಖಲೆ ಪಡೆದ ನಂತರ ಪ್ರಮುಖ ಆರೋಪಿಗಳನ್ನು ವಿಚಾರಣೆಗೆ ಒಳಪಡಿಸುತ್ತಾರೆಂದು ಉನ್ನತ ಮೂಲಗಳು ತಿಳಿಸಿವೆ.

ಪೆನ್ ಡ್ರೈವ್ ಪ್ರಕರಣವನ್ನು ಕಾಂಗ್ರೆಸ್‌ನ ಕೆಲವು ಮುಖಂಡರು ರಾಜಕೀಯವಾಗಿ ಬಳಕೆ ಮಾಡುತ್ತಿದ್ದಾರೆಂದು ಆರೋಪಿಸಿರುವ ರೇವಣ್ಣ, ಇಂತಹ ಗೊಡ್ಡು ಬೆದರಿಕೆಗಳಿಗೆ ಹೆದರಿ ಓಡಿ ಹೋಗುವುದಿಲ್ಲ ಎಂದು ಮತ್ತೊಮ್ಮೆ ಸ್ಪಷ್ಟ ಪಡಿಸಿದ್ದಾರೆ.

ಎಸ್‌ಐಟಿ ಅಧಿಕಾರಿಗಳು ವಿಚಾರಣೆಗೆ ಕರೆದರೆ ಹೋಗುವುದಾಗಿಯೂ ತಿಳಿಸಿದ್ದಾರೆ. ಪ್ರಜ್ವಲ್ ರೇವಣ್ಣ ಕೂಡ, ವಿಚಾರಣೆಗೆ ಕರೆದಲ್ಲಿ ಹಾಜರಾಗಲಿದ್ದಾರೆ ಎಂದು ತಿಳಿಸಿದ್ದಾರೆ.

ರೇವಣ್ಣ ಮತ್ತು ಪ್ರಜ್ವಲ್ ರೇವಣ್ಣ ವಿರುದ್ಧ ಎಸ್‌ಐಟಿ ಪ್ರಕರಣ ದಾಖಲಿಸಿ, ಎಫ್‌ಐಆರ್ ಸಿದ್ಧಪಡಿಸುತ್ತಿದ್ದಂತೆ ರೇವಣ್ಣ ಕುಟುಂಬ ರಾಜ್ಯ ಹೈಕೋರ್ಟ್‌ನ ಹಿರಿಯ ವಕೀಲರ ಸಲಹೆ, ಸೂಚನೆ ಪಡೆದು ಅವರ ಮಾರ್ಗದರ್ಶನದಂತೆ ನಡೆಯಲು ಮುಂದಾಗಿದ್ದಾರೆ.

ಈ ಮಧ್ಯೆ ಸುದ್ದಿಗಾರರೊಂದಿಗೆ ಮಾತನಾಡಿದ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಏಕಾಏಕಿ ಯಾರನ್ನೂ ಬಂಧಿಸಲು ಮುಂದಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಆರೋಪಕ್ಕೆ ಸಂಬಂಧಿಸಿದಂತೆ ದಾಖಲೆ ಮತ್ತು ಪುರಾವೆ ದೂರು, ದೂರಿನಲ್ಲಿ ಏನು ಹೇಳಿರುತ್ತಾರೆ ಅನ್ನೋದು ಮುಖ್ಯ, ಯಾವ ಸೆಕ್ಷನ್ ಬರುತ್ತೆ, ಅದರಲ್ಲಿ ಅರೆಸ್ಟ್ ಮಾಡಬಹುದಾ? ಬೇಲ್ ಕೇಸಾ, ನಾನ್ ಬೇಲ್ ಕೇಸಾ ಅಂತ ನೋಡಬೇಕು ಎಂದರು.

ಅದ್ದರಿಂದಲೇ ಸಿಆರ್‌ಪಿಸಿ ಸೆಕ್ಷನ್ 41ಎ ಅಡಿ ನೋಟಿಸ್ ಕೊಟ್ಟಿದ್ದು, ನೋಟಿಸ್ ಪಡೆದವರು 24 ಗಂಟೆ ಒಳಗೆ ತನಿಖಾಧಿಕಾರಿಗಳ ಮುಂದೆ ಬಂದು ಹಾಜರಾಗಬೇಕು. ಹಾಗೊಂದು ವೇಳೆ ಹಾಜರಾಗದಿದ್ದಲ್ಲಿ, ವಿಶೇಷ ತನಿಖಾ ತಂಡ ಅಧಿಕಾರಿಗಳು ಮುಂದಿನ ಪ್ರಕ್ರಿಯೆ ಕೈಗೊಳ್ಳುತ್ತಾರೆ ಎಂದರು.

ಸದ್ಯ ಪ್ರಜ್ವಲ್ ತನಿಖೆ ಎಸ್‌ಐಟಿಗೆ ತುಂಬಾ ಮುಖ್ಯವಾಗಿದೆ, ರೇವಣ್ಣ ಪ್ರಮುಖ ಆರೋಪಿ (ಎ1) ಆಗಿದ್ದರೂ, ಪ್ರಕರಣಗಳು ಬೆಳಕಿಗೆ ಬಂದಿದ್ದು ಸಂಶಯಾಸ್ಪದ ವಿಡಿಯೊಗಳಿಂದ, ಹೀಗಾಗಿ ಪ್ರಜ್ವಲ್ ರೇವಣ್ಣ ಅವರ ಹೇಳಿಕೆ ಇಲ್ಲಿ ಅಗತ್ಯವಿದೆ ಎಂದವರು ತಿಳಿಸಿದರು.

## ಪ್ರಜ್ವಲ್ ವಿದೇಶದಿಂದ ಕರೆ ತರಲು ಸಹಕರಿಸಿ : ಪ್ರಧಾನಿಗೆ ಸಿಎಂ ಪತ್ರ

ಬೆಂಗಳೂರು, ಮೇ 1 - ಅಸಂಖ್ಯಾತ ಮಹಿಳೆಯರ ಮೇಲಿನ ಲೈಂಗಿಕ ಶೋಷಣೆ ಆರೋಪ ಎದುರಿಸುತ್ತಿರುವ ಹಾಸನ ಲೋಕಸಭಾ ಕ್ಷೇತ್ರದ ಪ್ರತಿನಿಧಿ ಪ್ರಜ್ವಲ್ ರೇವಣ್ಣ ಅವರನ್ನು ವಿದೇಶದಿಂದ ಕರೆತರಲು ಸಹಕಾರ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮನವಿ ಮಾಡಿದ್ದಾರೆ.

ಈ ಸಂಬಂಧ ಇಂದು ಪತ್ರ ಬರೆದಿರುವ ಮುಖ್ಯಮಂತ್ರಿ ಅವರು, ವಿದೇಶಾಂಗ ಸಚಿವಾಲಯಕ್ಕೆ ಪ್ರಜ್ವಲ್ ರೇವಣ್ಣ ಅವರಿಗೆ ಸಂಬಂಧಿಸಿದ ಮಾಹಿತಿ ನೀಡಿ ಅವರನ್ನು ಕರೆತರಲು ತನಿಖಾ ತಂಡಕ್ಕೆ ಸಹಕಾರ ನೀಡಬೇಕು ಎಂದಿದ್ದಾರೆ.

ಶೋಷಣೆ ಪ್ರಕರಣ ಹೊರಬರುತ್ತಿದ್ದಂತೆ ಏಪ್ರಿಲ್ 28ರಂದು ವಿಶೇಷ ತನಿಖಾ ತಂಡ (ಎಸ್‌ಐಟಿ) ರಚಿಸಿ, ಅಂದೇ ಅವರ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ.

ಪ್ರಜ್ವಲ್ ರೇವಣ್ಣ ತಮ್ಮ ಕ್ಷೇತ್ರದ ಮತದಾನ ಮುಗಿಯುತ್ತಿದ್ದಂತೆ, ಏಪ್ರಿಲ್ 27ರಂದು ವಿದೇಶಕ್ಕೆ ತೆರಳಿದ್ದಾರೆ ಎಂಬ ಮಾಹಿತಿ ಇದೆ.

ಘಟನೆಗೆ ಸಂಬಂಧಿಸಿದಂತೆ ಕರ್ನಾಟಕ ಎಸ್‌ಐಟಿ ಅಗತ್ಯವಿರುವ ಎಲ್ಲ ವಿವರಗಳನ್ನು ಒದಗಿಸುವುದಲ್ಲದೆ, ಕಾನೂನು ರೀತ್ಯ ಆಗಬೇಕಿರುವ ಔಪಚಾರಿಕತೆಗಳನ್ನೂ ಪೂರೈಸಲಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

## ತನಿಖೆಗೆ ಹಾಜರಾಗಲು ಸಮಯ ಕೇಳಿದ ಪ್ರಜ್ವಲ್

ಬೆಂಗಳೂರು, ಮೇ 1 – ಪೆನ್‌ಡ್ರೈವ್ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡದ ಎದುರು ಹಾಜರಾಗಲು ಏಳು ದಿನಗಳ ಕಾಲಾವಕಾಶ ನೀಡುವಂತೆ ಸಂಸದ ಪ್ರಜ್ವಲ್ ರೇವಣ್ಣ ಪರ ವಕೀಲ ಜಿ. ಅರುಣ್ ಅವರು ತನಿಖಾ ತಂಡಕ್ಕೆ ಮನವಿ ಸಲ್ಲಿಸಿದ್ದಾರೆ.

ಮೇ 1ರಂದು ಎಸ್.ಐ.ಟಿ. ಎದುರು ಹಾಜರಾಗಲು ಪ್ರಜ್ವಲ್ ಅವರ ಮನೆಯ ಮೇಲೆ ನೋಟಿಸ್ ಅಂಟಿಸಲಾಗಿತ್ತು. ಆದರೆ, ಪ್ರಜ್ವಲ್ ಬೆಂಗಳೂರಿನ ಹೊರಗಡೆ ಪ್ರವಾಸದಲ್ಲಿದ್ದಾರೆ. ಈ ಬಗ್ಗೆ ವಿಷಯ ತಿಳಿಸಲಾಗಿದೆ. ಹಾಜರಾಗಲು 7 ದಿನಗಳ ಅಗತ್ಯವಿದೆ ಎಂದು ವಕೀಲರು ಬರೆದ ಪತ್ರದಲ್ಲಿ ತಿಳಿಸಲಾಗಿದೆ.

ಈ ಬಗ್ಗೆ ಹೇಳಿಕೆ ನೀಡಿರುವ ಪ್ರಜ್ವಲ್, ವಿಚಾರಣೆಗೆ ಹಾಜರಾಗಲು ನಾನು ಬೆಂಗಳೂರಿನಲ್ಲಿ ಇಲ್ಲದ ಕಾರಣ, ನಾನು ನನ್ನ ವಕೀಲರ ಮೂಲಕ ತನಿಖಾ ತಂಡಕ್ಕೆ ಮನವಿ ಮಾಡಿದ್ದೇನೆ. ಸತ್ಯ ಆದಷ್ಟು ಬೇಗ ಹೊರಬರಲಿದೆ ಎಂದಿದ್ದಾರೆ.

# ಚುನಾವಣೆ: ಜಗಳೂರಲ್ಲಿ ಭದ್ರತಾಪಡೆ ಪಥಸಂಚಲನ



ಜಗಳೂರು, ಮೇ 1- ಮುಕ್ತ ಹಾಗೂ ಶಾಂತಿಯುತವಾಗಿ ಲೋಕಸಭಾ ಚುನಾವಣೆ ನಡೆಸಲು ನಿಯೋಜಿಸಲಾಗಿರುವ ಭದ್ರತಾ ಪಡೆ ಆರ್ ಪಿಎಫ್ ಕಮಾಂಡೋ ಶಸ್ತ್ರಸಜ್ಜಿತವಾಗಿ ಪಟ್ಟಣಕ್ಕೆ ಆಗಮಿಸಿದ್ದು, ಮುಖ್ಯ ರಸ್ತೆಗಳಲ್ಲಿ ಸೌಹಾರ್ದ ನಡಿಗೆಯಲ್ಲಿ ಪಾಲ್ಗೊಂಡಿತು.

ಪಟ್ಟಣದ ಅಂಬೇಡ್ಕರ್ ವೃತ್ತದಿಂದ ಹೊಸಬಸ್ ನಿಲ್ದಾಣ, ಭುವನೇಶ್ವರಿ ವೃತ್ತ, ಸರ್ಕಾರಿ ಆಸ್ಪತ್ರೆ ರಸ್ತೆ, ಮಹಾತ್ಮಗಾಂಧಿ ವೃತ್ತದ ಮೂಲಕ ಪೊಲೀಸ್ ಠಾಣೆ ವರೆಗೆ ಲೋಕಸಭಾ ಚುನಾ ವಣೆಯ ಭದ್ರತಾ ಪಡೆ ಪಥಸಂಚಲನ ನಡೆಸಿತು.

ಪೊಲೀಸ್ ನಿರೀಕ್ಷಕ ಶ್ರೀನಿವಾಸ್ ರಾವ್ ಭದ್ರತಾಪಡೆಗೆ ಸ್ವಾಗತಿಸಿ ಮಾತನಾಡುತ್ತಾ, ಮೇ 7ರಂದು ನಡೆಯಲಿರುವ ಲೋಕಸಭಾ ಚುನಾವಣೆಯಲ್ಲಿ ವಿಧಾನ ಸಭಾ ಕ್ಷೇತ್ರವ್ಯಾಪ್ತಿ ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಮತಗಟ್ಟೆ ಕೇಂದ್ರಗಳನ್ನೊಳಗೊಂಡಂತೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮತದಾರರಿಗೆ ಭದ್ರತೆ ಒದಗಿಸಲು ಪೊಲೀಸ್ ಇಲಾಖೆಯ ಜೊತೆ 50 ಜನ ಶಸ್ತ್ರ ಸಜ್ಜಿತ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದರು.

ನ್ಯಾಯಸಮ್ಮತವಾಗಿ, ಶಾಂತಿಯುತ ಚುನಾವಣೆಗೆ ಸಾರ್ವಜನಿಕರು ಸಹಕರಿಸಬೇಕು. ಕಾನೂನು ಬಾಹಿರ ಚಟುವಟಿಕೆಗಳು ನಡೆದಲ್ಲಿ ಪೊಲೀಸರಿಗೆ ಮಾಹಿತಿ ನೀಡಬೇಕು ಎಂದು ಮನವಿಮಾಡಿದರು.

ಈ ಸಂದರ್ಭದಲ್ಲಿ ಪೊಲೀಸ್ ಉಪನಿರೀಕ್ಷಕ ಸಾಗರ್ ಹಾಗೂ ಆರ್ ಪಿಎಫ್ ಕಮಾಂಡೋ ಸೇರಿದಂತೆ ಪೊಲೀಸ್ ಸಿಬ್ಬಂದಿಗಳು ಭಾಗವಹಿಸಿದ್ದರು.

## ನಿಟುವಳ್ಳಿ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್‌ಗೆ ಸೇರ್ಪಡೆ



ದಾವಣಗೆರೆ,ಮೇ 1- ನಿಟುವಳ್ಳಿ ಭಾಗದ ಕಾಂಗ್ರೆಸ್ ಪಕ್ಷದ ಮುಖಂಡ ಸಂತೋಷ್ ನೇತೃತ್ವದಲ್ಲಿ ಬಿಜೆಪಿ ಪಕ್ಷದ ಕಾರ್ಯಕರ್ತರು ಬಿಜೆಪಿ ಪಕ್ಷವನ್ನು ತೊರೆದು ಎಸ್.ಎಸ್. ಮಲ್ಲಿಕಾರ್ಜುನ ಅವರ ಸಮ್ಮುಖದಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಸುಮಾರು ನೂರಕ್ಕೂ ಹೆಚ್ಚು ಕಾರ್ಯಕರ್ತರು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸಿದರು. ಈ ವೇಳೆ ಕಾಂಗ್ರೆಸ್ ಪಕ್ಷದ ಮುಖಂಡರುಗಳು ಇದ್ದರು.

## ರಾಮ ಮಂದಿರಕ್ಕೆ ರಾಷ್ಟ್ರಪತಿ ಭೇಟಿ



ಅಯೋಧ್ಯೆ, ಮೇ 1 – ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಅಯೋಧ್ಯೆಯ ರಾಮ ದೇವಾಲಯದಲ್ಲಿ ಪೂಜೆ ಸಲ್ಲಿಸಿದ್ದು, ಆರತಿ ಬೆಳಗಿದ್ದಾರೆ. ಇದಕ್ಕೂ ಮುಂಚೆ ಅವರು ಸರಯೂ ನದಿ ಹಾಗೂ ಹನುಮಾನ್‌ಘಡಿ ದೇವಾಲಯಗಳಲ್ಲೂ ಪೂಜೆ ಸಲ್ಲಿಸಿದ್ದರು. ರಾಮ ಮಂದಿರದ ಪ್ರಾಣ ಪ್ರತಿಷ್ಠಾಪನೆ ನೆರವೇರಿದ ನಂತರ ಮೊದಲ ಬಾರಿಗೆ ರಾಷ್ಟ್ರಪತಿ ಭೇಟಿ ನೀಡಿದ್ದಾರೆ.

## ಪ್ರಜ್ವಲ್ ದೇಶ ಬಿಡಲು ಕಾಂಗ್ರೆಸ್ ಸರ್ಕಾರ ಕಾರಣ

### ಒಕ್ಕಲಿಗರ ಕ್ಷೇತ್ರಗಳ ಚುನಾವಣೆಯಿಂದಾಗಿ ಕ್ರಮ ತೆಗೆದುಕೊಂಡಿರಲಿಲ್ಲ : ಅಮಿತ್ ಷಾ ಆರೋಪ

ಹುಬ್ಬಳ್ಳಿ ಮೇ 1 – ಒಕ್ಕಲಿಗರ ಕ್ಷೇತ್ರಗಳಲ್ಲಿ ಮೊದಲ ಹಂತದಲ್ಲಿ ಚುನಾವಣೆ ನಡೆಯುತ್ತಿದ್ದ ಕಾರಣಕ್ಕಾಗಿ, ಹಾಸನದ ಸಂಸದ ಪ್ರಜ್ವಲ್ ರೇವಣ್ಣ ಪ್ರಕರಣದಲ್ಲಿ ರಾಜ್ಯ ಕಾಂಗ್ರೆಸ್ ಸರ್ಕಾರ ಕ್ರಮ ತೆಗೆದುಕೊಂಡಿರಲಿಲ್ಲ ಎಂದು ಕೇಂದ್ರ ಗೃಹ ಸಚಿವ ಹಾಗೂ ಬಿಜೆಪಿ ನಾಯಕ ಅಮಿತ್ ಷಾ ಆರೋಪಿಸಿದ್ದಾರೆ.

ಮಹಿಳೆಯರ ಮೇಲೆ ದೌರ್ಜನ್ಯ ಎಸಗಿದವರ ಜೊತೆ ಬಿಜೆಪಿ ಇರುವುದಿಲ್ಲ ಎಂದೂ ಅವರು ತಿಳಿಸಿದ್ದಾರೆ.

ನಾವು ಜೆಡಿಎಸ್ ಜೊತೆ ಮೈತ್ರಿ ಹೊಂದಿದ್ದೇವೆ. ಪ್ರಜ್ವಲ್ ಪ್ರಕರಣದ ಕಾರಣದಿಂದಾಗಿ ಬಿಜೆಪಿ ಮೇಲೆ ವಾಗ್ದಾಳಿ ನಡೆಸಬಹುದು ಎಂದು ಕಾಂಗ್ರೆಸ್ ಭಾವಿಸಿದೆ. ಮಹಿಳೆಯರ ಮೇಲೆ ದೌರ್ಜನ್ಯ ಎಸಗುವವರ ಜೊತೆ ಬಿಜೆಪಿ ಇರುವುದಿಲ್ಲ ಎಂದು ಅಮಿತ್ ಷಾ ಹೇಳಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿದೆ. ಒಕ್ಕಲಿಗರ ಭಾಗದಲ್ಲಿ ಚುನಾವಣೆ ಮುಗಿಯುವವರೆಗೂ ರಾಜ್ಯ ಸರ್ಕಾರ ಏಕೆ ಕ್ರಮ ತೆಗೆದುಕೊಳ್ಳಲಿಲ್ಲ? ಪ್ರಜ್ವಲ್ ರೇವಣ್ಣ ತಪ್ಪಿಸಿಕೊಳ್ಳಲು ಬಿಟ್ಟು ಈಗ ರಾಜಕೀಯ ಮಾಡಲಾಗುತ್ತಿದೆ ಎಂದವರು ಆರೋಪಿಸಿದ್ದಾರೆ.

ಕಾಂಗ್ರೆಸ್‌ನವರಿಗೆ ಧೈರ್ಯವಿದ್ದರೆ ಸತ್ಯ ಹೇಳಬೇಕು. ರಾಜ್ಯ ಕಾಂಗ್ರೆಸ್ ಸರ್ಕಾರದ ಕಾರಣ ದಿಂದಾಗಿ ಹೇಯ ಕೃತ್ಯ ಎಸಗಿದ ಅಪರಾಧಿ ದೇಶ ಬಿಟ್ಟು ಪರಾರಿಯಾಗುವಂತಾಗಿದೆ ಎಂದು ಷಾ ಹೇಳಿದ್ದಾರೆ.

## ಸಂತ್ರಸ್ತೆಯರ ರಕ್ಷಣೆಗೆ ಸರ್ಕಾರ ಬದ್ಧ

(1ನೇ ಪುಟದಿಂದ) ವರದಿ ಬರುವವರೆಗೆ ಈ ಪ್ರಕರಣ ಕುರಿತು ಏನೂ ಉತ್ತರಿಸಲು ಸಾಧ್ಯವಿಲ್ಲ ಎಂದ ಪರಮೇಶ್ವರ್, ಸಾಮಾಜಿಕ ಜಾಲತಾಣಗಳಲ್ಲಿ ಅಶ್ಲೀಲ ವಿಡಿಯೋ ಹರಿದಾಡುತ್ತಿದ್ದು ಇವು ಪೋಸ್ಟ್ ಆಗದಂತೆ ಹಾಗೂ ಈಗಾಗಲೇ ಪೋಸ್ಟ್ ಆಗಿದ್ದನ್ನು ಅಳಿಸಿ ಹಾಕುವಂತೆ ಸಾಮಾಜಿಕ ಜಾಲತಾಣಗಳ ಏಜೆನ್ಸಿಗೆ ಕೋರಲಾಗುವುದು ಎಂದರು.

ಪ್ರಜ್ವಲ್ ಪ್ರಕರಣವನ್ನು ಖಾಸಗಿ ತನಿಖಾ ಸಂಸ್ಥೆಗೊಳಪಡಿಸಬೇಕು ಎಂಬ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿ ಒತ್ತಾಯಕ್ಕೆ ಪ್ರತಿಕ್ರಿಯಿಸಿದ ಪರಮೇಶ್ವರ್, ನಾವು- ಅವರು (ಕುಮಾರಸ್ವಾಮಿ)ಸರ್ಕಾರ ನಡೆಸುವಾಗ ಆಗಲೂ ನಾನು ಗೃಹ ಸಚಿವನಾಗಿದ್ದೆ. ಆಗ ಅವರು ರಾಜ್ಯ ಪೊಲೀಸ್ ವ್ಯವಸ್ಥೆ ಬಗ್ಗೆ ವಿಶ್ವಾಸ ಹೊಂದಿದ್ದರು. ಈಗ ಏಕಾಏಕಿ ಅವರಿಗೆ ರಾಜ್ಯ ಪೊಲೀಸರ ಮೇಲಿನ ವಿಶ್ವಾಸ ಹೋಯಿತೇ? ನನಗಂತೂ ರಾಜ್ಯ ಪೊಲೀಸ್ ಇಲಾಖೆ ಬಗ್ಗೆ ವಿಶ್ವಾಸವಿದೆ ಎಂದರು.

ಬಿಜೆಪಿ ಆಡಳಿತಾವಧಿಗಿಂತ ನಮ್ಮ ಆಡಳಿತಾವಧಿಯಲ್ಲಿ ಕಾನೂನು ವ್ಯವಸ್ಥೆ ಹೆಚ್ಚು ಸುವ್ಯವಸ್ಥಿತವಾಗಿದೆ ಎಂದರು. ಬಿಜೆಪಿ ಆಡಳಿತವಿದ್ದಾಗ ರಾಜ್ಯದಲ್ಲಿ ಎಷ್ಟು ಕೊಲೆ, ಅತ್ಯಾಚಾರ, ಇತರ ಅಪರಾಧ ಪ್ರಕರಣಗಳು ನಡೆದಿದ್ದವು. ನಮ್ಮ ಸರ್ಕಾರ ಇದ್ದಾಗ ಎಷ್ಟು ನಡೆದಿವೆ ಎಂಬ ಅಂಕಿ ಸಂಖ್ಯೆ ಕೊಡಬಲ್ಲ ಎಂದರು.

ಬೆಂಗಳೂರಿನಲ್ಲಿ ನಡೆದ ರಾಮೇಶ್ವರ ಕೆಫೆ ಬಾಂಬ್ ಪ್ರಕರಣದ ಆರೋಪಿಯನ್ನು ಬೇಗ ಬಂಧಿಸಲಾಗಿದೆ. ಇಂಥ ಗಂಭೀರ ಪ್ರಕರಣದಲ್ಲಿ ಇಷ್ಟೊಂದು ಬೇಗ ಆರೋಪಿಯನ್ನು ಬಂಧಿಸಿರುವುದು ಇತಿಹಾಸದಲ್ಲಿಯೇ ಉದಾಹರಣೆ ಇಲ್ಲ. ಹುಬ್ಬಳ್ಳಿಯ ಯುವತಿ ನೇಹಾ ಹತ್ಯೆ ವಿಚಾರ ಗೊತ್ತಾದ ತಕ್ಷಣ ಒಂದು ಗಂಟೆಯೊಳಗೆ ಆರೋಪಿಯನ್ನು ಬಂಧಿಸಲಾಗಿದೆ ಹಾಗೂ ಸಿಐಡಿ ತನಿಖೆಗೆ ವಹಿಸಲಾಗಿದೆ ಎಂದರು.

ಮಹಿಳೆಯೋರ್ವರು ಕೊಟ್ಟ ದೂರಿನ ಪ್ರಕರಣ ವಿಚಾರವಾಗಿ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರಿಗೆ ನೊಟೀಸ್ ನೀಡಲಾಗಿದೆ. ನೋಟಿಸ್‌ಗೆ ಯಡಿಯೂರಪ್ಪ ಪ್ರತಿಕ್ರಿಯಿಸಿದ್ದಾರೆ. ಅದೂ ಕೂಡ ತನಿಖೆ ನಡೆದಿದೆ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಡಿ. ಬಸವರಾಜ್, ಎಸ್.ರಾಮಪ್ಪ, ಬಿ.ಹೆಚ್. ವೀರಭದ್ರಪ್ಪ, ವಕೀಲ ಪ್ರಕಾಶ್ ಪಾಟೀಲ್ ಇನ್ನಿತರ ಪ್ರಮುಖರು ಸುದ್ದಿಗೋಷ್ಠಿಯಲ್ಲಿದ್ದರು.

### ಮೋದಿಯನ್ನು ಬದಲಿಸುವ ಅಲೆ ಇದೆ

(1ನೇ ಪುಟದಿಂದ) ಬದಲಾವಣೆ ಮಾಡಬೇಕು ಎನ್ನುವ ಅಲೆ ಇದೆ ಎಂದು ಗೃಹ ಸಚಿವ ಜಿ. ಪರಮೇಶ್ವರ ಹೇಳಿದರು.

ರಾಜ್ಯದಲ್ಲಿ 14 ಕ್ಷೇತ್ರದಲ್ಲಿ ಚುನಾವಣೆ ನಡೆದಿದ್ದು ಅದರಲ್ಲೂ ಕಾಂಗ್ರೆಸ್ ಪರ ಅಲೆ ಇದೆ. ರಾಜ್ಯದ ಜನರಿಗೆ ನೀಡಿದ ಗ್ಯಾರೆಂಟಿ ಯೋಜನೆಗಳಿಂದ ಜನರು ಕಾಂಗ್ರೆಸ್ ಮೇಲೆ ಆಶೀರ್ವಾದ ಮಾಡಿದ್ದಾರೆ. ದಾವಣಗೆರೆ ಕ್ಷೇತ್ರದಲ್ಲಿ ಪ್ರಭಾ ಮಲ್ಲಿಕಾರ್ಜುನ್ ಬಹುಮತದಿಂದ ಗೆಲ್ಲುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

## ಡಾ.ಪ್ರಭಾ ಅವರ ಗೆಲುವಿಗೆ ಪ್ರಾರ್ಥಿಸಿ ಗಿರಿಮಲ್ಲೈಗೆ ಅಭಿಮಾನಿಗಳಿಂದ ಪಾದಯಾತ್ರೆ



ದಾವಣಗೆರೆ,ಮೇ 1 - ದಾವಣಗೆರೆ ಲೋಕಸಭಾ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ಅವರ ಗೆಲುವಿಗೆ ಪ್ರಾರ್ಥಿಸಿ, ಅವರ ಅಭಿ ಮಾನಿಗಳು ತಮಿಳುನಾಡಿನ ತಿರುವಣ್ಣಾ ಮಲೈನ ಗಿರಿಮಲ್ಲೈ ದೇವಸ್ಥಾನಕ್ಕೆ 14 ಕಿ.ಮೀ ಪಾದಯಾತ್ರೆ ನಡೆಸಿ ಅಭಿಮಾನ ಮೆರೆದಿದ್ದಾರೆ.

ನಗರದ ಆರೋಗ್ಯ ಸ್ವಾಮಿ, ಗೋಪಾಲ್ ಜಿ, ಚಂದ್ರು ಸಿ ಹಾಗೂ ಸಂಗಡಿಗರೇ ಈ ಪಾದಯಾತ್ರೆ ಮಾಡಿದವರಾಗಿದ್ದು, ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಈ ಚುನಾವಣೆಯಲ್ಲಿ ಹೆಚ್ಚಿನ ಅಂತರದಲ್ಲಿ ಗೆಲುವು ಸಾಧಿಸಲಿ ಎಂದು ವಿಶೇಷ ಪೂಜೆ ಸಲ್ಲಿಸಿ, ಪ್ರಾರ್ಥಿಸಿದ್ದಾರೆ.

## ದೆಹಲಿಯ 150ಕ್ಕೂ ಹೆಚ್ಚು ಶಾಲೆಗಳಿಗೆ ಹುಸಿ ಬಾಂಬ್ ಬೆದರಿಕೆ


ನವದೆಹಲಿ, ಮೇ 1 – ದೆಹಲಿ ಎನ್.ಸಿ.ಆರ್. ವಲಯದ 150ಕ್ಕೂ ಹೆಚ್ಚು ಶಾಲೆಗಳಿಗೆ ಬಾಂಬ್ ಬೆದರಿಕೆಯ ಇ – ಮೇಲ್ ಕಳಿಸಲಾಗಿದೆ. ಇಷ್ಟು ದೊಡ್ಡ ಪ್ರಮಾಣದ ಬೆದರಿಕೆ ಹಾಕಿರುವುದು ಇದೇ ಮೊದಲು. ಬೆದರಿಕೆಯ ನಂತರ ಶಾಲೆಗಳನ್ನು ತೆರವುಗೊಳಿಸಲಾಗಿತ್ತು.

ಗಾಬರಿಗೊಂಡ ಪೋಷಕರು ತಮ್ಮ ಮಕ್ಕಳನ್ನು ಶಾಲೆಗಳಿಂದ ವಾಪಸ್ ಕರೆದುಕೊಂಡು ಹೋಗಿದ್ದರು. ಶಾಲೆಗಳ ಪರಿಶೀಲನೆ ನಡೆಸಿದ ಅಧಿಕಾರಿಗಳು, ಇದು ಹುಸಿ ಬೆದರಿಕೆ ಎಂದು ತಿಳಿಸಿದ್ದಾರೆ.

ಲೋಕಸಭಾ ಚುನಾವಣೆಯ ಹಿನ್ನೆಲೆಯಲ್ಲಿ ಬೆದರಿಕೆ ಇ-ಮೇಲ್ ಹಿಂದೆ ದೊಡ್ಡ ಸಂಚಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ. ಐಸಿಸ್ ಸಂಘಟನೆಯ ಮೂಲಕ ಬೆದರಿಕೆ ಕಳಿಸಿರುವ ಶಂಕೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ.

ರಷ್ಯಾ ಮೂಲದಿಂದ ಇ-ಮೇಲ್ ಕಳಿಸಿರುವುದು ಪತ್ತೆಯಾಗಿದೆ. ಈ ಬಗ್ಗೆ ತನಿಖೆ ನಡೆಸಲಾಗುತ್ತಿದೆ.

## ನಗರದಲ್ಲಿ ಇಂದು ಶ್ರೀ ವೀರಭದ್ರೇಶ್ವರ ಸ್ವಾಮಿ ಗುಗ್ಗಳ



ಶಾಮನೂರು ರಸ್ತೆಯ ಎಸ್.ಎಸ್. ಬಡಾವಣೆ 'ಎ' ಬ್ಲಾಕ್‌ನಲ್ಲಿರುವ ಶ್ರೀ ಮಹಾ ಗಣಪತಿ, ಶ್ರೀ ವೀರಭದ್ರೇಶ್ವರ ಸ್ವಾಮಿಯ ಗುಗ್ಗಳ ಹಾಗೂ ಕೆಂಡಾದರ್ಚನೆ ಕಾರ್ಯ ಕ್ರಮವು ಇಂದು ಬೆಳಿಗ್ಗೆ ಎಡೆಯೂರು ಕ್ಷೇತ್ರದ ಷ|| ಬ್ರ|| ರೇಣುಕಾ ಶಿವಾಚಾರ್ಯ ಸ್ವಾಮೀಜಿ ದಿವ್ಯ ಸಾನ್ನಿಧ್ಯದಲ್ಲಿ ಕಾರ್ಯಕ್ರಮ ಗಳು ನಡೆಯುವವು.ಮುಂಜಾನೆ 5 ಗಂಟೆಗೆ ರುದ್ರಾಭಿಷೇಕ ನಂತರ 7 ಗಂಟೆಗೆ ಮಹಾರಾಜಪೇಟೆಯಿಂದ ಗುಗ್ಗಳ ಹೊರಟು ದೇವಸ್ಥಾನ ತಲುಪಿದ ನಂತರ ಕೆಂಡದಾರ್ಚನೆ ನಡೆಯಲಿದೆ. ನಂತರ ಸರ್ವ ಭಕ್ತಾದಿಗಳಿಗೆ ಪ್ರಸಾದ ವಿನಿಯೋಗವಿರುತ್ತದೆ.


**ಜೈ ಶ್ರೀಮನ್ನಾರಾಯಣ**
ವಿಕಾಸ ತರಂಗಿಣಿ, ದಾವಣಗೆರೆ
29ನೇ ವರ್ಷದ
ಉಚಿತ ಮಜ್ಜಿಗೆ ವಿತರಣೆ ಕಾರ್ಯಕ್ರಮ
ಮಾರ್ಚ್ 23 ರಿಂದ 2 ತಿಂಗಳ ಕಾಲ.
ಇಂದಿನ ಮಜ್ಜಿಗೆ ಪ್ರಾಯೋಜಕರು :-
ಚಿ. ಅಭಿಷೇಕ್ (ಯುಎಸ್ಎ) ಇವರ ಹುಟ್ಟುಹಬ್ಬದ ಪ್ರಯುಕ್ತ ಶ್ರೀಮತಿ ಡಾ. ಜಿ.ಹೆಚ್. ಶಶಿಕಲಾ ಶ್ರೀ ಜಿ.ಬಿ. ಹನುಮಂತರೆಡ್ಡಿ, ದಾವಣಗೆರೆ ಇವರ ಸೇವಾರ್ಥ
ಸ್ಥಳ : ಮಹಾನಗರ ಪಾಲಿಕೆ ಆವರಣ

**ಕಮರ್ಷಿಯಲ್ ಖಾಲಿ ಜಾಗ ಬಾಡಿಗೆಗೆ ದೊರೆಯುತ್ತದೆ**
ಶಾಮನೂರು ಹತ್ತಿರ ಸರ್ವೀಸ್ ರೋಡ್ ಪಕ್ಕ 26 ಸಾವಿರ ಅಡಿ 160x180.
ಐನಳ್ಳಿ ಚನ್ನಬಸಪ್ಪ ಏಜೆಂಟ್
99166 12110

**ಕರ್ನಾಟಕ ಮುಕ್ತ ವಿದ್ಯಾಲಯ (KOS)**
ಕೇಂದ್ರ ಹಾಗೂ ರಾಜ್ಯ ಸರ್ಕಾರದ ಶಾಶ್ವತ ಮಾನ್ಯತೆ ಪಡೆದಿದೆ
ಶಿಕ್ಷಣ ವಂಚಿತರಾದವರಿಗೆ ನೇರ ಪರೀಕ್ಷೆ
SSLC/PUC/ಪದವಿ/ಸ್ನಾತಕೋತ್ತರ ಪದವಿ & ಡಿಪ್ಲೋಮಾ ಕೋರ್ಸ್‌ಗಳಿಗೆ ಪ್ರವೇಶ ಪ್ರಾರಂಭ
ಶ್ರೀ ಸಾಯಿ ಕರೆಸ್ಪಾಂಡೆನ್ಸ್ ಕಾಲೇಜ್
87490 24789, 87620 58369, 82173 02649

**ಬೇಕಾಗಿದ್ದಾರೆ**
ಆಸ್ಪತ್ರೆಯಲ್ಲಿ ಕೆಲಸ ಮಾಡಲು ಅನುಭವವುಳ್ಳ ನರ್ಸ್ ಬೇಕಾಗಿದ್ದಾರೆ.
ಸಂಪರ್ಕಿಸಿ : ಸಿ.ಜಿ.ಆಸ್ಪತ್ರೆ ಹಿಂಭಾಗ, ದಾವಣಗೆರೆ.
98450-35710
77607-39990

**ಮನೆ ಬಾಡಿಗೆಗಿದೆ**
ಡಬಲ್ ಬೆಡ್ ರೂಂ , ಬೋರ್ ವೆಲ್ /ಕಾರ್ಪೊರೇಷನ್ ನೀರಿನ ವ್ಯವಸ್ಥೆ ಇರುವ ಸುಸಜ್ಜಿತ 1ನೇ ಮಹಡಿ ಮನೆ ಸರಸ್ವತಿ ಬಡಾವಣೆ ನೀರಿನ ಟ್ಯಾಂಕ್ ಹತ್ತಿರ ಬಾಡಿಗೆಗಿದೆ.
ಸಸ್ಯಹಾರಿಗಳು ಮಾತ್ರ ಸಂಪರ್ಕಿಸಿ.
99863 77082

**ಸೈಟುಗಳು ಮಾರಾಟಕ್ಕಿವೆ**
ಪಿ.ಬಿ. ರೋಡಿಗೆ ಹತ್ತಿರ ಶನೇಶ್ವರ ದೇವಸ್ಥಾನದ ಹಿಂಭಾಗ 30x50, 30x50 South ಅಕ್ಕ-ಪಕ್ಕ, 30x40, 30x40 East ಅಕ್ಕ-ಪಕ್ಕ. Rate - 2500/-
ಐನಳ್ಳಿ ಚನ್ನಬಸಪ್ಪ ಏಜೆಂಟ್
99166 12110

**ತಕ್ಷಣ ಬೇಕಾಗಿದ್ದಾರೆ**
ಸೆಕ್ಯೂರಿಟಿ ಗಾರ್ಡ್
ಪಾಪ್ಯುಲರ್ ಸೆಕ್ಯೂರಿಟಿ & ಅಲೈಡ್ ಸರ್ವೀಸ್, ದಾವಣಗೆರೆ.
90362 37886

**ಬಾಡಿಗೆಗೆ ಇದೆ**
3BHK ಮನೆ, 1ನೇ ಮಹಡಿ ನೀರಿನ ಸೌಕರ್ಯವಿರುವ ಬಸವೇಶ್ವರ ನಗರ, ಸಪ್ತಗಿರಿ ಹಾಸ್ಟೆಲ್ ಹಿಂಭಾಗ 40 ಅಡಿ ಮೇನ್ ರಸ್ತೆ
94481 15270

**ತಕ್ಷಣ ಬೇಕಾಗಿದ್ದಾರೆ**
ಕೋರಿಯರ್ ಡೆಲಿವರಿ ಮಾಡಲು ಟಾಟಾ ಏಸ್ ಓಡಿಸಲು ಬರುವ ಡ್ರೈವರ್ ಗಳು ಬೇಕಾಗಿದ್ದಾರೆ
ಕೂಡಲೇ ಸಂಪರ್ಕಿಸಿ :
89711 19130, 98800 42597

**ನಾಟಿ ಕೋಳಿ ಹಾಗೂ ಮೊಟ್ಟೆ ದೊರೆಯುತ್ತದೆ**
ಬೇಕಾದಲ್ಲಿ ಸಂಪರ್ಕಿಸಿ :
ಮೊ. 83105-91159

**ಮನೆ ಮಾರಾಟಕ್ಕಿದೆ**
ಕೆ.ಬಿ. ಬಡಾವಣೆ, 1ನೇ ಮುಖ್ಯ , ಶ್ರೀ ಎಲಿಗಾರ್ ಶಿವಪ್ಪ ರಸ್ತೆ, 10ನೇ ಕ್ರಾಸ್, ನೆಲ ಮಹಡಿ ಹಾಗೂ ಮೊದಲನೆ ಮಹಡಿ ಇರುವ ಮನೆ ಮಾರಾಟಕ್ಕಿದೆ.
99028 15559, 88616 14811

**ಉಚಿತ ದಂತ ತಪಾಸಣಾ ಶಿಬಿರ**
ನವಜಾತ ಶಿಶುವಿನಿಂದ 15 ವರ್ಷದ ಮಕ್ಕಳಿಗೆ ಏಪ್ರಿಲ್ 01 ರಿಂದ ಮೇ 31ರವರೆಗೆ
ಅರಿವು ಡೆಂಟಲ್ ಕ್ಲಿನಿಕ್
ಪಿ.ಜೆ. ಬಡಾವಣೆ, ದಾವಣಗೆರೆ.
76762 98958, 70196 88355

**ಬಾಡಿಗೆಗೆ ಇದೆ**
3BHK ಮನೆ, 1ನೇ ಮಹಡಿ ನೀರಿನ ಸೌಕರ್ಯವಿರುವ ಬಸವೇಶ್ವರ ನಗರ, ಸಪ್ತಗಿರಿ ಹಾಸ್ಟೆಲ್ ಹಿಂಭಾಗ 40 ಅಡಿ ಮೇನ್ ರಸ್ತೆ
94481 15270

**ಮನೆ ಬಾಡಿಗೆಗೆ ಇದೆ**
ಹೊಂಡದ ಸರ್ಕಲ್‌ನ ಖಂಡಪ್ಪನ ಗಲ್ಲಿಯಲ್ಲಿ 13x45 ಅಳತೆಯ ಒಂದನೇ ಮಹಡಿ ಮನೆ ಸೋಲಾರ್, ನೀರು ಸೌಲಭ್ಯವಿರುವ ಮನೆ ಬಾಡಿಗೆಗೆ ಇದೆ.
94480 47506

**ಮನೆ ಬಾಡಿಗೆಗೆ ಬೇಕಾಗಿದೆ**
ಹರಿಹರ ಪಟ್ಟಣದಲ್ಲಿ ಮುಖ್ಯ ರಸ್ತೆಗೆ ಗ್ರೌಂಡ್ ಫ್ಲೋರ್‌ನಲ್ಲಿ ಮನೆ ಬೇಕಾಗಿದೆ. ಸಂಪರ್ಕಿಸಿ
97436 54365, 86609 98651

**ಮನೆ ಲೀಸ್‌ಗೆ ಇದೆ**
ಕಿರುವಾಡಿ ಲೇಔಟ್, 3ನೇ ಮುಖ್ಯ ರಸ್ತೆ, ಎರಡನೇ ಮಹಡಿಯಲ್ಲಿ ಸಿಂಗಲ್ ಬೆಡ್‌ರೂಮ್ ಇರುವ ಮನೆ, ವಾಸಕ್ಕೆ ಅಥವಾ ಗೋಡೌನ್ ಮಾಡಿಕೊಳ್ಳಲು ಅನುಕೂಲಕರವಾಗಿದೆ. ವಿಚಾರಿಸಿ :
99028 15559, 88616 14811

**ಕೆಲಸಕ್ಕೆ ಬೇಕಾಗಿದ್ದಾರೆ**
1) ANM/ GNM ನರ್ಸಿಂಗ್-01
2) ಆಯಾ ಕೆಲಸ - 01
ಆಸ್ಪತ್ರೆಯಲ್ಲಿ ಕೆಲಸ ಮಾಡಲು ಬೇಕಾಗಿದ್ದಾರೆ.
ನೇರ ಸಂದರ್ಶನಕ್ಕೆ ಸಂಪರ್ಕಿಸಿ
86186 42929
08192-252228

**WANTED**
Billing Staff (Tally) And Accountant With 1-2 Years Experience For Pulses,Rice And Foodgrain Shop. Immediate Joining. Knowledge Of Gst Will Be Prefered. Good Salary Will Be Offered.
Send Resume By Whatsup To
98440 78802

**ಬೇಕಾಗಿದ್ದಾರೆ**
ಸುಬ್ರಹ್ಮಣ್ಯ ಗ್ಯಾಸ್ ಏಜೆನ್ಸಿ, #961/1, 1ನೇ ಮೇನ್, 1ನೇ ಕ್ರಾಸ್, ಕೆಟಿಜೆ ನಗರ, ಸಿಲಿಂಡರ್ ಡೆಲಿವರಿ ಮಾಡುವ ಹುಡುಗರು ಬೇಕಾಗಿದ್ದಾರೆ. ಡ್ರೈವಿಂಗ್ ಲೆಸನ್ಸ್ ಹೊಂದಿರಬೇಕು.
ಭೇಟಿಯ ಸಮಯ ಬೆಳಿಗ್ಗೆ 11 ರಿಂದ 1 ಗಂಟೆ, ಸಂಜೆ 4 ರಿಂದ 6 ಗಂಟೆ.
08192254121, 08192254098

**ಟ್ಯಾಂಕ್ ಕ್ಲೀನಿಂಗ್**
ಮನೆಯ ನೀರಿನ ತೊಟ್ಟಿ, ಟ್ಯಾಂಕ್‌ಗಳು ಗಲೀಜಾಗಿದ್ದರೆ ಯಂತ್ರಗಳನ್ನು ಬಳಸಿ ನಾವು ಕ್ಲೀನ್ ಮಾಡುತ್ತೇವೆ.
ಅತ್ಯುತ್ತಮ ಸೇವೆಗೆ ಸಂಪರ್ಕಿಸಿ
99863 61250
91132 85992

**ಓದುಗರ ಗಮನಕ್ಕೆ**

**ಲೈಂಗಿಕ ನಿಶ್ಯಕ್ತಿಗೆ ನಿರಾಶರಾಗಬೇಡಿ**
ಶೀಘ್ರ ಸ್ಖಲನ, ಹಸ್ತ ಮೈಥುನ, ಸ್ವಪ್ನದೋಷ, ನರಗಳ ದೌರ್ಬಲ್ಯತೆ, ತಾರುಣ್ಯ ನಾಶ, ಸಂತಾನ ದೋಷ, ಲೈಂಗಿಕ ಸಮಸ್ಯೆಗೆ ಭೇಟಿಯಾಗಿ.
ದಾವಣಗೆರೆ : 2 & 3ರಂದು ಬಸವರಾಜ ಲಾಡ್ಜ್ ಪಿ.ಬಿ. ರಸ್ತೆ.
ಡಾ|| ಎಚ್.ಆಯ್. ದೊಡ್ಡಮನಿ (G.R.No.8969)
ಡಮ್ಮಣಿ ಕಾಂಪ್ಲೆಕ್ಸ್, 1ನೇ ಮಹಡಿ, ನಂ.26 ಹಳೇಬಸ್ ಸ್ಟ್ಯಾಂಡ್ ಎದುರಿಗೆ, ಹುಬ್ಬಳ್ಳಿ
M:9740523710

**WANTED**
Store Incharge-Furniture shop
OM Rakshak Enterprises
Mama's Joint Road, Davanagere. Good salary + Incentives. Contact :
8792344464, 7975402627

**WANTED LADY TEACHERS**
D.Ed- 5, BA, BE.d - 5, B.Sc, B.Ed - 5, Computer Teacher - 2, NTC-5, Aya-3
95356 10817

**ಗೋಡಾನ್ ಬಾಡಿಗೆಗಿದೆ**
ಬಸಾಪುರ ರೋಡ್, ದಾವಣಗೆರೆ.
45x110 ಅಳತೆ. ಸಂಪರ್ಕಿಸಿ :
98868 51313
9448345599

**WANTED**
Diploma or ITI ಆದ ಯುವಕರು ಸರ್ವೀಸ್ ಇಂಜಿನೀಯರ್ ಉದ್ಯೋಗಕ್ಕೆ ಬೇಕಾಗಿದ್ದಾರೆ. ಆಸಕ್ತರು ಈ ಕೆಳಕಂಡ ವಿಳಾಸಕ್ಕೆ ತಮ್ಮ Resume ಮೂಲಕ ಬಂದು ಭೇಟಿಯಾಗಬಹುದು.
Power Green Electricals, PB Road, Near Onion Market, Opp. Sultan Gold Palace, Davanagere.
93539 96363, 90717 37706

**ಬೋರ್ ವೆಲ್ ಪಾಯಿಂಟ್**
ಆಧುನಿಕ ತಂತ್ರಜ್ಞಾನದಿಂದ ಬೋರ್ ಪಾಯಿಂಟ್ ಮಾಡಿಕೊಡಲಾಗುವುದು.
ಸಂಪರ್ಕಿಸಿ :
97436 54365
86609 98651

**WANTED**
1. Receptionist Cum Compter Operator
2. Telecaller
Winners Career Academy, Davanagere.
98869 97892, 91485 96892

**WANTED**
Lady Manager, Table work ladies tailer, Shop incharge, Shop asset, Lady stitcher's, Helper wanted. Qualification : 7th Pass / Fail
98445 81966

**ಮದ್ಯವ್ಯಸನಿಗೆ ಅರಿವಿಲ್ಲದಂತೆ ಮದ್ಯ ಸೇವನೆ ಬಿಡಿಸಿರಿ**
ಪ್ರತಿ ತಿಂಗಳು 7ಮತ್ತು 21ನೇ ತಾರೀಖು ಜನತಾ ಡೀಲಕ್ಸ್ ಲಾಡ್ಜ್, KSRTC ಹೊಸ ಬಸ್ ಸ್ಟ್ಯಾಂಡ್ ಎದುರು, ದಾವಣಗೆರೆ.
4 ಮತ್ತು 18 ರಂದು ಕಾವೇರಿ ಲಾಡ್ಜ್, ಪೂನಾ - ಬೆಂಗಳೂರು ರೋಡ್, ಹಾವೇರಿ.
ಅಸ್ತಮಾ, ಕೀಲು ನೋವು
ಡಾ|| ಎಸ್.ಎಂ. ಸೇಠ. ಫೋ. : 96322 95561
ಸಮಯ: ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ

**ಬಾಡಿಗೆಗೆ ಇದೆ**
ಐಗೂರು ಗ್ರಾಮದ ತುಂಬಿಗೆರೆ ರಸ್ತೆಯಲ್ಲಿ ಇರುವ 2 ಎಕರೆ ಜಮೀನಿನಲ್ಲಿ 1 ಎಕರೆ ಜಮೀನು NA (ಕೈಗಾರಿಕ ವಲಯ) ಆಗಿದೆ. ಇದು ಬಾಡಿಗೆಗೆ ದೊರೆಯುತ್ತದೆ. ಮತ್ತು ಆ ಜಮೀನಿನಲ್ಲಿ ಸಿಮೆಂಟ್ ಬ್ರಿಕ್ಸ್ ಕಾರ್ಖಾನೆಯು ಬಾಡಿಗೆಗೆ ಇದೆ.
9036559096, 9242837951

**ಮೆಡ್‌ಕ್ಯೂರ್**
ಔಷಧಿ ಅಂಗಡಿಯಲ್ಲಿ ಅನುಭವವುಳ್ಳ ಹುಡುಗರು ಕೆಲಸಕ್ಕೆ ಬೇಕಾಗಿದ್ದಾರೆ. ಶಕ್ತಿ ಗ್ಯಾಸ್ ಆಫೀಸ್ ಹತ್ತಿರ 60 ಅಡಿ ರೋಡ್, ನಿಟ್ಟುವಳ್ಳಿ, ದಾವಣಗೆರೆ.
ಸಂಪರ್ಕಿಸಿ :
73534 14917

ನೇರ ಪರೀಕ್ಷೆ ಕಟ್ಟಲು/ರೆಗ್ಯುಲರ್ ಪ್ರವೇಶಕ್ಕಾಗಿ
**SSLC ನೇರ ಪರೀಕ್ಷೆ**
IInd PUC/Senior Secondary, Arts/Commerce/Science B.Sc.-Agriculture, B.Tech All branches, D.Pharma, B.Ed., PhD regular B.A., B.com., B.Sc., M.A., M.Com., MBA, MLIB, Correspondence.
SS Global Institute for Higher Education
72593 59861/99863 45266

**ಶಾಲಾ ವಾಹನ ಬೇಕಾಗಿರುತ್ತದೆ**
30 ಆಸನಗಳನ್ನು ಹೊಂದಿರುವ ಸುಸ್ಥಿತಿಯಲ್ಲಿರುವ ಶಾಲಾ ವಾಹನ ಬೇಕಾಗಿದೆ. ಸಂಪರ್ಕಿಸಿ:
95356 10817

**ಡ್ರೈವರ್, ಕಂಡಕ್ಟರ್ ಬೇಕಾಗಿದ್ದಾರೆ**
ನಗರ ಸಾರಿಗೆ ಬಸ್ಸಿಗೆ ಡ್ರೈವರ್ (ಪುರುಷ) ಮತ್ತು ಕಂಡಕ್ಟರ್ (ಪುರುಷ ಅಥವಾ ಮಹಿಳಾ) ಬೇಕಾಗಿದ್ದಾರೆ. ಸಂಪರ್ಕಿಸಿ :
91642 22937

**ಬೇಕಾಗಿದ್ದಾರೆ**
ಆಫೀಸ್ ಬಾಯ್ ಹಾಗೂ ಟ್ಯಾಲಿ ಅನುಭವವುಳ್ಳ ಅಕೌಂಟೆಂಟ್ ಬೇಕಾಗಿದ್ದಾರೆ.
ಸಂಪರ್ಕಿಸಿ.
98867 09334, 99646 40494

# ದೇಶಕ್ಕೆ ಸ್ವಾತಂತ್ರ ಲಭಿಸಿ 7 ದಶಕಗಳಾದರೂ ಕಾರ್ಮಿಕರಿಗೆ ಇನ್ನೂ ಸಿಗದ ಭದ್ರತೆ



**ಎಐಟಿಯುಸಿ ನಡೆಸಿದ ಕಾರ್ಮಿಕ ದಿನಾಚರಣೆಯಲ್ಲಿ ಎಐಟಿಯುಸಿ ರಾಜ್ಯ ಉಪಾಧ್ಯಕ್ಷ ಬಿ. ಅಮ್ಜದ್ ಆತಂಕ**

ದಾವಣಗೆರೆ, ಮೇ 1- ದೇಶಕ್ಕೆ ಸ್ವತಂತ್ರ ಲಭಿಸಿ 7 ದಶಕಗಳು ಕಳೆದರು, ಇಂದಿಗೂ ಕಾರ್ಮಿಕರ ಬದುಕಿಗೆ ಭದ್ರತೆ ಸಿಗುತ್ತಿಲ್ಲ ಎಂದು ಎ.ಐ.ಟಿ.ಯು.ಸಿ ರಾಜ್ಯ ಉಪಾಧ್ಯಕ್ಷ ಬಿ. ಅಮ್ಜದ್ ಆತಂಕ ವ್ಯಕ್ತಪಡಿಸಿದರು.

ನಗರದ ಜಯದೇವ ವೃತ್ತದ ಶ್ರೀನಿವಾಸ್ ಕುಲಕರ್ಣಿ ರಸ್ತೆಯಲ್ಲಿ ಬುಧವಾರ ಆಯೋಜಿಸಿದ್ದ ಕಾರ್ಮಿಕ ದಿನಾಚರಣೆ ಹಾಗೂ ಹುತಾತ್ಮರ 54ನೇ ವಾರ್ಷಿಕೋತ್ಸವವನ್ನು ಹಲಗೆ ಭಾರಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಮಿಕ ವರ್ಗವು ಆರ್ಥಿಕ, ಸಾಮಾಜಿಕ, ರಾಜಕೀಯ ಮತ್ತು ಔದ್ಯೋಗಿಕವಾಗಿ ಸಾಧಿಸುವ ಗುರಿ ಹೊಂದಿದೆ. ಆದರೆ ಬಂಡವಾಳ ಶಾಹಿಗಳು ಮಾತ್ರ ಕಾರ್ಮಿಕರ ಬದುಕನ್ನು ನಿಕೃಷ್ಟ ಸ್ಥಿತಿಗೆ ತಳ್ಳುತ್ತಿದ್ದಾರೆ ಎಂದು ದೂರಿದರು. ಜನಪ್ರತಿನಿಧಿಗಳು ಪ್ರಜೆಗಳ ಹಿತ ಕಾಪಾಡುವಲ್ಲಿ ವಿಫಲವಾಗುತ್ತಿದ್ದಾರೆ. ಮತ್ತು ಬಂಡವಾಳ ಶಾಹಿ ವ್ಯವಸ್ಥೆಗೆ ಅನುಕೂಲವಾಗುವ ನಿಟ್ಟಿನಲ್ಲಿ ಅಧಿಕಾರ ಚಲಾಯಿಸುತ್ತಿರುವುದು ಶೋಚನಿಯ ಎಂದರು.

ಜಗತ್ತಿನಲ್ಲಿ ರೈತ ಬೆಳೆಯದಿದ್ದರೆ ಮತ್ತು ಕಾರ್ಮಿಕರು ಕೆಲಸ ಮಾಡದಿದ್ದರೆ ಜಗತ್ತೇ ಸ್ತಬ್ದವಾಗುತ್ತದೆ. ಆದ್ದರಿಂದ ರೈತರು ಹಾಗೂ ಕಾರ್ಮಿಕರು ನೆಮ್ಮದಿಯಿಂದ ಇದ್ದರೆ ಮಾತ್ರ ನಾಗರಿಕ ಸಮಾಜ ಸುಧಾರಿಸಲು ಸಾಧ್ಯ ಎಂದರು.

ನರೇಂದ್ರ ಮೋದಿ ಅವರ ಬಿಜೆಪಿ ಸರ್ಕಾರ ಕಾರ್ಪೊರೇಟ್ ನೀತಿಯಿಂದ ಆಡಳಿತ ನಡೆಸುತ್ತಿದ್ದು, ಕಾರ್ಮಿಕರು ಹಾಗೂ ಮಾಲೀಕರಲ್ಲಿ ಉತ್ತಮ ಸಂಬಂಧ ಉಳಿಯುತ್ತಿಲ್ಲ ಎಂದು ಹೇಳಿದರು. 30 ಲಕ್ಷಕ್ಕೂ ಅಧಿಕ ಬಿಸಿಯೂಟದ ಕಾರ್ಯಕರ್ತರು, ಅಂಗನವಾಡಿ ಆಶಾ ಕಾರ್ಯಕರ್ತರು ಇಂದಿಗೂ ದಿನಗೂಲಿಯಲ್ಲೆ ದುಡಿಯುತ್ತಿದ್ದಾರೆ ಹೊರತು ಅವರಿಗೆ ಹೆಚ್ಚಿನ ಗೌರವ ಧನ ಸಿಗುತ್ತಿಲ್ಲ ಎಂದರು. ರೈತರು ಮತ್ತು ಕಾರ್ಮಿಕರು ನಿಜವಾದ ಬಹುಸಂಖ್ಯಾತರು ನಾವೆಲ್ಲರೂ ಒಗ್ಗಟ್ಟಾದರೇ ಜನಪರ ಸರ್ಕಾರ ತರುವ ಶಕ್ತಿ ನಮ್ಮಲ್ಲಿದೆ ಎಂದರು.

ಭಾರತ ಕಮ್ಯೂನಿಷ್ಟ್ ಪಕ್ಷದ ಜಿಲ್ಲಾ ಮಂಡಳಿ ಕಾರ್ಯದರ್ಶಿ ಆವರಗೆರೆ ಚಂದ್ರು ಮಾತನಾಡಿ, ಬಿಜೆಪಿ ಸರ್ಕಾರವು ಕಾರ್ಮಿಕರ ಕಾನುನೂಗಳನ್ನು ಮೊಟಕುಗೊಳಿಸುತ್ತಾ ಕಾರ್ಮಿಕರಿಗೆ ಅನ್ಯಾಯ ಮಾಡುತ್ತಿದೆ ಎಂದು ಹೇಳಿದರು.

ಅಸಂಘಟಿತ ವರ್ಗದವರಿಗೆ ಸಿಗಬೇಕಾದ ಸವಲತ್ತುಗಳು ಹಾಗೂ ಕನಿಷ್ಠ ವೇತನ ಸಿಗದೇ ಇರುವುರಿಂದ ನಮ್ಮ ಹೋರಾಟ ನಿಲ್ಲುವುದಿಲ್ಲ ಎಂದರು.

ರಾಜ್ಯ ವರ್ಕಿಂಗ್ ಕಮಿಟಿಯ ಸದಸ್ಯ ಆನಂದರಾಜ್, ಜಿಲ್ಲಾ ಸಮಿತಿಯ ಸಹ ಕಾರ್ಯದರ್ಶಿ ಎಂ.ಬಿ. ಶಾರದಮ್ಮ, ಸದಸ್ಯೆ ರುದ್ರಮ್ಮ ಬೆಳಲಗೆರೆ, ಪಂಪಾಪತಿ ರೈತ ಕಾರ್ಮಿಕರ ಕಲ್ಯಾಣಾಭಿವೃದ್ಧಿ ಟ್ರಸ್ಟ್‌ನ ಅಧ್ಯಕ್ಷ ಟಿ.ಎಸ್. ನಾಗರಾಜ್, ಆಂಜನೇಯ ಕಾಟನ್ ಮಿಲ್ ಎಂಪ್ಲಾಯ್ಸ್ ಯೂನಿಯನ್ ಪ್ರಧಾನ ಕಾರ್ಯದರ್ಶಿ ಜಯ್ಯಪ್ಪ, ಸಿಪಿಐ ತಾಲ್ಲೂಕು ಸಮಿತಿ ಕಾರ್ಯದರ್ಶಿ ಟಿ.ಎಚ್. ನಾಗರಾಜ್, ಮಹಮ್ಮದ್ ಬಾಷಾ, ಮಹ್ಮದ್ ರಫೀಕ್, ಆವರಗೆರೆ ವಾಸು ಮತ್ತು ಇತರರು ಇದ್ದರು.

# ರಾಜ್ಯದಲ್ಲೂ ಗ್ಯಾರಂಟಿ ಯೋಜನೆ ನೀಡಿದಂತೆ ಕೇಂದ್ರದಲ್ಲೂ ಗ್ಯಾರಂಟಿ ಜಾರಿ : ಶಾಸಕ ಎಸ್ಸೆಸ್



**ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ರೋಡ್ ಷೋ**

ದಾವಣಗೆರೆ, ಮೆ 1 - ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ 18, 11, 9, 12, 2, 3, ಮತ್ತು 4ನೇ ವಾರ್ಡ್‌ಗಳಲ್ಲಿ ವ್ಯಾಪ್ತಿಯಲ್ಲಿ ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ.ಪ್ರಭಾ ಮಲ್ಲಿಕಾರ್ಜುನ್ ಪರವಾಗಿ ಶಾಸಕ ಶಾಮನೂರು ಶಿವಶಂಕರಪ್ಪ ಅವರು ಇಂದು ಭರ್ಜರಿ ರೋಡ್ ಷೋ ನಡೆಸಿದರು.

ನಂತರ ಎಸ್ಸೆಸ್ ಮಾತನಾಡಿ, ದಾವಣಗೆರೆ ದಕ್ಷಿಣ ಕ್ಷೇತ್ರದ ಗ್ರಾಮಾಂತರ ಪ್ರದೇಶದವರು ಸದಾ ನಮ್ಮನ್ನು ಬೆಂಬಲಿಸುತ್ತಾ ಬಂದಿದ್ದು, ಈ ಬಾರಿ ಲೋಕಸಭೆಗೆ ಪ್ರಭಾ ಮಲ್ಲಿಕಾರ್ಜುನ್ ಅವರು ಸ್ಪರ್ಧಿಸಿದ್ದು, ಹೆಚ್ಚಿನ ಬೆಂಬಲ ನೀಡಬೇಕೆಂದು ಕರೆ ನೀಡಿದರು.

ರಾಜ್ಯದಲ್ಲಿ ಅಧಿಕಾರಕ್ಕೆ ಬರುವ ಮುನ್ನ ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ 5 ಗ್ಯಾರಂಟಿ ಯೋಜನೆಗಳನ್ನು ತರುವ ಭರವಸೆ ನೀಡಿತ್ತು. ಅದರಂತೆ ಸರ್ಕಾರ ಬಂದ ತಕ್ಷಣ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಇಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರವೊಂದಕ್ಕೆ ಮಾರ್ಚ್ ಅಂತ್ಯಕ್ಕೆ ಸುಮಾರು ರೂ.122 ಕೋಟಿಯಷ್ಟು ಹಣವನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆ ಎಂದರು.

ಇನ್ನು ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 'ಪಂಚ ನ್ಯಾಯ ಪಚ್ಚೀಸ್ ಗ್ಯಾರೆಂಟಿ' ಭರವಸೆಗಳನ್ನು ನೀಡಲಾಗಿದ್ದು, ಯುವ ನ್ಯಾಯದಡಿ ಯುವಕರಿಗೆ ಉದ್ಯೋಗ, ಮಹಿಳಾ ನ್ಯಾಯದಡಿ ಪ್ರತಿ ಮಹಿಳೆಗೆ 1 ಲಕ್ಷ ರೂ., ರೈತ ನ್ಯಾಯದಡಿ ಸ್ವಾಮಿನಾಥನ್ ಆಯೋಗವನ್ನು ಜಾರಿಗೊಳಿಸು ವುದು.

ನರೇಗಾ ಕೂಲಿ ಹಣವನ್ನು ರೂ. 400 ಕ್ಕೆ ಹೆಚ್ಚಿಸಲಾಗುವುದು ಸೇರಿದಂತೆ ಹಲವು ಯೋಜನೆಗಳನ್ನು ಪ್ರಣಾಳಿಕೆಯಲ್ಲಿ ಘೋಷಿಸಲಾಗಿದ್ದು, ಅದರಂತೆ ನಾವುಗಳು ಜಾರಿಗೆ ತರುತ್ತೇವೆ ಎಂದರು.

ಈ ಸಂದರ್ಭದಲ್ಲಿ ಬ್ಲಾಕ್ ಅಧ್ಯಕ್ಷ ಅಯೂಬ್ ಪೈಲ್ವಾನ್, ಸಾಧಿಕ್ ಪೈಲ್ವಾನ್, ಸೈಯದ್ ಸೈಪುಲ್ಲಾ, ಬಿ.ವೀರಣ್ಣ, ತಂಜೀಮ್ ಸಮಿತಿ ಅಧ್ಯಕ್ಷ ದಾದುಸೇಠ್, ಬುತ್ತಿ ಗಫೂರ್ ಸಾಬ್, ಸಿ.ಕೆ.ಮುಸ್ತಾಕ್, ಎಸ್.ಕೆ. ಅಮ್ಜದ್, ಎ.ಬಿ.ಹಬೀಬ್ ಸಾಬ್, ನವಾಜ್ ಖಾನ್,ಮನ್ಸೂರ್, ಮಹಾನಗರ ಪಾಲಿಕೆ ಸದಸ್ಯರುಗಳಾದ ಕೆ.ಚಮನ್ ಸಾಬ್, ಸೈಯದ್ ಚಾರ್ಲಿ, ಹುರ್ ಬಾನು ಪಂಡಿತ್, ಜಾಕೀರ್ ಅಲಿ, ಕಬೀರ್ ಖಾನ್, ಎ.ಬಿ.ರಹೀಂ, ಅಯ್ಯಪ್ಪ ದಾದು, ಸೌಮ್ಯ ನರೇಂದ್ರ, ಮಾಜಿ ಸದಸ್ಯ ಪರಸಪ್ಪ, ಅಲ್ತಾಫ್ ಹುಸೇನ್, ಫಾರೂಕ್, ಮುನ್ನಾ ಪೈಲ್ವಾನ್, ಎನ್.ಕೆ. ಇಸ್ಮಾಯಿಲ್, ಲಾಲ್ ಆರೀಫ್, ಕೊಡಪಾನ ದಾದಾಪೀರ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ರಾಜ್ಯದಲ್ಲಿ ಎರಡು ಸಿ.ಡಿ. ಉತ್ಪಾದನಾ ಫ್ಯಾಕ್ಟರಿ

## ಪೆನ್‌ಡ್ರೈವ್ ಪ್ರಕರಣ ಮುಚ್ಚಿ ಹಾಕುವ ಪ್ರಯತ್ನ : ಶಾಸಕ ಯತ್ನಾಳ್



ದಾವಣಗೆರೆ, ಮೇ 1 - ಲೈಂಗಿಕ ದೌರ್ಜನ್ಯ ಆರೋಪ ಹೊತ್ತಿರುವ ಸಂಸದ ಪ್ರಜ್ವಲ್ ರೇವಣ್ಣ ವಿದೇಶಕ್ಕೆ ಪರಾರಿ ಆಗುವವರೆಗೂ ರಾಜ್ಯ ಸರ್ಕಾರ ಮಲಗಿಕೊಂಡಿತ್ತಾ? ಎಂದು ಶಾಸಕ ಬಸವನಗೌಡ ಪಾಟೀಲ ಯತ್ನಾಳ್ ಪ್ರಶ್ನಿಸಿದ್ದಾರೆ.

ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಪಿ.ಎಸ್.ಐ. ಹಗರಣ ಹಾಗೂ ಸಿನಿಮಾ ನಟಿಯರಿಗೆ ಸಂಬಂಧಿಸಿದ ಮಾದಕ ಪ್ರಕರಣಗಳನ್ನು ಮುಚ್ಚಿ ಹಾಕುವ ಯತ್ನ ನಡೆಸಲಾಗಿತ್ತು. ಅದೇ ರೀತಿ ಪೆನ್‌ಡ್ರೈವ್ ಪ್ರಕರಣವನ್ನು ಅಡ್ಜಸ್ಟ್‌ಮೆಂಟ್ ರಾಜಕಾರಣದ ಮೂಲಕ ಮುಚ್ಚಿ ಹಾಕುವ ಪ್ರಯತ್ನ ನಡೆದಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಸಿ.ಡಿ. ಉತ್ಪಾದನೆ ಮಾಡುವ ಎರಡು ಕಾರ್ಖಾನೆಗಳಿವೆ. ಈ ಎರಡು ಕಾರ್ಖಾನೆಗಳಿಂದ ರಾಜ್ಯದ ರಾಜಕಾರಣವೇ ಹಾಳಾಗುತ್ತಿದೆ. ಅದರಲ್ಲೊಂದರ ಹೆಸರನ್ನು ಜೆಡಿಎಸ್ ನಾಯಕ ಹೆಚ್.ಡಿ. ಕುಮಾರಸ್ವಾಮಿ ಈಗಾ ಗಲೇ ಬಹಿರಂಗ ಪಡಿಸಿದ್ದಾರೆ ಎಂದೂ ಅವರು ಹೇಳಿದರು. ಇಷ್ಟು ದಿನ ಕಾಂಗ್ರೆಸ್‌ಗೆ ಮತ ಹಾಕಲು ಹೇಳುತ್ತಿದ್ದ ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ವಚನಾ ನಂದ ಸ್ವಾಮೀಜಿ ಈಗ ತಾವೇ ಪ್ರಹ್ಲಾದ್ ಜೋಷಿ ಅವರಿಗೆ ಕರೆ ಮಾಡಿ ಆಶೀರ್ವಾದ ಪಡೆಯಲು ಬರುವಂತೆ ಕೇಳಿದ್ದಾರೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಸ್ವಾಮೀಜಿ ಹೆಸರು ಹೇಳದೆಯೇ ಟೀಕಿಸಿದರು.

ರಾಜ್ಯದಲ್ಲಿ ಬಿಜೆಪಿ ಗಾಳಿ ಚೆನ್ನಾಗಿದೆ. ಬಿಜೆಪಿ 25 ಸೀಟುಗಳಲ್ಲಿ ಗೆಲ್ಲಲಿದೆ. ಹೀಗಾಗಿ ನನ್ನ ಮಾನ ಹರಾಜಾಗುತ್ತದೆ ಎಂಬ ಅರಿವಾಗಿ ಸ್ವಾಮೀಜಿ ಈ ರೀತಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಸ್ವಾಮೀಜಿಗಳಿಗೆ ರಾಜಕಾರಣದಲ್ಲಿ ಏನು ಕೆಲಸ? ಇವರೆಲ್ಲ ಹಗರಣದ ಸ್ವಾಮಿಗಳು. ತುಂಗಾರತಿ ಹೆಸರಿನಲ್ಲಿ ಹಣ ಮಾಡಿದ್ದಾರೆ ಎಂದೂ ಆರೋಪಿಸಿದರು.

# ಪಂಚಮಸಾಲಿ ಮೀಸಲಾತಿ ಕೇಳಲು ಕಾಂಗ್ರೆಸ್ ಸಚಿವ, ಶಾಸಕರಿಗೆ ದಿಟ್ಟತನವಿಲ್ಲ : ಯತ್ನಾಳ್

(1ನೇ ಪುಟದಿಂದ) ಮಾತನಾಡಲು ಸ್ವಾಮೀಜಿ ಬಯಸಿದ್ದರು. ಆದರೆ, ಸಚಿವರಾದ ಲಕ್ಷ್ಮಿ ಹೆಬ್ಬಾಳ್ಕರ್ ಹಾಗೂ ಶಾಸಕರಾದ ವಿನಯ್ ಕುಲಕರ್ಣಿ ಮತ್ತು ವಿಜಯಾನಂದ ಕಾಶಪ್ಪನವರ್ ಅವರಿಗೆ ಸಮಯ ಕೊಡಿಸಲು ಒಂದು ವಾರವಾದರೂ ಸಾಧ್ಯವಾಗಲಿಲ್ಲ. ಕೊನೆಗೆ ನಾನು ಹೇಳಿಕೆ ನೀಡಿದ ನಂತರವೇ ಮುಖ್ಯಮಂತ್ರಿ ಸಮಯ ನೀಡಿದರು ಎಂದರು.

ಕಾಂಗ್ರೆಸ್ ಪಕ್ಷದಲ್ಲಿ ಲಿಂಗಾಯತರ ಬಗ್ಗೆ ಅಲರ್ಜಿ ಇದೆ ಎಂದು ಲಕ್ಷ್ಮಿ ಹೆಬ್ಬಾಳ್ಕರ್ ಅವರೇ ನನ್ನ ಬಳಿ ಹೇಳಿದ್ದರು. ಈ ಬಗ್ಗೆ ವೀರರಾಣಿ ಕಿತ್ತೂರು ರಾಣಿ ಚೆನ್ನಮ್ಮ ಪ್ರತಿಮೆ ಎದುರು ಪ್ರಮಾಣ ಮಾಡಲು ಸಿದ್ಧ ಎಂದರು.

ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಪಂಚಮಸಾಲಿ ಸಮಾಜದವರು ಬಿಜೆಪಿ ಪರ ಮತ ಚಲಾಯಿಸಬೇಕು. ನಾನು ಹೋರಾಟ ನಡೆಸಿ ಸಮಾಜದ ಮೀಸಲಾತಿ ಬೇಡಿಕೆ ಈಡೇರಿಸುತ್ತೇನೆ ಎಂದವರು ಭರವಸೆ ನೀಡಿದರು.

ಬಿಜೆಪಿಗೆ ಮತ ನೀಡಬಾರದು ಎಂದು ಹೇಳಿದ ಹರಿಹರದ ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಜಗದ್ಗುರು ಶ್ರೀ ವಚನಾನಂದ ಸ್ವಾಮೀಜಿ ಅವರ ಹೆಸರು ಹೇಳದೇ ತರಾಟೆಗೆ ತೆಗೆದುಕೊಂಡ ಯತ್ನಾಳ್, ಬಿಜೆಪಿಗೆ ಮತ ಹಾಕಬೇಡಿ ಎಂದು ಹೇಳಲು ಸ್ವಾಮೀಜಿಗೆ ಯಾರು ಅನುಮತಿ ಕೊಟ್ಟಿದ್ದಾರೆ? ಎಂದು ಪ್ರಶ್ನಿಸಿದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಶಾಸಕ ಅರವಿಂದ ಬೆಲ್ಲದ್, ಲಿಂಗಾಯತ ಸಮುದಾಯಕ್ಕೆ 2ಡಿ ಅಡಿಯಲ್ಲಿ ನೀಡಲಾಗಿದ್ದ ಶೇ.7ರ ಮೀಸಲಾತಿ ತಡೆಯಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಪ್ತ ರವಿಕುಮಾರ್ ಅವರು ನ್ಯಾಯಾಲಯದಲ್ಲಿ ಅರ್ಜಿ ದಾಖಲಿಸಿರುವುದೇ ಕಾರಣ ಎಂದು ಆರೋಪಿಸಿದರು. ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಮಾತನಾಡಿ, ಕೊಂಡಿ ಮಂಚಣ್ಣ ಹಾಗೂ ಮೀರ್ ಸಾಧಿಕ್ ಮನೋಭಾವದ ಕೆಲವರು ಕಾಂಗ್ರೆಸ್ ಪಕ್ಷಕ್ಕೆ ಪಂಚಮಸಾಲಿ ಸಮಾಜದ ಬೆಂಬಲ ಇದೆ ಎಂದು ಬಿಂಬಿಸಲು ಹೊರಟಿದ್ದಾರೆ ಎಂದು ಕಿಡಿ ಕಾರಿದರು.

ಇವರು ತಮ್ಮ ಸ್ವಾರ್ಥಕ್ಕಾಗಿ ಪಂಚಮಸಾಲಿ ಸಮಾಜ ಒಡೆದು ಕಾಂಗ್ರೆಸ್ ಪಕ್ಷಕ್ಕೆ ಬೆಂಬಲಿಸುತ್ತಿದ್ದಾರೆ ಎಂದ ಅವರು, ಪಂಚಮಸಾಲಿ ಮೀಸಲಾತಿ ಹೋರಾಟದ ಪಾದಯಾತ್ರೆ ದಾವಣಗೆರೆಗೆ ಬಂದಾಗ ಕಾಂಗ್ರೆಸ್‌ನ ಯಾವ ನಾಯಕ ಬೆಂಬಲಿಸಿದರು? ಎಂದು ಪ್ರಶ್ನಿಸಿದರು.

ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಗೆಲುವಿಗೆ ಪಂಚಮಸಾಲಿ ಸಮಾಜವೇ ನಿರ್ಣಾಯಕ. ಗಾಯತ್ರಿ ಸಿದ್ದೇಶ್ವರ ಅವರ ಗೆಲುವು ಈ ಬಾರಿ ನಿಶ್ಚಿತವಾಗಿದೆ. ಗೆಲುವಿನ ನಂತರ, ಪಂಚಮಸಾಲಿ ಸಮಾಜಕ್ಕೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಸಂಸದ ಜಿ.ಎಂ. ಸಿದ್ದೇಶ್ವರ ಮಾತನಾಡಿ, ನಾನು ಎಲ್ಲ ಸಮಾಜದವರಿಗೆ ದಾನ ಮಾಡಿದ್ದೇನೆ. ಆದರೆ, ದಾನ ಮಾಡಿದ್ದನ್ನು ಪ್ರಚಾರಕ್ಕೆ ಬಳಸಿಕೊಳ್ಳುವುದಿಲ್ಲ. ಬಲಗೈ ದಾನ ಮಾಡಿದ್ದು ಎಡಗೈಗೆ ಗೊತ್ತಾಗಬಾರದು ಎನ್ನುತ್ತಾರೆ. ಕೆಲವರು ಎರಡೂ ಕೈಗೆ ಗೊತ್ತಾಗುವಂತೆ ದಾನ ಮಾಡುತ್ತಾರೆ ಎಂದು ಲೇವಡಿ ಮಾಡಿದರು.

ಜಿ.ಪಂ. ಮಾಜಿ ಸದಸ್ಯ ತೇಜಸ್ವಿ ಪಟೇಲ್ ಮಾತನಾಡಿ, ಹೆಚ್ಚು ಜನಸಂಖ್ಯೆ ಇದ್ದರೂ ಅದರ ಮುಖಂಡರು ಚುನಾವಣೆಯಲ್ಲಿ ಸೋಲುವ ಪ್ರವೃತ್ತಿ ಪಂಚಮಸಾಲಿ ಸಮಾಜದಲ್ಲಿ ಮಾತ್ರ ಕಂಡು ಬರುತ್ತಿದೆ. ಚುನಾವಣೆಯಲ್ಲಿ ಹಣಬಲದ ಪ್ರಾಬಲ್ಯ ಹೆಚ್ಚಾಗಿರುವುದೇ ಇದಕ್ಕೆ ಕಾರಣ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಮಾಜಿ ಮೇಯರ್ ಬಿ.ಜಿ. ಅಜಯ್ ಕುಮಾರ್, ದಾವಣಗೆರೆ ಜಿಲ್ಲೆಯಲ್ಲಿ ಪಂಚಮಸಾಲಿ ಸಮಾಜದ ನಾಯಕತ್ವ ಬಲಿಷ್ಠವಾಗಬೇಕಿದೆ. ಜಿಲ್ಲೆಯಲ್ಲಿ ನಮ್ಮ ಸಮಾಜ ಎದುರಿಸುತ್ತಿರುವ ನಾಯಕತ್ವದ ಕೊರತೆಯನ್ನು ಯತ್ನಾಳ್ ನೀಗಿಸಿದ್ದಾರೆ ಎಂದರು.

ಕಾಂಗ್ರೆಸ್ ಸರ್ಕಾರ ಪಂಚಮಸಾಲಿ ವಿರೋಧಿಯಾಗಿದೆ. ಮೀಸಲಾತಿ ಕುರಿತು ಮುಖ್ಯಮಂತ್ರಿ ಬಳಿ ಮಾತನಾಡಲು ಶ್ರೀ ಜಯಮೃತ್ಯುಂಜಯ ಶ್ರೀಗಳಿಗೆ ಐದು ನಿಮಿಷಗಳ ಸಮಯ ಸಹ ಕೊಡಲಾಗಿಲ್ಲ ಎಂದು ಆಕ್ಷೇಪಿಸಿದರು.

ವೇದಿಕೆಯ ಮೇಲೆ ಪರಿಷತ್ ಸದಸ್ಯರಾದ ರವಿಕುಮಾರ್, ನಾರಾಯಣಸ್ವಾಮಿ, ಮುಖಂಡರಾದ ಜಿ.ಎಸ್. ಅನಿತ್, ಪರಮೇಶ್ವರ ಗೌಡ್ರು, ರಘುಚಂದ್ರನ್, ನಾಗರಾಳ್ ಹುಲಿ, ಎಂ.ಎಸ್. ರುದ್ರಗೌಡ್ರು, ಬಿ. ಚಿದಾನಂದಪ್ಪ, ಆರುಂಡಿ ನಾಗರಾಜ್, ಚಂದ್ರಶೇಖರಪ್ಪ, ಗಾಯತ್ರಿ, ಮಂಜುಳ ಮತ್ತಿತರರು ಉಪಸ್ಥಿತರಿದ್ದರು.

## ಸಿದ್ದೇಶ್ವರ ಆಕ್ರೋಶ, ಗದ್ಗದಿತರಾದ ಶಿವಶಂಕರ್

(1ನೇ ಪುಟದಿಂದ) ಎಸ್.ಎಸ್. ಮಲ್ಲಿಕಾರ್ಜುನ್ ಅವರು ವೈಯ ಕ್ತಿಕ ಟೀಕೆ ಮಾಡಿದ್ದಾರೆ ಎಂದು ಸಂಸದ ಜಿ.ಎಂ. ಸಿದ್ದೇಶ್ವರ ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಅವರೂ ಕಲ್ಲೇಶ್ವರ ರೈಸ್ ಮಿಲ್ ಪಕ್ಕ ಪಾನ್ ಮಸಾಲಾ ಉದ್ಯಮ ನಡೆಸುತ್ತಿರುವುದನ್ನು ಮರೆತಿದ್ದಾರೆ. ನ್ಯಾಯವಾಗಿ, ಧರ್ಮವಾಗಿ ಮಾತನಾಡಬೇಕು. ವೈಯಕ್ತಿಕ ವಿಷಯ ಮಾತನಾಡಬಾರದು, ಕೀಳಾಗಿ ಮಾತನಾಡಬಾರದು ಎಂದರು.

ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಮಾತನಾಡಿ, ಸಮಾಜದಿಂದ ತಿರಸ್ಕೃತಗೊಂಡವರು, ಪಕ್ಷದಿಂದ ಹೊರ ಹಾಕಲ್ಪಟ್ಟವರು ಗತಿ ಇಲ್ಲದೇ ಕಾಂಗ್ರೆಸ್ ಪಕ್ಷಕ್ಕೆ ಹೋಗಿದ್ದಾರೆ ಎಂದು ಪರೋಕ್ಷವಾಗಿ ತಮ್ಮ ಸಹೋದರ ಹೆಚ್.ಎಸ್. ನಾಗರಾಜ್ ಅವರನ್ನು ತರಾಟೆಗೆ ತೆಗೆದುಕೊಂಡರು.

2017ರಲ್ಲಿ ಭದ್ರಾ ಸಕ್ಕರೆ ಕಾರ್ಖಾನೆ ಹರಾಜಿಗೆ ತರಲಾಗಿತ್ತು. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಶಾಸಕ ಶಾಮನೂರು ಶಿವಶಂಕರಪ್ಪನವರು ಹರಾಜಿಗೆ ಮೂರು ದಿನ ಮುಂಚೆ ಸಂಘವೊಂದನ್ನು ಕಟ್ಟಿ, ಆ ಮೂಲಕ ಕಾರ್ಖಾನೆಯ ಆಸ್ತಿಯನ್ನು ಕಡಿಮೆ ಬೆಲೆಗೆ ಪಡೆಯಲು ಯತ್ನಿಸಿದ್ದರು. ಎಂದು ಆರೋಪಿಸಿದರು. ನಮ್ಮ ಸಮಾಜದ ಆಸ್ತಿ ಕಬಳಿಸಲು ಪ್ರಯತ್ನಿಸಿದವರಿಗೆ ತಕ್ಕ ಪಾಠ ಕಲಿಸಬೇಕು ಎಂದು ಹೇಳುವಾಗ ಶಿವಶಂಕರ್ ಗದ್ಗದಿತರಾದರು.

## ಅಂಕಲಿಮಠದ ಜಾತ್ರೆ : ನಾಳೆ ಸಭೆ

ದಾವಣಗೆರೆ, ಮೇ 1 - ರಾಯಚೂರು ಜಿಲ್ಲೆ ಲಿಂಗಸಗೂರು ತಾಲ್ಲೂಕಿನ ತಲೆಕಟ್ಟು ಗ್ರಾಮದ ಅಂಕಲಿಮಠದ ಜಾತ್ರಾ ಮಹೋತ್ಸವ ಮತ್ತು ಭವ್ಯ ರಥೋತ್ಸವ ಹಾಗೂ ಈ ಸಂದರ್ಭದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಮಾಂಗಲ್ಯ ಭವನದ ಲೋಕಾರ್ಪಣೆಯ ಸಂಬಂಧ ನಾಡಿದ್ದು ದಿನಾಂಕ 3 ರ ಶುಕ್ರವಾರ ಬೆಳಿಗ್ಗೆ 10.30ಕ್ಕೆ ನಗರದ ಬಾಪೂಜಿ ಇಂಜಿನಿಯರಿಂಗ್ ಕಾಲೇಜು ಬೆಳ್ಳಿಗಿರಿ ವಸತಿ ಗೃಹದಲ್ಲಿ ಪೂರ್ವಭಾವಿ ಸಭೆಯನ್ನು ಅಂಕಲಿಮಠದ ಶ್ರೀಗಳ ಸಾನ್ನಿಧ್ಯದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕೆಟಿಜೆ ನಗರದ ಗಾಂಧೀಜಿ ಹರಿಜನ ಯುವಕ ಸಂಘದ ಪ್ರಧಾನ ಕಾರ್ಯದರ್ಶಿ ಸೋಮಲಾಪುರದ ಹನುಮಂತಪ್ಪ ತಿಳಿಸಿದ್ದಾರೆ.

## ಕಾಂಗ್ರೆಸ್ ಅಭ್ಯರ್ಥಿ ಪ್ರಭಾ ಪರ ಇಂದು ಎಸ್ಸೆಸ್ ರೋಡ್ ಷೋ



ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಕಾಂಗ್ರೆಸ್ ಪಕ್ಷದಿಂದ ಸ್ಪರ್ಧಿಸಿರುವ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಪರವಾಗಿ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ವಿವಿಧ ಕಡೆಗಳಲ್ಲಿ ಶಾಸಕ ಶಾಮನೂರು ಶಿವಶಂಕರಪ್ಪ ಅವರು ಇಂದು ರೋಡ್ ಷೋ ಮೂಲಕ ಮತಯಾಚಿಸುವರು.

ಸಂಜೆ 4.30ಕ್ಕೆ ಅರಳಿಮರ ಸರ್ಕಲ್‌ನಿಂದ ಆರಂಭವಾಗುವ ಈ ರೋಡ್ ಷೋ, ಬೇತೂರು ರಸ್ತೆ, ವೆಂಕಟೇಶ್ವರ ಸರ್ಕಲ್, ದೇವರಾಜ್ ನಗರ, ಆನೆಕೊಂಡ, ಬಂಬೂಬಜಾರ್ ರಸ್ತೆ, ಶೇಖರಪ್ಪ ನಗರ ಸಿ ಬ್ಲಾಕ್, ರಂಭಾಪುರಿ ರಸ್ತೆ, ಶೇಖರಪ್ಪ ನಗರ 'ಎ' ಬ್ಲಾಕ್, ಮುತ್ತು ಮಾರಿಯಮ್ಮ ದೇವಸ್ಥಾನ, ಗಣೇಶ ಹೋಟೆಲ್, ಹೆ.ಕೆ.ಆರ್.ನಗರ, ಕಬ್ಬೂರು ಬಸಪ್ಪ ನಗರ, ಭಾರತ್ ಕಾಲೋನಿ 13ನೇ ಕ್ರಾಸ್‌ನಿಂದ ಅಣ್ಣಾನಗರದವರೆಗೂ ನಡೆಯಲಿದೆ.

ರೋಡ್ ಷೋನಲ್ಲಿ ಮುಖಂಡರುಗಳಾದ ಮಹಾನಗರ ಪಾಲಿಕೆ ಸದಸ್ಯರುಗಳಾದ ಮೀನಾಕ್ಷಿ ಜಗದೀಶ್, ಸೌಮ್ಯ ನರೇಂದ್ರ, ಶಿವಲೀಲಾ ಕೊಟ್ರಯ್ಯ, ಕೆ.ಚಮನ್ ಸಾಬ್, ಸೈಯದ್ ಚಾರ್ಲಿ, ಮಾಜಿ ಸದಸ್ಯ ಪರಸಪ್ಪ, ರಾಜಶೇಖರ ಗೌಡ್ರು, ಮುಖಂಡರುಗಳಾದ ಲಾಲ್ ಆರೀಫ್, ಸಾವನ್ ಜೈನ್, ಅಜ್ಜಪ್ಪ, ಧರ್ಮಣ್ಣ, ಬಡೇಸಾಬ್, ರಘು ಡಿ., ಪಾಲ್ಗೊಳ್ಳುವರು ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಯೂಬ್ ಪೈಲ್ವಾನ್ ತಿಳಿಸಿದ್ದಾರೆ.

## ದೇಶದ ಬಹುತೇಕ ಭಾಗದಲ್ಲಿ ಹೆಚ್ಚಿನ ತಾಪಮಾನ, ಹೆಚ್ಚು ಬಿಸಿಗಾಳಿ

(1ನೇ ಪುಟದಿಂದ) ಪ್ರದೇಶಗಳಲ್ಲಿ ಎಂಟರಿಂದ 11 ದಿನಗಳ ಕಾಲ ಬಿಸಿಗಾಳಿ ದಿನಗಳಿರಲಿವೆ ಎಂದು ತಿಳಿಸಿದ್ದಾರೆ.

ಕರ್ನಾಟಕ ಸೇರಿದಂತೆ ಹಲವು ರಾಜ್ಯಗಳಲ್ಲಿ ಐದರಿಂದ ಏಳು ದಿನಗಳ ಕಾಲ ಬಿಸಿಗಾಳಿಯ ವಾತಾವರಣ ಇರಲಿದೆ ಎಂದವರು ಹೇಳಿದ್ದಾರೆ.

ದೇಶದ ಬಹುತೇಕ ಭಾಗಗಳಲ್ಲಿ ತಾಪಮಾನ ವಾಡಿಕೆಗಿಂತ ಹೆಚ್ಚಾಗಿರಲಿದೆ. ಈಶಾನ್ಯ, ವಾಯುವ್ಯ, ಮಧ್ಯ ಭಾರತದ ಕೆಲವೆಡೆ ಮಾತ್ರ ತಾಪಮಾನ ವಾಡಿಕೆಗಿಂತ ಕಡಿಮೆ ಇರಲಿದೆ ಎಂದು ತಿಳಿಸಲಾಗಿದೆ. ಮೇ ತಿಂಗಳಲ್ಲಿ ಸಾಮಾನ್ಯ ಪ್ರಮಾಣದ ಮಳೆಯಾಗಲಿದೆ ಎಂದು ಮುನ್ಸೂಚನೆ ನೀಡಲಾಗಿದೆ.

# ಸಂವಿಧಾನ ಬದಲಿಸುವ ಪಕ್ಷಕ್ಕೆ ಪಾಠ ಕಲಿಸಿ



**ಅಂಬೇಡ್ಕರ್ ಕೊಟ್ಟ ಎಸ್ಸಿ- ಎಸ್ಟಿ ಮೀಸಲಾತಿ ತೆಗೆಯಲು ಪ್ರಯತ್ನಿಸಿದರೆ ಕೈಗೆ ಬೆಂಕಿ ಹತ್ತುತ್ತೆ.**

**- ಜಿ. ಪರಮೇಶ್ವರ್, ಗೃಹ ಸಚಿವ**

ದಾವಣಗೆರೆ, ಮೇ 1- ಸಂವಿಧಾನ ಬದಲಿಸುವ ಮಾತನ್ನಾಡುವ ಬಿಜೆಪಿ ಪಕ್ಷಕ್ಕೆ ತಕ್ಕ ಪಾಠ ಕಲಿಸುವ ಜತೆಗೆ ಕಾಂಗ್ರೆಸ್ ಪಕ್ಷ ಗೆಲ್ಲಿಸಿ ಎಂದು ಗೃಹ ಸಚಿವ ಜಿ. ಪರಮೇಶ್ವರ್ ಹೇಳಿದರು.

ನಗರದ ಛಲವಾದಿ ಸಮುಧಾಯ ಭವನದಲ್ಲಿ ಬುಧವಾರ ನಡೆದ ಛಲವಾದಿ ಸಮಾಜದ ಸಭೆಯಲ್ಲಿ ಅವರು ಮಾತನಾಡಿದರು.

ಅಂಬೇಡ್ಕರ್ ಅವರು ಸಂವಿಧಾನ ರಚಿಸದೇ ಇದ್ದಿದ್ದರೆ ಶೇ.60ರಿಂದ 70ರಷ್ಟಿರುವ ಶೋಷಿತ ಸಮುದಾಯಗಳು ಶಿಕ್ಷಣ ಮತ್ತು ಮೂಲಭೂತ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದರು ಎಂದರು.

ಬಿಜೆಪಿಯ ಸಂಸದರು, ಸಚಿವರು ನಾವು ಬಂದಿರೋದೆ ಸಂವಿಧಾನ ಬದಲಿಸೋಕೆ ಎಂಬ ದಿಟ್ಟತನದ ಹೇಳಿಕೆ ಗಮನಿಸಿದರೆ ನಾವು ಜಾಗೃತರಾಗಲೇ ಬೇಕೆಂದರು.

ಛಲವಾದಿ ಸಮಾಜದ ಮುಖಂಡರು, ಎಸ್. ಎಸ್. ಮಲ್ಲಿಕಾರ್ಜುನ್ ಹಾಗೂ ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ಬೆಂಬಲ ಸೂಚಿಸುತ್ತೇವೆ ಎಂದು ಹೇಳುತ್ತಿರುವುದು ನನಗೆ ಸಂತೋಷ ಎಂದರು.

ನಮ್ಮ ಸಮಾಜದ ಹಿರಿಯ ನಾಯಕ ಕೆ.ಎಚ್ ರಂಗನಾಥ್ ಮತ್ತು ಶಾಮನೂರು ಶಿವಶಂಕರಪ್ಪ ಅವರ ಸಂಬಂಧ ಹಿಂದಿನಿಂದಲೂ ಉತ್ತಮವಾಗಿದ್ದು, ಈ ಸಂಬಂಧವನ್ನು ಮುಂದುವರಿಸುವ ನಿಟ್ಟಿನಲ್ಲಿ ನಮ್ಮ ಮನೆ ಮಹಿಳೆ ಡಾ. ಪ್ರಭಾ ಅವರನ್ನು ಗೆಲ್ಲಿಸಲೇ ಬೇಕೆಂದು ಮನವಿ ಮಾಡಿದರು.

ಛಲವಾದಿ ಸಮಾಜದ ಇಬ್ಬರು ನಾಯಕರನ್ನು ಕಾಂಗ್ರೆಸ್ ಪಕ್ಷವು ಎಐಸಿಸಿ ಅಧ್ಯಕ್ಷರನ್ನಾಗಿಸಿದೆ. ಇಂತಹ ಕಾಳಜಿ ಹೊಂದಿರುವ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ ಎಂದರು.

ಎಸ್ಸಿ, ಎಸ್ಟಿಗೆ ಇರುವ ಮೀಸಲಾತಿ ತಗೆದು ಮುಸ್ಲಿಂಮರಿಗೆ ಕೊಡುತ್ತಾರೆ ಎಂದು ಪ್ರಧಾನಿ ಮೋದಿ ಅವರು ಸುಳ್ಳು ಹೇಳುತ್ತಿದ್ದಾರೆ. ಈ ರೀತಿ ಪಕ್ಷ ನಡೆದುಕೊಂಡರೆ ನಾನೇ ರಾಜೀನಾಮೆ ಕೊಡುತ್ತೇನೆ ಎಂದು ಗುಡುಗಿದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್ ಮಾತನಾಡಿ, ಈ ಸಮಾಜದ ಮುಖಂಡರಿಗೂ, ನಮಗೂ ಅನ್ಯೋನ್ಯ ಸಂಬಂಧ ವಿದೆ ಮತ್ತು ನಮ್ಮ ಕುಟುಂಬದ ಮೇಲೆ ವಿಶ್ವಾಸ ಇಟ್ಟಿದ್ದಿರಿ. ಆದ್ದರಿಂದ ಛಲ ವಾದಿ ಸಮಾಜಕ್ಕೆ ಹೆಚ್ಚಿನ ಅನುಕೂಲ ಮಾಡುವುದಾಗಿ ತಿಳಿಸಿದರು.

ಸಾಮಾಜಿಕ ಕಳಕಳಿ ಹಾಗೂ ಜನರ ಆರೋಗ್ಯದ ಕಾಳಜಿ ಹೊಂದಿರುವ ಡಾ. ಪ್ರಭಾ ಅವರು ಸಂಸತ್‌ನಲ್ಲಿ ನಮ್ಮ ಸಮಸ್ಯೆಗಳ ಬಗ್ಗೆ ಮಾತನಾಡುವ ಭಾಷಾ ಕೌಶಲ್ಯ ಹೊಂದಿದ್ದಾರೆ ಎಂದರು.

ಛಲವಾದಿ ಸಮಾಜಕ್ಕೆ ಅನುಕೂಲ ಮಾಡುವ ಜತೆಗೆ ಅಪೂರ್ಣವಾದ ಸಮುದಾಯ ಭವನಗಳಿಗೆ ಹೆಚ್ಚಿನ ಅನುದಾನ ತರುತ್ತೇನೆ ಎಂದ ಅವರು, ಡಾ. ಪ್ರಭಾ ಅವರನ್ನು ಗೆಲ್ಲಿಸಿ ಎಂದರು.

ಸಮಾಜದ ಜಿಲ್ಲಾಧ್ಯಕ್ಷ ರುದ್ರಮುನಿ ಮಾತನಾಡಿ, ಹಿಂದಿನ ಸರ್ಕಾರ ಘೋಷಿಸಿದ ಓನಕೆ ಓಬವ್ವ ಜಯಂತಿಯನ್ನು ದೊಡ್ಡ ಮಟ್ಟದಲ್ಲಿ ಮಾಡುವ ಮೂಲಕ ಸಮಾಜವನ್ನು ಸಂಘಟಿಸಲು ಸಹಕರಿಸಿ ಎಂದರು.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ವಿಜಯ ಕುಮಾರ್, ಚಿತ್ರದುರ್ಗ ಕಾಂಗ್ರೆಸ್ ಜಿಲ್ಲಾಧ್ಯಕ್ಷ ತಾಜ್‌ಫಿರ್, ಕಾಂಗ್ರೆಸ್ ಪಕ್ಷದ ಮುಖಂಡ ನಂದಿಗಾವಿ ಶ್ರೀನಿವಾಸ್, ಕೆ.ಎಸ್. ಬಸವರಾಜ್, ರಮೇಶ್, ಬಸವರಾಜ್, ಡಾ.ಜಗನ್ನಾಥ್, ನಿರಂಜನ್, ತಿಪ್ಪೇಸ್ವಾಮಿ, ಚಂದ್ರಪ್ಪ ಮತ್ತು ಇತರರು ಇದ್ದರು.

## ಹರಪನಹಳ್ಳಿ, ಹೊನ್ನಾಳಿ, ಮಲೇಬೆನ್ನೂರಿನಲ್ಲಿ ಇಂದು ಬಿಜೆಪಿ ಅಭ್ಯರ್ಥಿ ಗಾಯತ್ರಿ ರೋಡ್ ಶೋ



ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀಮತಿ ಗಾಯತ್ರಿ ಸಿದ್ದೇಶ್ವರ ಅವರು ಹರಪನಹಳ್ಳಿ, ಹೊನ್ನಾಳಿ, ಮಲೆಬೆನ್ನೂರಿನಲ್ಲಿ ಇಂದು ಬೃಹತ್ ರೋಡ್ ಶೋ ನಡೆಸಲಿದ್ದಾರೆ. ಬೆಳಗ್ಗೆ 9 ರಿಂದ 12 ರವರೆಗೂ ಹರಪನಹಳ್ಳಿ ಪಟ್ಟಣದಲ್ಲಿ ರೋಡ್ ಶೋ ನಡೆಸಲಿದ್ದಾರೆ. ಮಾಜಿ ಸಚಿವರಾದ ಜಿ.ಕರುಣಾಕರರೆಡ್ಡಿ, ಶೋಭಾ ಕರಂದ್ಲಾಜೆ ಭಾಗವಹಿಸಲಿದ್ದಾರೆ. ಸಂಜೆ 4 ರಿಂದ 6 ರವರೆಗೂ ಹೊನ್ನಾಳಿ ಪಟ್ಟಣದಲ್ಲಿ ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ನೇತೃತ್ವದಲ್ಲಿ ಬೃಹತ್ ರೋಡ್ ಶೋ ನಡೆಸಲಿದ್ದಾರೆ. ಸಂಜೆ 6.30 ಕ್ಕೆ ಮಲೆಬೆನ್ನೂರಿನಲ್ಲಿ ಮಾಜಿ ಸಚಿವೆ ಶೋಭಾ ಕರಂದ್ಲಾಜೆ ಹಾಗೂ ಹಾಲಿ ಶಾಸಕ ಬಿ.ಪಿ.ಹರೀಶ್, ಮಾಜಿ ಶಾಸಕ ಎಚ್.ಎಸ್. ಶಿವಶಂಕರ್ ನೇತೃತ್ವದಲ್ಲಿ ಬೃಹತ್ ರೋಡ್ ಶೋ ನಡೆಸಲಿದ್ದಾರೆ.

## ರೇವಣ್ಣಗೆ ಜೆಡಿಎಸ್‌ನಿಂದ ನೋಟಿಸ್

(1ನೇ ಪುಟದಿಂದ) ಏಕಾಏಕಿ ಉಚ್ಚಾಟಿಸಲು ಸಾಧ್ಯವಿಲ್ಲದ ಹಿನ್ನೆಲೆಯಲ್ಲಿ ಪಕ್ಷದ ಕಾನೂನಿನ ಚೌಕಟ್ಟಿನಲ್ಲಿ ಅಮಾನತುಗೊಳಿಸಲಾಗಿದೆ.

ಈ ಕಾರಣಕ್ಕಾಗಿ ಅವರು ವಿದೇಶದಲ್ಲಿ ಇರುವುದರಿಂದ ನೋಟಿಸ್ ನೀಡಿ ವಿವರಣೆ ಪಡೆಯದೆ ಅಮಾನತು ಮಾಡುವ ತೀರ್ಮಾನ ಕೈಗೊಂಡಿತು.

ಇದೇ ಸಂದರ್ಭದಲ್ಲಿ ಎಸ್‌ಐಟಿ, ರೇವಣ್ಣ ಅವರನ್ನು ಪ್ರಮುಖ ಆರೋಪಿ ಸ್ಥಾನದಲ್ಲಿ ಕೂಡಿಸಿರುವುದರಿಂದ ಈ ಸಂಬಂಧ ವಿವರಣೆ ಪಡೆದು ಮುಂದಿನ ಕ್ರಮದ ಹಿನ್ನೆಲೆಯಲ್ಲಿ ನೋಟೀಸ್ ಜಾರಿ ಮಾಡಲಾಗಿದೆ.

**LOST OF DOCUMENT**

I **Manjula** W/o Raghunatha G. would like to inform the general public that I have lost/ misplaced my original old **Reg. Sale Deed document S.R.1751/88-89** near chowkipet, Davangere-577001. Registered an **FIR** in KSP report no. **1019671/2024 dated on 18-04-2024.**

If anyone find it kindly contact me at
**Ph. : 97383 83468**

# ಬಿಜೆಪಿ ಸರ್ಕಾರದ 10 ವರ್ಷದ ಸಾಧನೆಗಳೇ ನನ್ನ ಗೆಲುವಿಗೆ ಶ್ರೀರಕ್ಷೆ : ಗಾಯತ್ರಿ ಸಿದ್ದೇಶ್ವರ



## ಹರಿಹರದಲ್ಲಿ ಬಿಜೆಪಿ ಬೃಹತ್ ರೋಡ್

ಹರಿಹರ, ಮೇ 1- ಕಳೆದ ಹತ್ತು ವರ್ಷಗಳ ಕಾಲ ಕೇಂದ್ರದಲ್ಲಿ ಆಡಳಿತ ಮಾಡಿರುವ ಬಿಜೆಪಿ ಸರ್ಕಾರದ ಸಾಧನೆಗಳೇ ನನ್ನ ಗೆಲುವಿಗೆ ಶ್ರೀರಕ್ಷೆಯಾಗಲಿವೆ ಎಂದು ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಜಿ.ಎಂ. ಸಿದ್ದೇಶ್ವರ ಹೇಳಿದರು.

ನಗರದ ಪಕ್ಕೀರಸ್ವಾಮಿ ಮಠ ಮುಂಭಾಗ ದಿಂದ ನಡೆದ ಬಿಜೆಪಿ ಪ್ರಚಾರದ ರೋಡ್ ಶೋ ಮೂಲಕ ಮತಯಾಚನೆ ಮಾಡಿ ನಂತರ ಹರಿಹರೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಮತದಾರರ ಉದ್ದೇಶಿಸಿ ಅವರು ಮಾತನಾಡಿದರು.

ದೇಶದ ಜನರು ನೆಮ್ಮದಿ ಜೀವನ ನಡೆಸಬೇಕು ಎಂಬ ಉದ್ದೇಶದಿಂದ ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಹಲವಾರು ಯೋಜನೆಗಳನ್ನು ಕಾರ್ಯರೂಪಕ್ಕೆ ತರುವ ಮೂಲಕ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದು, ಜೊತೆಗೆ ನಮ್ಮ ಮಾವನವರಾದ ಜಿ.ಎಂ. ಮಲ್ಲಿಕಾರ್ಜುನಪ್ಪ ಹಾಗೂ ನಮ್ಮ ಪತಿ ಜಿ.ಎಂ. ಸಿದ್ದೇಶ್ವರ ಅವರೂ ಸಹ ಜಿಲ್ಲೆಯ ಜನರು ನೆಮ್ಮದಿ ಜೀವನ ನಡೆಸಲು ಸಾಕಷ್ಟು ಶ್ರಮಿಸಿದ್ದು, ಅವರು ಮಾಡಿರುವ ಜನಪರವಾದ ಕೊಡುಗೆಗಳನ್ನು ಇಂದಿಗೂ ಜಿಲ್ಲೆಯ ಜನರು ಸ್ಮರಿಸುತ್ತಾರೆ. ಅವರು ಜಿಲ್ಲೆಯ ಜನತೆಗಾಗಿ ಶ್ರಮವಹಿಸಿದ ಪರಿಣಾಮ ನನಗೆ ಈ ಬಾರಿ ಅಧಿಕ ಮತಗಳಿಂದ ಜಿಲ್ಲೆಯ ಜನರು ಗೆಲ್ಲಿಸುತ್ತಾರೆ ಎಂಬ ವಿಶ್ವಾಸವನ್ನು ಹೊಂದಿರುವುದಾಗಿ ಹೇಳಿದರು.

ಶಾಸಕ ಬಿ.ಪಿ.ಹರೀಶ್ ಮಾತನಾಡಿ, ಈಗಾಗಲೇ ಚುನಾವಣೆ ದಿನಾಂಕ ಘೋಷಣೆ ಆದಾಗಿನಿಂದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಹವಾ ಇದ್ದು ಮತ್ತು ಪ್ರತಿಯೊಂದು ಗ್ರಾಮದಲ್ಲಿ ರೋಡ್ ಶೋ, ಬಹಿರಂಗ ಭಾಷಣ ಇವೆಲ್ಲವೂ ಒಂದು ಹಂತಕ್ಕೆ ಮುಗಿದಿದ್ದು, ಚುನಾವಣೆ ಇನ್ನೂ ಕೇವಲ ಐದು ದಿನ ಮಾತ್ರ ಬಾಕಿ ಇದೆ. ಪಕ್ಷದ ಮುಖಂಡರು, ಕಾರ್ಯಕರ್ತರು ಕರಪತ್ರಗಳನ್ನು ಮನೆ ಮನೆಗೆ ಮುಟ್ಟಿಸುವ ಕೆಲಸವನ್ನು ಮಾಡಬೇಕು ಎಂದು ಹೇಳಿದರು.

ಮಾಜಿ ಶಾಸಕ ಹೆಚ್. ಎಸ್. ಶಿವಶಂಕರ್ ಮಾತನಾಡಿ, ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ಬಿಜೆಪಿ ಪಕ್ಷದ ಅಭ್ಯರ್ಥಿ ಬೆಂಬಲಿಸಲು ಜನ ಸಾಗರವೇ ಹರಿದುಬರುತ್ತಿದ್ದು, ಈ ಬಾರಿ ಬಿಜೆಪಿ ಪಕ್ಷವು ಇತಿಹಾಸ ಸೃಷ್ಟಿ ಮಾಡುವಂತೆ, ಸುಮಾರು 1 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗಾಯಿತ್ರಿ ಸಿದ್ದೇಶ್ ಗೆಲ್ಲಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾ ಅಧ್ಯಕ್ಷ ಬಿ. ಚಿದಾನಂದಪ್ಪ, ನಗರಸಭೆ ಸದಸ್ಯರಾದ ಗುತ್ತೂರು ಜಂಬಣ್ಣ, ಹನುಮಂತಪ್ಪ, ಪಿ.ಎನ್. ವಿರುಪಾಕ್ಷಪ್ಪ, ಬಿಜೆಪಿ ನಗರ ಘಟಕದ ಅಧ್ಯಕ್ಷ ಅಜಿತ್ ಸಾವಂತ್, ಗ್ರಾಮಾಂತರ ಘಟಕದ ಅಧ್ಯಕ್ಷ ಲಿಂಗರಾಜ್ ಹಿಂಡಸಗಟ್ಟೆ, ಮುಖಂಡರಾದ ಹಲಸಬಾಳು ಶಿವಾನಂದಪ್ಪ, ಗೌಡ್ರು ಪುಟ್ಟಪ್ಪ, ಡಿ.ಯು. ಅರುಣ್ ಕುಮಾರ್ ಮಿಠಾಯಿ, ಅಡಕಿ ಕುಮಾರ್, ಸುರೇಶ್ ಚಂದಪೂರ್, ಕಲ್ಲಯ್ಯ, ಸಿದ್ದೇಶ್ ಹೊಳಗಡ್ಡೆ, ಹೆಚ್. ಮಂಜನಾಯ್ಕ್, ತುಳಜಪ್ಪ ಭೂತೆ, ರಾಜು ರೋಖಡೆ, ಬಸವನಗೌಡ, ಸ್ವಾತಿ ಹನುಮಂತಪ್ಪ, ಸಂತೋಷ ಪೋಟೋ, ರೂಪಾ ಕಾಟ್ವೆ, ಪ್ರಮೀಳಾ ನಲ್ಲೂರು, ರೂಪಾ ಶಶಿಕಾಂತ್, ಲತಾ ಕೊಟ್ರೇಶ್, ಆಟೋ ರಾಜು, ಬಾತಿ ಚಂದ್ರಶೇಖರ್, ರಾಜು ಕಿರೋಜಿ, ಅದಿತ್ಯ, ಅದ್ವೈತ ಶಾಸ್ತ್ರಿ, ರಶ್ಮಿ ಮೆಹ ರ್ವಾಡೆ, ಸಾಕ್ಷಿ, ಮಮತಾ ಇತರರು ಹಾಜರಿದ್ದರು.

# ಕಾಂಗ್ರೆಸ್ ಪಕ್ಷದಲ್ಲಿ ಕುರುಬ ಸಮುದಾಯಕ್ಕೆ ನೀಡಿರುವ ಆದ್ಯತೆಯನ್ನು ಮರೆಯಬಾರದು



## ಪ್ರಭಾ ಪರ ಪ್ರಚಾರದಲ್ಲಿ ಶಾಸಕ ಪ್ರದೀಪ್ ಈಶ್ವರ್

ಹೊನ್ನಾಳಿ ಮೇ 1 - ಕರ್ನಾಟಕ ರಾಜ್ಯವನ್ನು ಕುರುಬ ಸಮುದಾಯದವರು ಆಳ್ವಿಕೆ ನಡೆಸುತ್ತಿದ್ದಾರೆ ಎಂಬುದನ್ನು ಮರೆಯಬಾರದು ಎಂದು ಚಿಕ್ಕಬಳ್ಳಾಪುರ ಶಾಸಕ ಪ್ರದೀಪ್ ಈಶ್ವರ್ ಹೇಳಿದರು.

ಬುಧವಾರದಂದು ಹೊನ್ನಾಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ|| ಪ್ರಭಾ ಮಲ್ಲಿಕಾರ್ಜುನ್ ಪರ ಪ್ರಚಾರ ನಡೆಸಿ ಮತದಾರರನ್ನುದ್ದೇಶಿಸಿ ಮಾತನಾಡಿದರು.

ರಾಜ್ಯದ ಪ್ರಮುಖ ಹುದ್ದೆ ಮುಖ್ಯಮಂತ್ರಿ ಸ್ಥಾನ, ಗ್ಯಾರಂಟಿ ಯೋಜನೆಯ ರಾಜ್ಯಾಧ್ಯಕ್ಷ ಸ್ಥಾನ ಹಾಗೂ ನಗರಾಭಿವೃದ್ಧಿ ಖಾತೆಯನ್ನು ವಹಿಸಿಕೊಂಡಿರುವುದು ಕುರುಬ ಸಮುದಾಯದವರು ಅಷ್ಟೇ ಅಲ್ಲ ದಾವಣಗೆರೆ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸ್ಥಾನವನ್ನು ಸಹ ಕುರುಬ ಸಮುದಾಯಕ್ಕೆ ನೀಡಲಾಗಿದೆ ಇದನ್ನು ನಾವೇರೂ ಮರೆಯಬಾರದು ಎಂದರು.

ಕಾಂಗ್ರೆಸ್ ಪಕ್ಷ ಕುರುಬ ಸಮುದಾಯಕ್ಕೆ ಸಾಕಷ್ಟು ಅನುಕೂಲ ಕಲ್ಪಿಸಿದ್ದು, ಇದನ್ನು ಪ್ರತಿಯೊಬ್ಬರು ಮನಸ್ಸಿನಲ್ಲಿಟ್ಟು ಕೊಂಡು ಮೇ.7 ರಂದು ಕಾಂಗ್ರೆಸ್ ಪಕ್ಷದ ಹಸ್ತ ಗುರುತಿಗೆ ಮತ ಚಲಾಯಿಸುವ ಮೂಲಕ ಡಾ|| ಪ್ರಭಾ ಮಲ್ಲಿಕಾರ್ಜುನ್ ಅವರನ್ನು ಲೋಕಸಭೆಗೆ ಕಳುಹಿಸಬೇಕೆಂದು ಕರೆ ನೀಡಿದರು.

ಕಾಂಗ್ರೆಸ್ ಸರ್ಕಾರ ಅಧಿಕಾರಿಕ್ಕೆ ಬಂದ ತಕ್ಷಣ ಐದೂ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ಇಂದು ಹೊನ್ನಾಳಿ ವಿಧಾನಸಭಾ ಕ್ಷೇತ್ರವೊಂದಕ್ಕೆ ಮಾರ್ಚ್ ಅಂತ್ಯಕ್ಕೆ ಸುಮಾರು ರೂ.128 ಕೋಟಿಯಷ್ಟು ಹಣವನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆ ಎಂದು ಹೇಳಿದರು.

ಇನ್ನು ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ 'ಪಂಚ ನ್ಯಾಯ ಪಚ್ಚೀಸ್ ಗ್ಯಾರೆಂಟಿ' ಭರವಸೆಗಳನ್ನು ನೀಡಲಾಗಿದ್ದು, ಯುವ ನ್ಯಾಯದಡಿ ಯುವಕರಿಗೆ ಉದ್ಯೋಗ, ಮಹಿಳಾ ನ್ಯಾಯದಡಿ ಪ್ರತಿ ಮಹಿಳೆಗೆ 1 ಲಕ್ಷ ರೂ., ರೈತ ನ್ಯಾಯದಡಿ ಸ್ವಾಮಿನಾಥನ್ ಆಯೋಗವನ್ನು ಜಾರಿಗೊಳಿಸುವುದು, ನರೇಗಾ ಕೂಲಿ ಹಣವನ್ನು ರೂ. 400 ಕ್ಕೆ ಹೆಚ್ಚಿಸಲಾಗುವುದು ಸೇರಿದಂತೆ ಹಲವು ಯೋಜನೆಗಳನ್ನು ಪ್ರಣಾಳಿಕೆಯಲ್ಲಿ ಘೋಷಿಸಲಾಗಿದ್ದು, ಅದರಂತೆ ನಾವುಗಳು ಜಾರಿಗೆ ತರುತ್ತೇವೆ ಎಂದರು.

ದಾವಣಗೆರೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಡಾ|| ಪ್ರಭಾ ಮಲ್ಲಿಕಾರ್ಜುನ್, ಶಾಸಕ ಡಿ.ಜಿ.ಶಾಂತನಗೌಡ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಹೆಚ್. ಬಿ.ಮಂಜಪ್ಪ ಮಾತನಾಡಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಿವಯೋಗಿ, ಆರ್.ನಾಗಪ್ಪ, ಡಿ.ಜಿ.ವಿಶ್ವನಾಥ್, ಶೀಲಾ ಗದಿಗೇಶ್ ಸೇರಿದಂತೆ ಅನೇಕ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಅಭ್ಯರ್ಥಿ ಡಾ. ಪ್ರಭಾ ಅವರಿಗೆ ಎರಡು ಲಕ್ಷ ದೇಣಿಗೆ ನೀಡಿದ ಇಂಜಿನಿಯರ್



ನ್ಯಾಮತಿ, ಮೇ 1 - ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಡಾ. ಪ್ರಭಾ ಮಲ್ಲಿಕಾರ್ಜುನ್ ನ್ಯಾಮತಿ ಪಟ್ಟಣದಲ್ಲಿ ಬಹಿರಂಗ ಪ್ರಚಾರ ನಡೆಸುತ್ತಿದ್ದ ಸಂದರ್ಭದಲ್ಲಿ ಬೆಂಗಳೂರಿನಿಂದ ಬಂದು ಒಂದು ತಿಂಗಳಿನಿಂದ ಡಾ. ಪ್ರಭಾ ಮಲ್ಲಿಕಾರ್ಜುನ್ ಪರವಾಗಿ ಚುನಾವಣೆ ಪ್ರಚಾರ ನಡೆಸುತ್ತಿದ್ದ ಹೊನ್ನಾಳಿ ತಾಲ್ಲೂಕಿನ ಸುಂಕದಕಟ್ಟೆ ಗ್ರಾಮದ ಇಂಜಿನಿಯರ್ ಯುವಕ ರಮೇಶ್ ಎರಡು ಲಕ್ಷ ರೂ.ಗಳನ್ನು ದೇಣಿಗೆಯಾಗಿ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರಿಗೆ ನೀಡಿದರು.

ನಂತರ ಮಾತನಾಡಿದ ರಮೇಶ್, ಸಾಮಾಜಿಕ ಜಾಲತಾಣದಲ್ಲಿ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಸಾಮಾಜಿಕ ಕಾರ್ಯಗಳ ಬಗ್ಗೆ ನೋಡಿದ್ದು, ಸದಾ ಬಡವರ ಬಗ್ಗೆ ಮಿಡಿಯುವ ತಾಯಿ ಹೃದಯದ ಇವರು ಚುನಾವಣೆಯಲ್ಲಿ ಗೆದ್ದು ಸಮಾಜ ಸೇವೆ ಮಾಡಬೇಕು ಎನ್ನುವ ಉದ್ದೇಶದಿಂದ ಬೆಂಗಳೂರಿನಿಂದ ಬಂದು ಕಳೆದ ಒಂದು ತಿಂಗಳಿನಿಂದ ಕ್ಷೇತ್ರದಲ್ಲಿ ಚುನಾವಣಾ ಪ್ರಚಾರ ನಡೆಸುತ್ತಿದ್ದು, ಇದೇ ಮೊದಲ ಬಾರಿ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರನ್ನು ನೇರವಾಗಿ ಭೇಟಿ ಮಾಡಿದ್ದಾಗಿ, ಹರ್ಷ ವ್ಯಕ್ತಪಡಿಸಿದರು. ವಿದ್ಯಾವಂತ ಯುವಕರು ಇನ್ನು ಹೆಚ್ಚಿನ ಸಂಖ್ಯೆಯಲ್ಲಿ ಅವರ ಬೆಂಬಲಕ್ಕೆ ನಿಂತು ಅವರ ಸಮಾಜ ಸೇವೆಯಲ್ಲಿ ಕೈಜೋಡಿಸಲು ಅವರು ಮನವಿ ಮಾಡಿದರು.

## ನಗರದಲ್ಲಿ ಇಂದು ವಿದ್ಯುತ್ ವ್ಯತ್ಯಯ

ಎಸ್.ಎಸ್. ಬಡಾವಣೆ 'ಎ' ಮತ್ತು 'ಬಿ' ಬ್ಲಾಕ್, ಶಾಂತಿ ನಗರ, ಬಸವೇಶ್ವರ ಬಡಾವಣೆ, ಬಾಪೂಜಿ ನಗರ, ಮಹಾಲಕ್ಷ್ಮಿ ಬಡಾವಣೆ, ಎಸ್.ಎಸ್ ಲೇಔಟ್ ಎ. ಬ್ಲಾಕ್, ಕುವೆಂಪು ನಗರ, ಸಿದ್ದವೀರಪ್ಪ ಬಡಾವಣೆ, ಎಂ.ಸಿ.ಸಿ ಬಿ.ಬ್ಲಾಕ್, ಬಿ.ಐ.ಇ.ಟಿ ರಸ್ತೆ, ಗ್ಲಾಸ್‌ಹೌಸ್ ಏರಿಯಾ, ಲಕ್ಷ್ಮಿ ಫ್ಲೋರ್ ಮಿಲ್, ನಿಜಲಿಂಗಪ್ಪ ಬಡಾವಣೆ, ಯಲ್ಲಮ್ಮ ನಗರ, ವಿನೋಬನಗರ 4 ನೇ ಮೇನ್, 3ನೇ ಮೇನ್, ದೇವರಾಜ ಅರಸು ಲೇಔಟ್ 'ಎ' ಬ್ಲಾಕ್, ವಿನಾಯಕ ನಗರ, ಸಂಗೊಳ್ಳಿ ರಾಯಣ್ಣ ನಗರ, ಶಾಮನೂರು ರಸ್ತೆ, ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪ, ಸಿ.ಜಿ. ಆಸ್ಪತ್ರೆ, ಬಾಪೂಜಿ ಆಸ್ಪತ್ರೆ, ಡೆಂಟಲ್ ಕಾಲೇಜ್ ರೋಡ್. ಬಾಪೂಜಿ ಆಸ್ಪತ್ರೆ ರಸ್ತೆ, ಬಾಪೂಜಿ ಬ್ಯಾಂಕ್ ಹದಡಿ ರೋಡ್ ಮತ್ತು ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಇಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 3 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

## ಸೈನಿಕ ಹನುಮಂತಪ್ಪ ಇಂದು ವಾಪಸ್ ಸ್ವಗ್ರಾಮಕ್ಕೆ



ಭಾರತೀಯ ಭೂಸೇನೆಯಲ್ಲಿ ಸೈನಿಕರಾಗಿ 17 ವರ್ಷಗಳ ಕಾಲ ದೇಶ ರಕ್ಷಣೆ ಮಾಡಿ, ನಿವೃತ್ತರಾಗಿರುವ ಹರಿಹರ ತಾಲ್ಲೂಕು ಹರಳಹಳ್ಳಿಯ ಹನಮಂತಪ್ಪ ಡಿ.ಹೆಚ್. ಅವರು ಇಂದು ತಮ್ಮ ಸ್ವಗ್ರಾಮಕ್ಕೆ ಆಗಮಿಸುತ್ತಿದ್ದಾರೆ.

ಮಧ್ಯಾಹ್ನ 3 ಕ್ಕೆ ಹರಳಹಳ್ಳಿ ಗ್ರಾಮಸ್ಥರಿಂದ ಮಲೇಬೆನ್ನೂರು ಸರ್ಕಾರಿ ಆಸ್ಪತ್ರೆಯಿಂದ ಪಿ. ಡಬ್ಲ್ಯೂಡಿ ಕಛೇರಿವರೆಗೂ ಹಾಗೂ ಹರಳ ಹಳ್ಳಿ ಬಸ್ ನಿಲ್ದಾಣದಿಂದ ಶ್ರೀ ಆಂಜನೇಯ ದೇವಸ್ಥಾನದವರೆಗೂ ಮೆರವಣಿಗೆ ಮೂಲಕ ಸ್ವಾಗತಿಸಲಾಗುತ್ತದೆ. ನಂತರ ಸಂಜೆ 5ಕ್ಕೆ ಹರಳಹಳ್ಳಿ ಗ್ರಾಮಸ್ಥರಿಂದ ಗೌರವ ಸಮರ್ಪಣೆ ಕಾರ್ಯಕ್ರಮ ನಡೆಯುವುದು.

## ಚುನಾವಣಾ ಆಯೋಗ ಛೀಮಾರಿ

ನವದೆಹಲಿ, ಮೇ 1 – ಕಾಂಗ್ರೆಸ್ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡಿದ್ದ ಭಾರತ ರಾಷ್ಟ್ರ ಸಮಿತಿ ಅಧ್ಯಕ್ಷ ಕೆ. ಚಂದ್ರಶೇಖರ ರಾವ್ ಅವರಿಗೆ ಛೀಮಾರಿ ಹಾಕಿರುವ ಚುನಾವಣಾ ಆಯೋಗ, 48 ಗಂಟೆಗಳ ಕಾಲ ಪ್ರಚಾರ ಮಾಡದಂತೆ ನಿರ್ಬಂಧಿಸಿದೆ.ಏ. 5ರಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡುವಾಗ ರಾವ್ ಚುನಾವಣಾ ನೀತಿ ಸಂಹಿತೆ ಉಲ್ಲಂಘಿಸಿದ್ದಾರೆ ಎಂದು ಆಯೋಗದ ಆದೇಶದಲ್ಲಿ ತಿಳಿಸಲಾಗಿದೆ.

# ಬೊಮ್ಮಾಯಿ ಗೆಲ್ಲಿಸಿ, ದೆಹಲಿಗೆ ಕಳಿಸಿ ರಾಣೇಬೆನ್ನೂರಿನಲ್ಲಿ ಅಮೀತ್ ಷಾ ಮನವಿ



ರಾಣೇಬೆನ್ನೂರು, ಮೇ 1 - ಭಾರತವನ್ನ ಅತ್ಯದ್ಭುತವಾಗಿ ಅಭಿವೃದ್ಧಿ ಪಡಿಸಿ ಜಗತ್ತಿನಲ್ಲಿಯೇ ಉನ್ನತ ಸ್ಥಾನಕ್ಕೆ ಕೊಂಡೊಯ್ಯಲಿರುವ ಪ್ರದಾನಿ ನರೇಂದ್ರ ಮೋದಿ ಅವರಿಗೆ ಬಸವರಾಜ ಬೊಮ್ಮಾಯಿ ಅವರ ಅವಶ್ಯಕತೆ ಇದೆ. ಅವರನ್ನ ದೆಹಲಿಗೆ ಕಳಿಸಿರಿ ಎಂದು ಕೇಂದ್ರ ಗೃಹ ಸಚಿವ ಅಮೀತ್ ಶಾ ರಾಣೇಬೆನ್ನೂರು ಜನತೆಗೆ ಮನವಿ ಮಾಡಿದರು.

ಅವರು ಇಂದು ನಗರದಲ್ಲಿ ರೋಡ್ ಶೋ ನಡೆಸಿ ಗದಗ-ಹಾವೇರಿ ಲೋಕಸಭಾ ಚುನಾವಣೆಯ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಮತಯಾಚಿಸಿದರು. ಮಂತ್ರಿಯಾಗಿ, ಮುಖ್ಯಮಂತ್ರಿಯಾಗಿ ಬಸವರಾಜ ಬೊಮ್ಮಾಯಿ ರಾಜ್ಯದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನ ಮಾಡಿದ್ದಾರೆ. ಅವರೊಬ್ಬ ಜನಪ್ರೀಯ ಮುಖಂಡರಾಗಿದ್ದಾರೆ. ಅವರ ಸೇವೆ ದೇಶಕ್ಕೆ ಬೇಕಿದೆ ಕಾರಣ ಅವರನ್ನ ಲೋಕಸಭೆ ಸದಸ್ಯರನ್ನ ಮಾಡುತ್ತೀರಿ ಎನ್ನುವ ನಂಬುಗೆ ಮೋದಿ ಅವರದಾಗಿದೆ ಅವರಿಗೆ ಮತನೀಡಿರಿ ಎಂದು ಅಮಿತ್ ಶಾ ಹೇಳಿದರು.

ಕುರುಬಗೇರಿ ಕ್ರಾಸ್ ನಿಂದ ಪಕ್ಷದ ತೆರೆದ ವಾಹನದಲ್ಲಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ, ಜಿಲ್ಲಾದ್ಯಕ್ಷ ಅರುಣ ಪೂಜಾರ, ಮಾಜಿ ಸಚಿವ ಬಿ.ಸಿ.ಪಾಟೀಲ, ತಾಲ್ಲೂಕ ಅದ್ಯಕ್ಷ ಪರಮೇಶ ಗೂಳಣ್ಣನವರ ಮತ್ತಿತರ ಮುಖಂಡರ ಜೊತೆ ರೋಡ್ ಶೋ ನಡೆಸಿದ ಅಮಿತ್ ಶಾ ಅಶೋಕ ಸರ್ಕಲ್ ನಲ್ಲಿ ನೆರೆದಿದ್ದ ಜನರಮ್ನ ಉದ್ಧೇಶಿಸಿ ಮಾತನಾಡಿದರು.ರಸ್ತೆ ಉದ್ದಕ್ಕೂ ಸಾವಿರಾರು ಜನರು ನೆರೆದಿದ್ದರು.

# ಭೋವಿ ಸಮಾಜದ ಜಿಲ್ಲಾಧ್ಯಕ್ಷ ಶ್ರೀನಿವಾಸ್, ಮುಖಂಡ ಅಂಜನಿ ಬಿಜೆಪಿಗೆ ಸೇರ್ಪಡೆ



ದಾವಣಗೆರೆ, ಮೇ 1- ಭೋವಿ ಸಮಾಜದ ಜಿಲ್ಲಾಧ್ಯಕ್ಷ ಶ್ರೀನಿವಾಸ್ ಹಾಗೂ ಭೋವಿ ಸಮಾಜದ ಮುಖಂಡ ಅಂಜನಿ ತಮ್ಮ ಅಪಾರ ಬೆಂಬಲಿಗರ ಜೊತೆ ಬಿಜೆಪಿ ಸೇರ್ಪಡೆಗೊಂಡರು.

ಈ ಸಂದರ್ಭದಲ್ಲಿ ಸಂಸದ ಜಿ.ಎಂ.ಸಿದ್ದೇಶ್ವರ, ಮಹಾನಗರ ಪಾಲಿಕೆ ಸದಸ್ಯ ಆರ್.ಶಿವಾನಂದ್, ಎಂಎಲ್‌ಸಿ ರವಿಕುಮಾರ್, ಎಸ್ಟಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ಶ್ರೀನಿವಾಸ್ ದಾಸಕರಿಯಪ್ಪ, ಪಾಲಿಕೆ ವಿರೋಧ ಪಕ್ಷದ ನಾಯಕ ಪ್ರಸನ್ನ ಕುಮಾರ್, ದಾವಣಗೆರೆ ತಾಲ್ಲೂಕು ಅಧ್ಯಕ್ಷ ಸುರೇಶ್ ಬುಳ್ಳಾಪುರ, ಜಗಳೂರು ತಾಲ್ಲೂಕು ಅಧ್ಯಕ್ಷ ಚೌಡೇಶ್, ಯುವ ಮೋರ್ಚಾ ಅಧ್ಯಕ್ಷ ಆಂಜನೇಯ, ಮಂಜುನಾಥ, ದಶರಥ, ಶ್ರೀನಿವಾಸ್, ಮೋಹನ್, ಶಿವು, ನಾಗಣ್ಣ, ವೆಂಕಟೇಶ್, ರಮೇಶ್, ರಾಜು ಬೆಂಚಿಕಟ್ಟೆ ಮತ್ತಿತರರು ಇದ್ದರು.




SPARSH HOSPITAL
THE TOUCH OF LIFE

ನಿಮ್ಮ ಕಾಲುಗಳ ಮೇಲಿನ ಕಾಳಜಿ ಕಡಿಮೆಯಾಗದಿರಲಿ

ಸ್ಪರ್ಶ್ ಆಸ್ಪತ್ರೆ

ಉಬ್ಬಿರುವ ರಕ್ತನಾಳಗಳ ಚಿಕಿತ್ಸಾ ಕ್ಲಿನಿಕ್

ಡಾ|| ನವೀನ್ ಸಿ
MD (RD), DNB (RD), DM (NIIR), MNAMS
ಸಲಹೆಗಾರ – ಇಂಟರ್ವೆನ್ಷನಲ್ ರೇಡಿಯಾಲಜಿ
ಸ್ಪರ್ಶ್ ಆಸ್ಪತ್ರೆ, ಯಶವಂತಪುರ

ಈ ಕ್ಲಿನಿಕ್‌ಗೆ ಯಾರು ಭೇಟಿ ನೀಡಬಹುದು?

ಕಾಲಿನಲ್ಲಿ ನೋವು । ರಕ್ತನಾಳದ ಊತ ಕಾಣಿಸಿಕೊಂಡಲ್ಲಿ । ಕಪ್ಪು ಚುಕ್ಕೆಗಳು । ತುರಿಕೆ । ವಾಸಿಯಾಗದ ನರದ ಹುಣ್ಣು । ಆಯಾಸ ಮತ್ತು ಹೆಚ್ಚಿನ ತೂಕವಿದ್ದವರು

ಎಂಡೋವ್ಯಾಸ್ಕುಲಾರ್ ವೈದ್ಯರೊಂದಿಗೆ ಸಮಾಲೋಚನೆ ₹ 300/-*

3ನೇ ಏಪ್ರಿಲ್ 2024 ಪ್ರತಿ ತಿಂಗಳು 1ನೇ ಬುಧವಾರ ಲಭ್ಯವಿದೆ

ಸಮಯ: ಬೆಳಿಗ್ಗೆ 11 ರಿಂದ ಸಂಜೆ 4 ರವರೆಗೆ

ಹೊರ ರೋಗಿಗಳ ಕ್ಲಿನಿಕ್ ವಿಳಾಸ: ಎಸ್. ಎಸ್. ಸ್ಪೆಷಾಲಿಟಿ ಕ್ಲಿನಿಕ್, ಮೋದಿ ಕಾಂಪೌಂಡ್, ಎಂ.ಸಿ.ಸಿ. 'ಎ' ಬ್ಲಾಕ್, ಮೋತಿ ವೀರಪ್ಪ ಕಾಲೇಜು ಹತ್ತಿರ, ದಾವಣಗೆರೆ – 577 002

ನೋಂದಣಿಗಾಗಿ ಕರೆಮಾಡಿ: +91 99800 33277

*T & C Apply


## ಬಿ.ಕಲಪನಹಳ್ಳಿ ಗ್ರಾಮ ಪಂಚಾಯ್ತಿ ಅಧ್ಯಕ್ಷರಾದ ಕೆ.ಎಂ. ರೇವಣಸಿದ್ದಪ್ಪನವರ ಮಾತೃಶ್ರೀ

# ಮುದಕಪ್ಪ ಶ್ರೀಮತಿ ಸಿದ್ದಮ್ಮ ನಿಧನ



ದಾವಣಗೆರೆ ತಾಲ್ಲೂಕು, ಜಿಲ್ಲೆ ಬಿ. ಕಲಪನಹಳ್ಳಿ ಗ್ರಾಮದ ವಾಸಿ

ಮುದಕಪ್ಪ ಪತ್ರಿಬಸಪ್ಪನವರ ಧರ್ಮಪತ್ನಿ

## ಶ್ರೀಮತಿ ಮುದಕಪ್ಪರ ಸಿದ್ದಮ್ಮ

ಇವರು ದಿನಾಂಕ : 01.05.2024ರ ಬುಧವಾರ ಮಧ್ಯಾಹ್ನ 1.15ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 82 ವರ್ಷ ವಯಸ್ಸಾಗಿತ್ತು. ಮೃತರು ಪತಿ, ಇಬ್ಬರು ಪುತ್ರರು ಹಾಗೂ ಓರ್ವ ಪುತ್ರಿ, ಅಳಿಯಂದಿರು, ಸೊಸೆಯಂದಿರು, ಸಹೋದರ-ಸಹೋದರಿಯರು, ಮೊಮ್ಮಕ್ಕಳು, ಮರಿಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯು ದಿನಾಂಕ : 02.05.2024ರ ಗುರುವಾರ ಬೆಳಿಗ್ಗೆ 10.00 ಗಂಟೆಗೆ ಸ್ವ-ಗ್ರಾಮ, ದಾವಣಗೆರೆ ತಾಲ್ಲೂಕು ಬಿ. ಕಲಪನಹಳ್ಳಿ ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಲಿದೆ.

ದುಃಖತಪ್ತ ಕುಟುಂಬ ವರ್ಗ

ಫೋ. : 99641 25682, 88617 57079

KA/SK/DVG-028/2024-2026. O/P @ B.V. Nagar P.O. **JANATHAVANI -** Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas